VOLUME: 16 | 15 APRIL 2026 | ಬುಧವಾರ | RS: 2 | PAGE: 06 ISSUE: 72 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ಸ್ಯಾಂಡಲ್‌ವುಡ್ ಕ್ವೀನ್ ರಮ್ಯಾ ಪೋಸ್ಟ್‌ಗೆ ಅಶ್ಲೀಲ ಕಾಮೆಂಟ್ ಮಾಡಿದ ಪ್ರಕರಣ ಮತ್ತೆ ಮುನ್ನೆಲೆಗೆ ಬಂದಿದೆ. ಈಗಾಗಲೇ 14 ಆರೋಪಿಗಳನ್ನ ಬಂಧಿಸಿದ ಚಾರ್ಜ್‌ಶೀಟ್ ಸಲ್ಲಿಕೆ ಮಾಡಿದ್ದ ಸಿಸಿಬಿ ಪೊಲೀಸರು, ಇನ್ನುಳಿದ 29 ಆರೋಪಿಗಳ ಬಂಧನಕ್ಕೆ ಬಲೆ ಬೀಸಿದ್ದಾರೆ.



BHARATHA SARATHI
KANNADA DAILY NEWS PAPER
CALL 9740160669
# ಭಾರತ ಸಾರಥಿ
RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ
prabhavaa.com



ಸಂಪಾದಕ
ಗಂಡಸಿ ಸದಾನಂದಸ್ವಾಮಿ



## ದಿಲ್ಲಿಯಲ್ಲೇ ಬೀಡುಬಿಟ್ಟ ಕೈನ ಹಿರಿಯರು

ನವದೆಹಲಿ: ಸಚಿವ ಸ್ಥಾನದ ಮೇಲೆ ಕಣ್ಣಿಟ್ಟು ದೆಹಲಿಗೆ ತೆರಳಿರುವ ಕಾಂಗ್ರೆಸ್ ಪಕ್ಷದ ಹಿರಿಯ ಶಾಸಕರು ಮೇ 15ರೊಳಗೆ ಸಂಪುಟ ಪುನರ್ ರಚನೆ ಪ್ರಕ್ರಿಯೆ ನಡೆಸಬೇಕು ಎಂದು ಪಟ್ಟು ಹಿಡಿದಿದ್ದು, ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ. ಸಿ. ವೇಣುಗೋಪಾಲ್, ಪಕ್ಷದ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಅವರನ್ನು ಭೇಟಿಯಾಗದೆ ಕರ್ನಾಟಕಕ್ಕೆ ವಾಪಸ್ ಆಗಲ್ಲ ಎಂದು ಪಟ್ಟು ಹಿಡಿದಿದ್ದಾರೆ.

ರಾಷ್ಟ್ರ ರಾಜಧಾನಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಹಿರಿಯ ಕಾಂಗ್ರೆಸ್ ಶಾಸಕ ಅಶೋಕ್ ಪಟ್ಟಣ್, ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ ಒಪ್ಪಿಗೆ ಪಡೆದು ದೆಹಲಿಗೆ ಬಂದಿದ್ದು, ಮತ್ತಷ್ಟು ಶಾಸಕರು ದೆಹಲಿಗೆ ಬರುವ ಸಾಧ್ಯತೆಯಿದೆ. ನಾಳೆ ವೇಣುಗೋಪಾಲ್ ಅವರನ್ನು ಭೇಟಿಯಾಗದೆ ಬೆಂಗಳೂರಿಗೆ ವಾಪಸ್ ಆಗಲ್ಲ ಎಂದು ತಿಳಿಸಿದರು.

ಈ ಮಧ್ಯೆ ಕೊಪ್ಪಳದಲ್ಲಿ ಮಾತನಾಡಿದ ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರೂ ಆದ ಶಾಸಕ ಬಸವರಾಜ ರಾಯರೆಡ್ಡಿ, 25 ಸಚಿವರನ್ನು ತೆಗೆದು ಹೊಸಬರಿಗೆ ಅವಕಾಶ ನೀಡಬೇಕು ಎಂದು ಒತ್ತಾಯಿಸಿದ್ದಾರೆ. ಹೊಸಬರಿಗೆ ಅವಕಾಶ ಕೊಟ್ಟರೆ ಅವರಿಗೂ ಅನುಭವವಾಗುತ್ತದೆ. ಇರುವವರೇ ಕಾಯಂ ಆಗಿ ಇರಬೇಕು ಎಂದರೆ ಹೇಗೆ ಸಾಧ್ಯವಾಗುತ್ತದೆ. ಹೊಸಬರು ಅವಕಾಶ ಕೇಳುವುದರಲ್ಲಿ ತಪ್ಪೇನಿದೆ ಎಂದು ಪ್ರಶ್ನಿಸಿದರು.

ನಾನು ಹೆಚ್ಚು ಬಾರಿ ಗೆದ್ದು ಶಾಸಕನಾಗಿದ್ದರೂ ಸಚಿವ ಸ್ಥಾನ ಕೊಟ್ಟಿಲ್ಲ. ಆರ್ಥಿಕ ಸಲಹೆಗಾರ ಹುದ್ದೆ ಕೊಟ್ಟಿದ್ದಾರೆ. ಆದರೆ ಈ ಹುದ್ದೆಯಿಂದ ಮುಖ್ಯಮಂತ್ರಿ ಜೊತೆಗೆ ಚರ್ಚಿಸಿ ಉತ್ತಮ ಬಜೆಟ್ ಕೊಡಬಹುದೇ ವಿನ: ಯಾವುದೇ ಅಧಿಕಾರ ಇರಲ್ಲ ಎಂದು ನಿರಾಸೆ ವ್ಯಕ್ತಪಡಿಸಿದರು.

## ಬಾಯ್ಲರ್ ಸ್ಫೋಟ: 9 ಬಲಿ

ರಾಯ್ಪುರ: ಛತ್ತೀಸ್‌ಗಢದ ಶಕ್ತಿ ಜಿಲ್ಲೆಯ ವೇದಾಂತ ವಿದ್ಯುತ್ ಸ್ಥಾವರದಲ್ಲಿ ಮಂಗಳವಾರ ಮಧ್ಯಾಹ್ನ ಬಾಯ್ಲರ್ ಸ್ಫೋಟಗೊಂಡ ಪರಿಣಾಮ 9 ಮಂದಿ ಕಾರ್ಮಿಕರು ಸಾವನ್ನಪ್ಪಿದ್ದು, 15 ಮಂದಿ ತೀವ್ರವಾಗಿ ಗಾಯಗೊಂಡಿದ್ದಾರೆ.

ದಾಬ್ರಾ ಪೊಲೀಸ್ ಠಾಣೆ ಪ್ರದೇಶದಲ್ಲಿ ಅವಘಡ ಸಂಭವಿಸಿದೆ. ಪೊಲೀಸ್ ವರಿಷ್ಠಾಧಿಕಾರಿ ಪ್ರಫುಲ್ ಠಾಕೂರ್ ಕಾರ್ಮಿಕರ ಸಾವನ್ನು ದೃಢಪಡಿಸಿದ್ದಾರೆ. ಗಾಯಗೊಂಡ ಕಾರ್ಮಿಕರಲ್ಲಿ ಅನೇಕರಿಗೆ ಗಂಭೀರವಾಗಿ ಸುಟ್ಟ ಗಾಯಗಳಾಗಿದೆ. ಇನ್ನೂ ಹಲವರ ಸ್ಥಿತಿ ಗಂಭೀರವಾಗಿದೆ ಎಂದು ವರದಿಗಳು ತಿಳಿಸಿವೆ.

ಸಿಂಘಿತಾರಿ ಗ್ರಾಮದಲ್ಲಿರುವ ವೇದಾಂತ ವಿದ್ಯುತ್ ಸ್ಥಾವರದಲ್ಲಿ ಎಂದಿನಂತೆ ಕಾರ್ಮಿಕರು ಕೆಲಸದಲ್ಲಿ ತೊಡಗಿದ್ದಾಗ ಮಧ್ಯಾಹ್ನ 2 ಗಂಟೆ ಸುಮಾರಿಗೆ ಬಾಯ್ಲರ್ ಇದ್ದಕ್ಕಿದ್ದಂತೆ ಸ್ಫೋಟಗೊಂಡಿದೆ. ಬಾಯ್ಲರ್ ಒಳಗೆ ಟ್ಯೂಬ್ ಛಿದ್ರಗೊಂಡಿದ್ದರಿಂದ ಸ್ಫೋಟ ಸಂಭವಿಸಿರಬಹುದು ಎಂದು ಶಂಕಿಸಲಾಗಿದೆ.

ಘಟನೆಯ ಕುರಿತು ಮಾಹಿತಿ ದೊರೆತ ತಕ್ಷಣ ಪೊಲೀಸರು, ಅಗ್ನಿಶಾಮಕ ದಳದ ತಂಡಗಳು ಮತ್ತು ಹಿರಿಯ ಆಡಳಿತ ಅಧಿಕಾರಿಗಳು ಸ್ಥಳಕ್ಕೆ ಧಾವಿಸಿ ರಕ್ಷಣಾ ಕಾರ್ಯಾಚರಣೆಯಲ್ಲಿ ತೊಡಗಿದ್ದಾರೆ.

ಗಾಯಾಳುಗಳನ್ನು ಚಿಕಿತ್ಸೆಗಾಗಿ ಹತ್ತಿರದ ಆಸ್ಪತ್ರೆಗಳಿಗೆ ಸ್ಥಳಾಂತರಿಸಲಾಗಿದೆ. ಸ್ಫೋಟದ ನಿಖರವಾದ ಕಾರಣವನ್ನು ಕಂಡುಹಿಡಿಯಲು ತನಿಖೆ ನಡೆಸಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.



ಮಂಗಳವಾರ ಬೆಂಗಳೂರಿನಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಜಯಂತಿ ಪ್ರಧಾನ ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೋಲಾರ ಜಿಲ್ಲೆಯ ಹೋರಾಟಗಾರ ಮತ್ತು ದಲಿತ ಮುಖಂಡ ಸಿ.ಎಂ. ಮುನಿಯಪ್ಪ ಸೇರಿದಂತೆ ವಿವಿಧ ಸಾಧಕರನ್ನು ಸನ್ಮಾನಿಸಿದರು. ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಸಚಿವ ಹೆಚ್.ಸಿ. ಮಹದೇವಪ್ಪ, ಆಹಾರ ಸಚಿವ ಕೆ.ಹೆಚ್.ಮುನಿಯಪ್ಪ, ಮುಖ್ಯ ಕಾರ್ಯದರ್ಶಿ ಶ್ರೀಮತಿ ಶಾಲಿನಿ ರಜನೀಶ್ ಸೇರಿದಂತೆ ಹಲವರು ವೇದಿಕೆ ಮೇಲಿದ್ದರು.

## ಲೋಕಸಭೆ ಸ್ಥಾನಗಳು 850ಕ್ಕೆ ಏರಿಕೆ?

**ಈ ಪ್ರಸ್ತಾವನೆಯಡಿಯಲ್ಲಿ 815 ಸ್ಥಾನಗಳು ರಾಜ್ಯಗಳಿಗೆ ಮತ್ತು 35 ಕೇಂದ್ರಾಡಳಿತ ಪ್ರದೇಶಗಳಿಗೆ ಹೋಗಲಿದ್ದು, ಒಟ್ಟು ಬಲವನ್ನು 850ಕ್ಕೆ ಏರಿಸಲಾಗುವುದು. ಈ ಬದಲಾವಣೆಗಳು 2029ರ ಲೋಕಸಭಾ ಚುನಾವಣೆಯಿಂದ ಜಾರಿಗೆ ಬರುವ ನಿರೀಕ್ಷೆಯಿದೆ. ಮಹಿಳೆಯರಿಗೆ ಹಂಚಿಕೆಯಾಗುವ ಸ್ಥಾನಗಳನ್ನು ನಿರ್ಧರಿಸಲು ಡಿ-ಲಿಮಿಟೇಶನ್ ಆಯೋಗವನ್ನು ರಚಿಸ ಲಾಗುವುದು ಎಂದು ಮೂಲಗಳು ತಿಳಿಸಿವೆ. ನಾರಿ ಶಕ್ತಿ ವಂದನ ಅಧಿನಿಯಮವನ್ನು ಭಾರತೀಯ ಸಂಸತ್ ಸೆಪ್ಟೆಂಬರ್ 2023 ರಲ್ಲಿ ಅಂಗೀಕರಿಸಿತು.**

ನವದೆಹಲಿ: ಮಹಿಳಾ ಮೀಸಲಾತಿ ಮಸೂದೆಯನ್ನು ಜಾರಿಗೆ ತರಲು ವೇದಿಕೆ ಸಿದ್ಧವಾಗಿದೆ. ಕೇಂದ್ರ ಸರ್ಕಾರವು ಲೋಕಸಭೆಯಲ್ಲಿ ಸ್ಥಾನಗಳ ಸಂಖ್ಯೆಯನ್ನು 543ರಿಂದ 850ಕ್ಕೆ ಹೆಚ್ಚಿಸಲು ಪ್ರಸ್ತಾಪಿಸಿದೆ.

ಈ ವಿಸ್ತರಣೆಯು ನಾರಿ ಶಕ್ತಿ ವಂದನ ಅಧಿನಿಯಮ (ಮಹಿಳಾ ಮೀಸಲಾತಿ ಕಾಯ್ದೆ) ಅನುಷ್ಠಾನವನ್ನು ಜಾರಿಗೊಳಿಸುವ ಯೋಜನೆಯ ಭಾಗವಾಗಿದೆ. ಇದು ಕೆಳಮನೆ ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಮಹಿಳಾ ಮೀಸಲಾತಿಯನ್ನು ಜಾರಿಗೆ ತರುವ ಗುರಿಯನ್ನು ಹೊಂದಿದೆ. ಈ ಕಾಯ್ದೆ ಸದನದ ಸುಮಾರು ಮೂರನೇ ಒಂದು ಭಾಗದಷ್ಟು ಅಥವಾ 273 ಸ್ಥಾನಗಳನ್ನು ಮಹಿಳಾ ಶಾಸಕರಿಗೆ ಮೀಸಲಿಡಲು ಅವಕಾಶ ಕಲ್ಪಿಸುತ್ತದೆ.

ಮಹಿಳಾ ಮೀಸಲಾತಿ ಮಸೂದೆಯ ಜಾರಿಗೆ ಕೇಂದ್ರ ಸರ್ಕಾರವು ಏಪ್ರಿಲ್ 16ರಿಂದ 18ರವರೆಗೆ ಮೂರು ದಿನಗಳ ವಿಶೇಷ ಸಂಸತ್ ಅಧಿವೇಶನವನ್ನು ನಿಗದಿಪಡಿಸಿದೆ. ಮಸೂದೆಯ ಪ್ರತಿಯನ್ನು ಮಂಗಳವಾರ ಸಂಸದರೊಂದಿಗೆ ಹಂಚಿಕೊಳ್ಳಲಾಗಿದೆ.

ಈ ಪ್ರಸ್ತಾವನೆಯಡಿಯಲ್ಲಿ 815 ಸ್ಥಾನಗಳು ರಾಜ್ಯಗಳಿಗೆ ಮತ್ತು 35 ಕೇಂದ್ರಾಡಳಿತ ಪ್ರದೇಶಗಳಿಗೆ ಹೋಗಲಿದ್ದು, ಒಟ್ಟು ಬಲವನ್ನು 850ಕ್ಕೆ ಏರಿಸಲಾಗುವುದು. ಈ ಬದಲಾವಣೆಗಳು 2029ರ ಲೋಕಸಭಾ ಚುನಾವಣೆಯಿಂದ ಜಾರಿಗೆ ಬರುವ ನಿರೀಕ್ಷೆಯಿದೆ.

ಮಹಿಳೆಯರಿಗೆ ಹಂಚಿಕೆಯಾಗುವ ಸ್ಥಾನಗಳನ್ನು ನಿರ್ಧರಿಸಲು ಡಿ–ಲಿಮಿಟೇಶನ್ ಆಯೋಗವನ್ನು ರಚಿಸ ಲಾಗುವುದು ಎಂದು ಮೂಲಗಳು ತಿಳಿಸಿವೆ. ನಾರಿ ಶಕ್ತಿ ವಂದನ ಅಧಿನಿಯಮವನ್ನು ಭಾರತೀಯ ಸಂಸತ್ ಸೆಪ್ಟೆಂಬರ್ 2023 ರಲ್ಲಿ ಅಂಗೀಕರಿಸಿತು. ಇದನ್ನು ಸೆಪ್ಟೆಂಬರ್ 19, 2023ರಂದು ಲೋಕಸಭೆಯಲ್ಲಿ ಸಂಸತ್ತಿನ ವಿಶೇಷ ಅಧಿವೇಶನದಲ್ಲಿ ಪರಿಚಯಿಸಲಾಯಿತು. ಸೆಪ್ಟೆಂಬರ್ 20, 2023ರಂದು 454 ಮತಗಳ ಪರವಾಗಿ ಮತ್ತು 2 ಮತಗಳ ವಿರುದ್ಧವಾಗಿ ಅಂಗೀಕರಿಸಲಾಯಿತು. ರಾಜ್ಯಸಭೆಯು ಸೆಪ್ಟೆಂಬರ್ 21, 2023ರಂದು 214 ಮತಗಳೊಂದಿಗೆ ಸರ್ವಾನುಮತದಿಂದ ಈ ಮಸೂದೆಯನ್ನು ಅಂಗೀಕರಿಸಿತ್ತು.

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಸೆಪ್ಟೆಂಬರ್ 28, 2023ರಂದು ಇದನ್ನು ಕಾನೂನಾಗಿ ಪರಿವರ್ತಿಸಲು ಸಹಿ ಮಾಡಿದ್ದರು. ಇದರ ಪ್ರಕಾರ ಮಹಿಳೆಯರಿಗೆ 33% ಮೀಸಲಾತಿ ನೀಡಲಾಗಿದ್ದು, ಲೋಕಸಭೆ, ರಾಜ್ಯ ವಿಧಾನಸಭೆಗಳು ಮತ್ತು ದೆಹಲಿ ವಿಧಾನಸಭೆಯಲ್ಲಿ ಮಹಿಳೆಯರಿಗೆ ಎಲ್ಲಾ ಸ್ಥಾನಗಳಲ್ಲಿ ಮೂರನೇ ಒಂದು ಭಾಗವನ್ನು ಮೀಸಲಿಡಲಾಗಿದೆ.

## 7 ವರ್ಷಗಳಲ್ಲಿ ಇದೇ ಮೊದಲ ಬಾರಿಗೆ ಇರಾನ್‌ನಿಂದ ಕಚ್ಚಾ ತೈಲ ಖರೀದಿ

ಮುಂಬೈ: ತೈಲ ಸಂಸ್ಕರಣಾಗಾರರಿಗೆ ಕಳೆದ ತಿಂಗಳು ಅಮೆರಿಕ ನೀಡಿದ್ದ ತಾತ್ಕಾಲಿಕ ವಿನಾಯಿತಿ ಬಳಸಿಕೊಂಡು ಭಾರತ 7 ವರ್ಷಗಳಲ್ಲಿ ಇದೇ ಮೊದಲ ಬಾರಿಗೆ ಇರಾನ್‌ನಿಂದ ಕಚ್ಚಾ ತೈಲ ಖರೀದಿ ಮಾಡಿದೆ. ಇರಾನಿನ ಕಚ್ಚಾ ತೈಲ ತುಂಬಿದ 2 ಬೃಹತ್ ಟ್ಯಾಂಕರ್‌ಗಳು ಭಾರತದ ಬಂದರುಗಳನ್ನ ತಲುಪಿವೆ ಎಂದು ಹಡಗು ಟ್ರ್ಯಾಕಿಂಗ್ ದತ್ತಾಂಶ ತೋರಿಸಿದೆ ಎಂದು ವರದಿಯಾಗಿದೆ.

ವಿದೇಶಿ ಆಸ್ತಿ ನಿಯಂತ್ರಣ ಕಚೇರಿಯ ಪ್ರಕಾರ, ಕಳೆದ ಮಾರ್ಚ್ 20 ರಂದು ಅಥವಾ ಅದಕ್ಕೂ ಮುನ್ನ ಅನುಮೋದಿತ ಟ್ಯಾಂಕರ್‌ಗಳು ಸೇರಿದಂತೆ ಯಾವುದೇ ಹಡಗಿನಲ್ಲಿ ತುಂಬಿಸಿ ಏಪ್ರಿಲ್ 19ರ ಒಳಗೆ ಬಿಡುಗಡೆ ಮಾಡಲಾದ ತೈಲಕ್ಕೆ ಅಮೆರಿಕದ ವಿನಾಯಿತಿ ಅನ್ವಯಿಸುತ್ತದೆ. ಏಪ್ರಿಲ್ 19 ರಂದು ವಿನಾಯಿತಿ ಕೊನೆಗೊಳ್ಳುತ್ತದೆ.

ಹಡಗು ಟ್ರ್ಯಾಕಿಂಗ್ ದತ್ತಾಂಶದ ಪ್ರಕಾರ, ಇರಾನ್‌ನ ಧ್ವಜ ಹೊತ್ತ ಹಡಗು ಪಶ್ಚಿಮ ಭಾರತದ ಸಿಕ್ಕಾ ಬಂದರನ್ನು ತಲುಪಿದೆ. ಆದ್ರೆ ಕುರಾಕಾವೊ ಧ್ವಜ ಹೊತ್ತ 'ಜಯಾ' ಹಡಗು ಒಡಿಶಾದ ಪೂರ್ವ ಬಂದರಿನಲ್ಲಿದೆ ಎಂದು ತಿಳಿದುಬಂದಿದೆ. ಹಡಗು 2 ಮಿಲಿಯನ್ ಬ್ಯಾರೆಲ್ ತೈಲ ಹೊತ್ತುತಂದಿದೆ.

ವಿಶ್ವದ 3ನೇ ಅತಿದೊಡ್ಡ ತೈಲ ಆಮದುದಾರ ಮತ್ತು ಗ್ರಾಹಕ ಕೂಡ ಆಗಿರುವ ಭಾರತ ಕಚ್ಚಾ ತೈಲ ಖರೀದಿಸದಂತೆ ಅಮೆರಿಕ ಒತ್ತಡ ಹೇರಿತ್ತು. ಹಾಗಾಗಿ 2019ರ ಬಳಿಕ ಇರಾನ್‌ನಿಂದ ಭಾರತ ತೈಲ ಖರೀದಿ ಮಾಡಿಯೇ ಇರಲಿಲ್ಲ. ಆದ್ರೆ ಹಾರ್ಮುಜ್ ಜಲಸಂಧಿ ಮತ್ತು ಮಧ್ಯಪ್ರಾಚ್ಯದಲ್ಲಿ ಉಂಟಾದ ಬಿಕ್ಕಟ್ಟಿನ ನಂತರ ಅಮೆರಿಕ ಏ.19ರ ವರೆಗೆ ನೀಡಿದ ವಿನಾಯ್ತಿ ಬಳಸಿಕೊಂಡು ತೈಲ ಖರೀದಿ ಮಾಡಿದೆ.

ದೇಶದ ಪ್ರಮುಖ ತೈಲ ಸಂಸ್ಕರಣಾ ಕಂಪನಿಯಾದ ಇಂಡಿಯನ್ ಆಯಿಲ್ ಕಾರ್ಪ್ 'ಜಯಾ' ಹಡಗಿನಲ್ಲಿ ಬಂದ ತೈಲವನ್ನು ಖರೀದಿ ಮಾಡಿದೆ. ಇದರೊಂದಿಗೆ ವಿಶ್ವದ ಅತಿದೊಡ್ಡ ಸಂಸ್ಕರಣಾ ಘಟಕ ಹೊಂದಿರುವ ಭಾರತದ ರಿಲಯನ್ಸ್ ಇಂಡಸ್ಟ್ರೀಸ್ ಸಂಸ್ಥೆಗೂ ಸಹ ಇರಾನ್ ತೈಲ ಖರೀದಿಸಲು ಭಾರತ ಸರ್ಕಾರ ಅನುಮತಿ ನೀಡಿದೆ ಎಂದು ಮೂಲಗಳು ತಿಳಿಸಿವೆ.

## ಯುದ್ಧ ನಿಲ್ಲಿಸಲು 2ನೇ ಸುತ್ತಿನ ಪ್ರಸ್ತಾಪ..?

ಇಸ್ಲಾಮಾಬಾದ್: ಮಧ್ಯಪ್ರಾಚ್ಯ ಹಾಗೂ ಕೊಲ್ಲಿ ರಾಷ್ಟ್ರಗಳಲ್ಲಿ ನಡೆಯುತ್ತಿರುವ ಯುದ್ಧವನ್ನು ನಿಲ್ಲಿಸಲು ಇರಾನ್ ಮತ್ತು ಅಮೆರಿಕ ನಡುವೆ 2ನೇ ಸುತ್ತಿನ ಮಾತುಕತೆಗೆ ಪಾಕ್ ಪ್ರಸ್ತಾಪ ಇಟ್ಟಿದೆ. ಇಸ್ಲಾಮಾಬಾದ್‌ನಲ್ಲೇ 2ನೇ ಹಂತದ ಸಂಧಾನ ಸಭೆ ನಡೆಸಲು ಪಾಕಿಸ್ತಾನ ಕರೆ ನೀಡಿದೆ ಎಂದು ಪಾಕ್‌ನ ಉನ್ನತ ಅಧಿಕಾರಿಗಳು ತಿಳಿಸಿದ್ದಾರೆ.

ಇದೇ ಏಪ್ರಿಲ್ 11 ರಿಂದ ಇಸ್ಲಾಮಾಬಾದ್‌ನಲ್ಲಿ ಅಮೆರಿಕ ಮತ್ತು ಇರಾನ್ ನಿಯೋಗಗಳ ನಡುವೆ ಯುದ್ಧ ಕೊನೆಗೊಳಿಸಲು 21 ಗಂಟೆಗಳ ಮಾತುಕತೆ ನಡೆದಿತ್ತು. ಸಂಸದೀಯ ಸ್ಪೀಕರ್ ಮೊಹಮ್ಮದ್ ಬಘರ್ ಗಾಲಿಬಾಫ್ ನೇತೃತ್ವದ ಇರಾನಿನ ನಿಯೋಗವು, ಉಪಾಧ್ಯಕ್ಷ ಜೆಡಿ ವ್ಯಾನ್ಸ್, ಶ್ವೇತಭವನದ ರಾಯಭಾರಿ ಸ್ಟೀವ್ ವಿಟ್ಕಾಫ್ ಮತ್ತು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಅಳಿಯ ಜೇರೆಡ್ ಕುಶ್ನರ್ ಸೇರಿದಂತೆ ತಮ್ಮ ಅಮೆರಿಕದ ಸಹವರ್ತಿಗಳೊಂದಿಗೆ ಮಾತುಕತೆ ನಡೆಸಿತ್ತು. ಆದ್ರೆ 21 ಗಂಟೆಗಳ ಮಾತುಕತೆ ವಿಫಲವಾಯಿತು. ಇದರಿಂದ ಮುಖಭಂಗ ಅನುಭವಿಸಿದ ಪಾಕ್ ಮತ್ತೆ ತನ್ನ ಪ್ರತಿಷ್ಠೆ ಹೆಚ್ಚಿಸಿಕೊಳ್ಳಲು ಮಾತುಕತೆಗೆ ಆಹ್ವಾನಿಸಿದೆ.

ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕೂಡ ಇದಕ್ಕೆ ಪ್ರತಿಕ್ರಿಯಿಸಿದ್ದು, ಇರಾನ್ ನಮ್ಮ ಬೇಡಿಕೆಗಳನ್ನು ಸ್ವೀಕರಿಸಲು ಆಸಕ್ತಿ ತೋರಿಸಿದ್ರೆ ಮಾತ್ರ ಮಾತುಕತೆಗೆ ಬರುತ್ತೇವೆ ಎಂದು ಹೇಳಿದ್ದಾರೆ.

ಈಗಾಗಲೇ ಟ್ರಂಪ್ ಘೋಷಿಸಿರುವ ಕದನ ವಿರಾಮ ಸಮಯವು ಏ.21 ಕ್ಕೆ ಮುಕ್ತಾಯಗೊಳ್ಳಲಿದೆ. ಅಷ್ಟರಲ್ಲಿ 2ನೇ ಹಂತದ ಮಾತುಕತೆಗೆ ವೇದಿಕೆ ಕಲ್ಪಿಸಿ ಸಂಧಾನ ನಡೆಸಲು ಪಾಕಿಸ್ತಾನ ಹೆಣಗಾಡುತ್ತಿದೆ.

## ಚರ್ಚೆಗೆ ಗ್ರಾಸವಾಗಿದ್ದ ನಜೀರ್ ಅಹ್ಮದ್ ರಾಜೀನಾಮೆ

ಬೆಂಗಳೂರು: ರಾಜ್ಯ ರಾಜಕೀಯ ವಲಯದಲ್ಲಿ ದಿಢೀರ್ ಬೆಳವಣಿಗೆಯಾಗಿ ಮುಖ್ಯಮಂತ್ರಿ ರಾಜಕೀಯ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸುತ್ತಿದ್ದ ನಜೀರ್ ಅಹ್ಮದ್ ಅವರು ತಮ್ಮ ಹುದ್ದೆಗೆ ರಾಜೀನಾಮೆ ಸಲ್ಲಿಸಿದ್ದಾರೆ. ಈ ಬೆಳವಣಿಗೆ ಭಾರೀ ಚರ್ಚೆಗೆ ಕಾರಣವಾಗಿದೆ.

ನಜೀರ್ ಅಹ್ಮದ್ ಅವರು ಸಿಎಂ ರಾಜಕೀಯ ಕಾರ್ಯದರ್ಶಿ ಹುದ್ದೆಗೆ ರಾಜೀನಾಮೆ ನೀಡುವುದಾಗಿ ತಿಳಿಸಿ ಪತ್ರವನ್ನು ಸಿಎಂ ಸಿದ್ದರಾಮಯ್ಯನವರಿಗೆ ರವಾನಿಸಿದ್ದಾರೆ.

ಸೋಮವಾರ (ಏ.13) ರಂದು ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಅವರು ಸಿಎಂ ರಾಜಕೀಯ ಕಾರ್ಯದರ್ಶಿ ಸ್ಥಾನಕ್ಕೆ ರಾಜೀನಾಮೆ ಕೊಡುವಂತೆ ನಜೀರ್ ಅಹ್ಮದ್‌ಗೆ ಡೆಡ್‌ಲೈನ್ ನೀಡಿದ್ದರು. ಜೊತೆಗೆ ಸಂಜೆಯೊಳಗೆ ರಾಜೀನಾಮೆ ನೀಡಬೇಕೆಂದು ಸೂಚಿಸಿದ್ದರು.

ಒಂದು ವೇಳೆ ಸಂಜೆಯೊಳಗೆ ನಜೀರ್ ಅಹಮ್ಮದ್ ರಾಜೀನಾಮೆ ಕೊಡದಿದ್ದರೆ ಅವರನ್ನು ರಾಜಕೀಯ ಕಾರ್ಯದರ್ಶಿ ಸ್ಥಾನದಿಂದ ವಜಾ ಮಾಡಲು ಸಿದ್ದರಾಮಯ್ಯ ಅವರಿಗೆ ಸೂಚಿಸುವುದಾಗಿ ತಿಳಿಸಿದ್ದರು.

## 'ಅಂಬೇಡ್ಕರ್‌ರವರು ವಂಚಿತ ಮತ್ತು ದುರ್ಬಲ ವರ್ಗಗಳ ಉನ್ನತಿಗಾಗಿ ತಮ್ಮ ಜೀವನವನ್ನು ಮುಡಿಪಾಗಿಟ್ಟರು'

ನವದೆಹಲಿ: ಇಂದು ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ.ಬಾಬಾಸಾಹೇಬ್ ಭೀಮರಾವ್ ಅಂಬೇಡ್ಕರ್ ಅವರ 135ನೇ ಜನ್ಮ ಜಯಂತಿ. ಇದರ ಅಂಗವಾಗಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಪಿ.ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಗಣ್ಯರು ದೇಶದ ಜನತೆಗೆ ಶುಭಾಶಯ ಕೋರಿದ್ದಾರೆ.

ಗುಜರಾತ್‌ನ ಗಾಂಧಿನಗರದ ಲೋಕಭವನದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು.

ಭಾರತದ ಸಂವಿಧಾನ ಶಿಲ್ಪಿ ಮತ್ತು ಮಹಾನ್ ಸಮಾಜ ಸುಧಾರಕ ಬಾಬಾಸಾಹೇಬ್ ಡಾ.ಭೀಮರಾವ್ ಅಂಬೇಡ್ಕರ್ ಅವರ ಜಯಂತಿಯಂದು, ನಾನು ಅವರಿಗೆ ಗೌರವಯುತ ನಮನ ಸಲ್ಲಿಸುತ್ತೇನೆ. ಅಂಬೇಡ್ಕರ್ ಅವರು ನ್ಯಾಯಶಾಸ್ತ್ರಜ್ಞ, ಅರ್ಥಶಾಸ್ತ್ರಜ್ಞ, ಚಿಂತಕ, ಕಾನೂನು ವಿದ್ವಾಂಸ ಮತ್ತು ಸಮಾನತೆಯ ಸಾಮಾಜಿಕ ವ್ಯವಸ್ಥೆಯ ಪ್ರಬಲ ಪ್ರತಿಪಾದಕರಾಗಿದ್ದರು. ಅವರು ಸಮಾಜದ ವಂಚಿತ ಮತ್ತು ದುರ್ಬಲ ವರ್ಗಗಳ ಉನ್ನತಿಗಾಗಿ ತಮ್ಮ ಜೀವನವನ್ನು ಮುಡಿಪಾಗಿಟ್ಟರು ಎಂದು ಸ್ಮರಿಸಿದ್ದಾರೆ.





ಅಂಬೇಡ್ಕರ್ ಅವರು ಅಸಮಾನತೆಗಳನ್ನು ತೊಡೆದುಹಾಕುವ ಮಾರ್ಗವನ್ನು ತೋರಿಸಿದ್ದಲ್ಲದೆ, ಭಾರತದ ಪ್ರಜಾಪ್ರಭುತ್ವ ಮೌಲ್ಯಗಳು ಮತ್ತು ಸಾಂವಿಧಾನಿಕ ಹಕ್ಕುಗಳನ್ನು ಬಲಪಡಿಸುವಲ್ಲಿ ಪ್ರಮುಖ ಪಾತ್ರ ವಹಿಸಿದರು. ಮಹಿಳಾ ಶಿಕ್ಷಣ ಮತ್ತು ಅವರ ಹಕ್ಕುಗಳಿಗೆ ಆದ್ಯತೆ ನೀಡಿದರು. ಅವರ ಬಹುಮುಖಿ ಕೊಡುಗೆಗಳು ಭವಿಷ್ಯದ ಪೀಳಿಗೆಗಳು ದೇಶದ ಸೇವೆ ಮತ್ತು ಅಭಿವೃದ್ಧಿಯಲ್ಲಿ ಸಕ್ರಿಯ ಪಾತ್ರ ವಹಿಸಲು ಸ್ಫೂರ್ತಿ ನೀಡುತ್ತಲೇ ಇರುತ್ತವೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಎಕ್ಸ್ ಪೋಸ್ಟ್ ಮಾಡಿದ್ದಾರೆ.

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಉಪರಾಷ್ಟ್ರಪತಿ ಭವನದಲ್ಲಿ ಬಾಬಾಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು. ಬಾಬಾಸಾಹೇಬ್ ಅವರ ಜೀವನ ಮತ್ತು ಕೆಲಸವು ಸಮಾನತೆ, ಸ್ವಾತಂತ್ರ್ಯ ಮತ್ತು ಭ್ರಾತೃತ್ವದ ಆದರ್ಶಗಳಿಗೆ ಅಚಲ ಬದ್ಧತೆಗೆ ಸಾಕ್ಷಿಯಾಗಿದೆ. ಅವರ ದೃಷ್ಟಿಕೋನ ಮತ್ತು ನಿರಂತರ ಕೊಡುಗೆಗಳು ನಮ್ಮ ರಾಷ್ಟ್ರವನ್ನು ಹೆಚ್ಚು ನ್ಯಾಯಯುತ, ಎಲ್ಲರನ್ನೂ ಒಳಗೊಂಡ ಮತ್ತು ಸಮಾನ ಸಮಾಜದತ್ತ ಸಾಗಿಸಲು ಮಾರ್ಗದರ್ಶನ ನೀಡುತ್ತಲೇ ಇರುತ್ತವೆ. ಅವರ ಆದರ್ಶಗಳನ್ನು ಎತ್ತಿಹಿಡಿಯುವ ನಮ್ಮ ಸಂಕಲ್ಪವನ್ನು ನಾವು ಪುನರುಚ್ಚರಿಸೋಣ ಮತ್ತು ನಮ್ಮ ರಾಷ್ಟ್ರಕ್ಕಾಗಿ ಅವರು ಪಾಲಿಸಿದ ಆದರ್ಶಗಳನ್ನು ಸಾಕಾರಗೊಳಿಸಲು ಶ್ರಮಿಸೋಣ ಎಂದು ಹೇಳಿದ್ದಾರೆ.

ಡಾ.ಬಾಬಾಸಾಹೇಬ್ ಅಂಬೇಡ್ಕರ್ ಅವರ ಜನ್ಮ ವಾರ್ಷಿಕೋತ್ಸವದಂದು ಅವರಿಗೆ ನಮನಗಳು. ರಾಷ್ಟ್ರ ನಿರ್ಮಾಣದತ್ತ ಅವರ ಪ್ರಯತ್ನಗಳು ಬಹಳ ಪ್ರೇರಣಾದಾಯಕವಾಗಿವೆ. ಅವರ ಜೀವನ ಮತ್ತು ಕೆಲಸವು ಪೀಳಿಗೆಗೆ ನ್ಯಾಯಯುತ ಮತ್ತು ಪ್ರಗತಿಪರ ಸಮಾಜವನ್ನು ನಿರ್ಮಿಸಲು ಸ್ಫೂರ್ತಿ ನೀಡುತ್ತಲೇ ಇದೆ. ಡಾ.ಬಾಬಾಸಾಹೇಬ್ ಅಂಬೇಡ್ಕರ್ ಅವರ ವ್ಯಕ್ತಿತ್ವ ಮತ್ತು ಕೃತಿಗಳು ರಾಷ್ಟ್ರ ನಿರ್ಮಾಣಕ್ಕೆ ಸ್ಫೂರ್ತಿಯ ಮೂಲವಾಗಿ ಮುಂದುವರಿಯುತ್ತವೆ. ಇದು ನನ್ನದು, ಅದು ಇನ್ನೊಬ್ಬರದು ಎಂಬ ಕಲ್ಪನೆಯು ಸಂಕುಚಿತ ಮನಸ್ಸಿನ ಜನರದ್ದು, ಆದರೆ, ಉದಾತ್ತ ವ್ಯಕ್ತಿತ್ವ ಹೊಂದಿರುವವರಿಗೆ, ಇಡೀ ಜಗತ್ತು ಒಂದೇ ಕುಟುಂಬ ಎಂದು ಪ್ರಧಾನಿ ನರೇಂದ್ರ ಮೋದಿ ಎಕ್ಸ್ ಪೋಸ್ಟ್ ಮಾಡಿದ್ದಾರೆ.

ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಎಕ್ಸ್ ಪೋಸ್ಟ್ ಮಾಡಿ, ಬಾಬಾಸಾಹೇಬ್ ಡಾ.ಭೀಮರಾವ್ ಅಂಬೇಡ್ಕರ್ ಅವರು ನಮಗೆ ಸಂವಿಧಾನವನ್ನು ನೀಡಿದ್ದು ಮಾತ್ರವಲ್ಲ, ನ್ಯಾಯ, ಸಮಾನತೆ ಮತ್ತು ಘನತೆಯ ಮೇಲೆ ಸ್ಥಾಪಿತವಾದ ಬಲಿಷ್ಠ ಭಾರತದ ಕನಸನ್ನು ನಮಗೆ ನೀಡಿದರು. ಆದರೆ ಇಂದು, ಕೆಲವು ಶಕ್ತಿಗಳು ಬಾಬಾಸಾಹೇಬ್ ಅವರ ಪರಂಪರೆ ಮತ್ತು ನಮ್ಮ ಸಂವಿಧಾನವನ್ನು ದುರ್ಬಲಗೊಳಿಸಲು ವ್ಯವಸ್ಥಿತವಾಗಿ ಕೆಲಸ ಮಾಡುತ್ತಿವೆ. ಪ್ರಜಾಪ್ರಭುತ್ವ ಸಂಸ್ಥೆಗಳನ್ನು ಟೊಳ್ಳು ಮಾಡಲಾಗುತ್ತಿದೆ, ಹಕ್ಕುಗಳನ್ನು ಕಿತ್ತುಕೊಳ್ಳಲಾಗುತ್ತಿದೆ ಮತ್ತು ಸಮಾನತೆಯ ಕಲ್ಪನೆಯ ಮೇಲೆ ದಾಳಿ ನಡೆಯುತ್ತಿದೆ. ಈ ದೇಶವನ್ನು ಬಾಬಾಸಾಹೇಬ್ ಅವರ ಆದರ್ಶಗಳ ಮೇಲೆ ನಿರ್ಮಿಸಲಾಗಿದೆ. ಅವುಗಳನ್ನು ರಕ್ಷಿಸಲು ನಾನು ನನ್ನ ಕೊನೆಯ ಉಸಿರಿನವರೆಗೂ ನನ್ನ ಸಂಪೂರ್ಣ ಶಕ್ತಿಯಿಂದ ಹೋರಾಡುತ್ತೇನೆ. ಒಟ್ಟಾಗಿ, ನಾವು ಬಾಬಾ ಸಾಹೇಬ್ ಅವರ ಕನಸಿನ ಭಾರತವನ್ನು ಮತ್ತೆ ಜೀವಂತಗೊಳಿಸುತ್ತೇವೆ ಎಂದು ಅಂಬೇಡ್ಕರ್ ಜಯಂತಿಯ ಶುಭಾಶಯ ಕೋರಿದ್ದಾರೆ.

ಬಾಬಾಸಾಹಿಬ್ ಭೀಮರಾವ್ ಅಂಬೇಡ್ಕರ್ ಜಿ ಅವರು ಎಲ್ಲಾ ವರ್ಗಗಳಿಗೂ ಸಮಾನ ಹಕ್ಕುಗಳು ಮತ್ತು ಅವಕಾಶಗಳನ್ನು ನೀಡುವ ಸಂವಿಧಾನವನ್ನು ನೀಡುವ ಮೂಲಕ ನಮ್ಮ ಪ್ರಜಾಪ್ರಭುತ್ವದ ಬಲವಾದ ಅಡಿಪಾಯವನ್ನು ಹಾಕಿದರು. ದೇಶದ ಸಮಗ್ರತೆಯ ಹಿತದೃಷ್ಟಿಯಿಂದ ಅವರು 370ನೇ ವಿಧಿಯನ್ನು ತೀವ್ರವಾಗಿ ವಿರೋಧಿಸಿದರು. ಸಮಾಜಕ್ಕೆ ಶಿಕ್ಷಣ ಪಡೆಯಲು ಮತ್ತು ಸಂಘಟಿತರಾಗಿರಲು ಕರೆ ನೀಡಿದ ಬಾಬಾಸಾಹಿಬ್, ರಾಷ್ಟ್ರೀಯ ಸೇವೆ ಮತ್ತು ಜನರ ಕಲ್ಯಾಣಕ್ಕಾಗಿ ಸಂಕಲ್ಪ ಮಾಡಿದಾಗ, ಪ್ರತಿಯೊಂದು ಅಡೆತಡೆಯೂ ಚಿಕ್ಕದಾಗುತ್ತದೆ ಎಂದು ತಮ್ಮ ಜೀವನದ ಮೂಲಕ ನಮಗೆ ಕಲಿಸುತ್ತಾರೆ. ಸಾಮಾಜಿಕ ನ್ಯಾಯದ ಪ್ರವರ್ತಕ, ಸಂವಿಧಾನ ಶಿಲ್ಪಿ ಬಾಬಾಸಾಹಿಬ್ ಭೀಮರಾವ್ ಅಂಬೇಡ್ಕರ್ ಜಿ ಅವರ ಜನ್ಮದಿನದಂದು ಅವರಿಗೆ ನಮನಗಳು ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಎಕ್ಸ್ ಪೋಸ್ಟ್ ಮಾಡಿದ್ದಾರೆ.

ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಭಕ್ತರ ಹರಿವು ಆದಿಚುಂಚನಗಿರಿಗೆ...



ಶಿಡ್ಲಘಟ್ಟ

ಮಹಾಕ್ಷೇತ್ರ ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪರಮಪೂಜ್ಯ ಶ್ರೀ ಶ್ರೀ ಶ್ರೀ ಬಾಲಗಂಗಾಧರನಾಥ ಸ್ವಾಮೀಜಿಯವರ ಸ್ಮರಣಾರ್ಥ ನಿರ್ಮಿಸಲಾಗಿರುವ ಭವ್ಯ 'ಶ್ರೀಗುರು ಭೈರವೈಕ್ಯ ಮಂದಿರ'ದ ಲೋಕಾರ್ಪಣೆ ಕಾರ್ಯಕ್ರಮವು ಈ ತಿಂಗಳ 15ರಂದು ಅದ್ಧೂರಿಯಾಗಿ ನಡೆಯಲಿದೆ. ಈ ಐತಿಹಾಸಿಕ ಕ್ಷಣಕ್ಕೆ ಸಾಕ್ಷಿಯಾಗಲು ಶಿಡ್ಲಘಟ್ಟ ಕ್ಷೇತ್ರದಿಂದ ಸಾವಿರಾರು ಭಕ್ತರು ತೆರಳಲಿದ್ದಾರೆ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಸೀಕಲ್ ರಾಮಚಂದ್ರ ಗೌಡ ತಿಳಿಸಿದರು.

ನಗರದ ಬಿಜೆಪಿ ಸೇವಾ ಸೌಧ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾರ್ಯಕ್ರಮದ ಸಿದ್ಧತೆಗಳ ಕುರಿತು ಮಾಹಿತಿ ಹಂಚಿಕೊಂಡರು.

ಪ್ರಧಾನಿ ನರೇಂದ್ರ ಮೋದಿ ಭೇಟಿ: "ದೇಶ–ವಿದೇಶಗಳಲ್ಲಿ ಶಿಕ್ಷಣ ಮತ್ತು ಅನ್ನದಾನದ ಮೂಲಕ ಖ್ಯಾತಿ ಪಡೆದಿರುವ ಮಠದ ಈ ವಿಶೇಷ ಕಾರ್ಯಕ್ರಮದಲ್ಲಿ ಭಾರತದ ಪ್ರಧಾನ ಮಂತ್ರಿಗಳಾದ ನರೇಂದ್ರ ಮೋದಿ ಅವರು ಭಾಗವಹಿಸಲಿದ್ದಾರೆ. 15ನೇ ತಾರೀಖಿನಂದು ಬೆಳಿಗ್ಗೆ 11:30ಕ್ಕೆ ಮಂದಿರದ ಲೋಕಾರ್ಪಣೆ ನೆರವೇರಲಿದ್ದು, ಮಠದ ಭಕ್ತರಾದ ಪ್ರಧಾನಿಗಳ ಉಪಸ್ಥಿತಿಯು ಕಾರ್ಯಕ್ರಮಕ್ಕೆ ಹೆಚ್ಚಿನ ಮೆರುಗು ನೀಡಲಿದೆ," ಎಂದು ಅವರು ವಿವರಿಸಿದರು.

ಭಕ್ತರಿಗಾಗಿ 100 ಬಸ್‌ಗಳ ಸಾರಿಗೆ ವ್ಯವಸ್ಥೆ:

ಕ್ಷೇತ್ರದ ಭಕ್ತಾಧಿಗಳ ಅನುಕೂಲಕ್ಕಾಗಿ ವಿಶೇಷ ವ್ಯವಸ್ಥೆ ಮಾಡಲಾಗಿದೆ.

ಸಾರಿಗೆ: ಈಗಾಗಲೇ 50 ಬಸ್‌ಗಳ ವ್ಯವಸ್ಥೆ ಪೂರ್ಣಗೊಂಡಿದ್ದು, ಅಗತ್ಯವಿದ್ದರೆ ಹೆಚ್ಚುವರಿ 50 ಬಸ್‌ಗಳನ್ನು ಒದಗಿಸಲಾಗುವುದು.

ಪ್ರಯಾಣ: 14ನೇ ತಾರೀಖಿನಂದು ಮಧ್ಯಾಹ್ನ 2:00 ಗಂಟೆಗೆ ಪ್ರತಿ ಪಂಚಾಯಿತಿಯಿಂದ ಭಕ್ತರು ಹೊರಡಲಿದ್ದಾರೆ. ಪ್ರತಿ ಪಂಚಾಯಿತಿಗೂ ಒಬ್ಬೊಬ್ಬ 'ಇಂಚಾರ್ಜ್' ನೇಮಿಸಲಾಗಿದೆ.

ತೀರ್ಥಯಾತ್ರೆ: ಭಕ್ತರು ಮಾರ್ಗಮಧ್ಯೆ ಬಿದಿನಗೆರೆಯ ಪಂಚಮುಖಿ ಆಂಜನೇಯ ಹಾಗೂ ಸತ್ಯ ಶನೈಶ್ವರ ದೇವಸ್ಥಾನಗಳ ದರ್ಶನ ಪಡೆಯಲಿದ್ದಾರೆ.

ವಸತಿ: ಅಂದು ರಾತ್ರಿ ಎಡೆಯೂರು ಸಿದ್ಧಲಿಂಗೇಶ್ವರ ಕ್ಷೇತ್ರದಲ್ಲಿ ವಾಸ್ತವ್ಯ ಹಾಗೂ ಊಟದ ವ್ಯವಸ್ಥೆ ಮಾಡಲಾಗಿದ್ದು, ಮರುದಿನ ಬೆಳಿಗ್ಗೆ ಆದಿಚುಂಚನಗಿರಿಗೆ ಪ್ರಯಾಣ ಬೆಳೆಸಲಿದ್ದಾರೆ.

ಇದು ಭಕ್ತಿಯ ಸಂಕೇತ, ರಾಜಕೀಯವಲ್ಲ: ಬಾಲಗಂಗಾಧರನಾಥ ಸ್ವಾಮೀಜಿಯವರು ಲಕ್ಷಾಂತರ ವಿದ್ಯಾರ್ಥಿಗಳಿಗೆ ಅನ್ನ ಮತ್ತು ಅರಿವು ನೀಡಿದವರು. ಅವರ ಮೇಲಿನ ಗೌರವದಿಂದ ಈ ಕಾರ್ಯಕ್ರಮ ಆಯೋಜಿಸಲಾಗಿದೆ. ಇದು ಯಾವುದೇ ರಾಜಕೀಯ ಕಾರ್ಯಕ್ರಮವಲ್ಲ, ಪಕ್ಷಭೇದ ಮರೆತು ಎಲ್ಲಾ ಮುಖಂಡರು ಮತ್ತು ಭಕ್ತರು ಭಾಗವಹಿಸುತ್ತಿದ್ದಾರೆ ಎಂದು ಸೀಕಲ್ ರಾಮಚಂದ್ರ ಗೌಡ ಸ್ಪಷ್ಟಪಡಿಸಿದರು. ಗೋಷ್ಠಿಯಲ್ಲಿ ಬಿಜೆಪಿ ಗ್ರಾಮಾಂತರ ಅಧ್ಯಕ್ಷ ಸೀಕಲ್ ಆನಂದ್ ಗೌಡ, ಮುಖಂಡರಾದ ನರೇಶ್, ರಾಮಕೃಷ್ಣಪ್ಪ, ಪ್ರಕಾಶ್, ಪುರುಷೋತ್ತಮ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# 'ಅಂಬೇಡ್ಕರ್ ತತ್ವ ಅಳವಡಿಕೆಯಿಂದ ಮಾತ್ರ ಸಮಾನತೆ ಸಾಧ್ಯ'



ಬೆಂಗಳೂರು

ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿಯನ್ನು ಜಯಕರ್ನಾಟಕ ಜನಪರ ವೇದಿಕೆಯ ಸಂಸ್ಥಾಪಕ ಅಧ್ಯಕ್ಷರಾದ ಬಿ.ಗುಣರಂಜನ್ ಶೆಟ್ಟಿಯವರ ಮಾರ್ಗದರ್ಶನದಲ್ಲಿ ಬಸವನಗುಡಿ ವಿಧಾನಸಭಾ ಕ್ಷೇತ್ರದ ವತಿಯಿಂದ ಪೌರಕಾರ್ಮಿಕರಿಗೆ ಹಾಗೂ ಆಟೋ ಚಾಲಕರಿಗೆ ಸಮವಸ್ತ್ರ ವಿತರಿಸುವ ಮೂಲಕ ಅರ್ಥಪೂರ್ಣವಾಗಿ ಆಚರಿಸಲಾಯಿತು ಎಂದು ರಾಜ್ಯಾಧ್ಯಕ್ಷ ಜೆ.ಶ್ರೀನಿವಾಸ್ ತಿಳಿಸಿದರು. ಬೆಂಗಳೂರಿನ ಬಸವನಗುಡಿ ವಿಧಾನಸಭಾ ಕ್ಷೇತ್ರದ ತ್ಯಾಗರಾಜನಗರದಲ್ಲಿ ಆಯೋಜಿಸಿದ್ದ ಡಾ.ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿಯ ಕಾರ್ಯಕ್ರಮದಲ್ಲಿ ಅಂಬೇಡ್ಕರ್ ಅವರ ಪುತ್ಥಳಿಗೆ ವಿಶೇಷ ಪೂಜೆ ಸಲ್ಲಿಸಿ ಮಾತನಾಡಿದ ಅವರು ಈ ದೇಶದ ಮಹಾಚೈತನ್ಯ ಪುರುಷ ಅವರ ತತ್ವ ಸಿದ್ಧಾಂತಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಸಮಾಜದಲ್ಲಿ ಸಮಾನತೆ ಮೂಡಲು ಸಾಧ್ಯ," ಎಂದು ಅಭಿಪ್ರಾಯಪಟ್ಟರು. ಬಾಬಾ ಸಾಹೇಬರು ಮತ್ತು ಬಾಬು ಜಗಜೀವನ್ ರಾಮ್ ಅವರನ್ನು ದೇಶದ ಎರಡು ದೊಡ್ಡ ಶಕ್ತಿಗಳಾಗಿದ್ದು ಸಮಸಮಾಜ ನಿರ್ಮಾಣಕ್ಕೆ ವಿಶೇಷ ಕೊಡುಗೆ ನೀಡಿದ್ದಾರೆ," ಎಂದು ಸ್ಮರಿಸಿದರು.

ಬಸವನಗುಡಿ ವಿಧಾನಸಭಾ ಕ್ಷೇತ್ರದ ಅಧ್ಯಕ್ಷರಾದ ಸುನಿಲ್ ಅವರ ನೇತೃತ್ವದಲ್ಲಿ ಆಯೋಜಿಸಿದ್ದ ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜಯಂತಿಯ ಕಾರ್ಯಕ್ರಮದಲ್ಲಿ ಬಿಬಿಎಂಪಿ ಪೌರಕಾರ್ಮಿಕರಿಗೆ ಹಾಗೂ ಆಟೋ ಚಾಲಕರಿಗೆ ಸಮವಸ್ತ್ರವನ್ನು ವಿತರಿಸಿ ಗೌರವಿಸಲಾಯಿತು.

ರಾಜ್ಯಾ ಕಾರ್ಯಾಧ್ಯಕ್ಷ ರಾಮಚಂದ್ರಯ್ಯ, ಬೆಂಗಳೂರು ಜಿಲ್ಲಾ ಅಧ್ಯಕ್ಷ ಲೋಕೇಶ್, ರಾಜ್ಯ ಉಪಾಧ್ಯಕ್ಷ ಜಗದೀಶ್, ಬಸವನಗುಡಿ ಕ್ಷೇತ್ರ ಅಧ್ಯಕ್ಷ ಸುನಿಲ್, ಜಿಲ್ಲಾ ಪ್ರಧಾನ ಸಂಚಾಲಕ ರಾಜೇಶ್, ಸಲಹೆಗಾರ ಕುಮಾರಸ್ವಾಮಿ, ಕೃಷ್ಣಮೂರ್ತಿ, ದೀಪಕ್ ರಸ್ಕೀನಾ, ಕುಮಾರ್, ಪೂರ್ಣೇಶ್, ಯೋಗೇಶ್, ಮಣಿ, ವೇಲು ಸೇರಿದಂತೆ ಪದಾಧಿಕಾರಿಗಳು, ಕಾರ್ಯಕರ್ತರು ಉಪಸ್ಥಿತರಿದ್ದರು.

# ಟೈಟಾನ್‌ನಿಂದ ವಿಶಿಷ್ಟ ಸಂಗ್ರಹ ಪರಿಚಯ

ಬೆಂಗಳೂರು

ಅಕ್ಷಯ ತೃತೀಯದ ಅಂಗವಾಗಿ ಟೈಟಾನ್ ಸಂಸ್ಥೆಯ ನೆಬುಲಾ ಸಂಗ್ರಹವು ಚಿನ್ನದ ಪರಂಪರೆಯನ್ನು ಹೊಸ ದೃಷ್ಟಿಕೋನದಲ್ಲಿ ಮರುಕಲ್ಪಿಸಿದೆ. ಕರಕುಶಲತೆ, ಚರಾಸ್ತಿ ವಿನ್ಯಾಸ ಮತ್ತು ಸಮಕಾಲೀನ ವಿನ್ಯಾಸ ತತ್ವಗಳನ್ನು ಒಂದೇ ವೇದಿಕೆಯಲ್ಲಿ ಒಟ್ಟುಗೂಡಿಸುವ ಮೂಲಕ 18 ಕ್ಯಾರಟ್ ಚಿನ್ನದ ಕೈಗಡಿಯಾರಗಳ ವಿಶಿಷ್ಟ ಸಂಗ್ರಹವನ್ನು ಪರಿಚಯಿಸಲಾಗಿದೆ.

ಈ ಸಂಗ್ರಹದಲ್ಲಿ ಪ್ರತಿಯೊಂದು ಕೈಗಡಿಯಾರವೂ ಅಲಂಕಾರಕ್ಕಿಂತ ಮೀರಿದ ಅರ್ಥಪೂರ್ಣ ವಿನ್ಯಾಸದ ಪ್ರತೀಕವಾಗಿದ್ದು, ಆಧುನಿಕ ಐಷಾರಾಮಿ ಜೀವನಶೈಲಿಯ ಪ್ರತಿಬಿಂಬವಾಗಿ ಮೂಡಿಬಂದಿದೆ. ಚಿನ್ನವನ್ನು ಕೇವಲ ಸಂಗ್ರಹಿಸುವ ವಸ್ತುವಾಗಿ ನೋಡುವ ಪರಂಪರೆಯನ್ನು ಮೀರಿ, ಅರ್ಥಪೂರ್ಣವಾಗಿ ಆಯ್ಕೆಮಾಡುವ ಕಲೆಯಾಗಿ ರೂಪಿಸುವ ಪ್ರಯತ್ನವನ್ನು ನೆಬುಲಾ ಮಾಡಿದೆ.

ಸಂಗ್ರಹವು ನಿಖರ ಎಂಜಿನಿಯರಿಂಗ್, ಶುದ್ಧ ವಿನ್ಯಾಸ ಮತ್ತು ಚಿನ್ನದ ಅಂತರ್ನಿಹಿತ ಮೌಲ್ಯವನ್ನು ಸಮನ್ವಯಗೊಳಿಸಿ, ದೀರ್ಘಕಾಲ ಉಳಿಯುವ ಹಾಗೂ ಪೀಳಿಗೆಗಳಿಂದ ಪೀಳಿಗೆಗಳಿಗೆ ಸಾಗುವಂತಹ ಶಾಶ್ವತ ಸೃಷ್ಟಿಗಳನ್ನು ನೀಡುತ್ತದೆ. ಈ ವರ್ಷದ ಪ್ರದರ್ಶನವು ಪುರುಷರು ಹಾಗೂ ಮಹಿಳೆಯರಿಗಾಗಿ ವಿಭಿನ್ನ ಶೈಲಿಗಳ ಕೈಗಡಿಯಾರಗಳನ್ನು ಒಳಗೊಂಡಿದೆ.

ಮಹಿಳೆಯರ ಸಂಗ್ರಹದಲ್ಲಿ ಮೃದುತ್ವ ಮತ್ತು ರಚನೆಯ ನಡುವಿನ ಸಮತೋಲನವನ್ನು ವಿವಿಧ ವಿನ್ಯಾಸಗಳ ಮೂಲಕ ಅಭಿವ್ಯಕ್ತಿಸಲಾಗಿದೆ.


"ಮಲ್ಲಿಗೆ" ಮಾದರಿಯ ಕೈಗಡಿಯಾರವು ಮುತ್ತಿನ ಡಯಲ್‌ನೊಂದಿಗೆ ಮಲ್ಲಿಗೆಯ ಸೌಂದರ್ಯದಿಂದ ಪ್ರೇರಿತ ವಿನ್ಯಾಸ ಹೊಂದಿದ್ದು, ತೆಳುವಾದ 18 ಕ್ಯಾರಟ್ ಗುಲಾಬಿ ಚಿನ್ನದ ಕೇಸ್ನಲ್ಲಿ ರೂಪುಗೊಂಡಿದೆ.

"ವರ್ಷಾ" ಮಾದರಿ ಚಲನೆ ಮತ್ತು ಪ್ರಕಾಶಮಾನತೆಯನ್ನು ಪ್ರತಿಬಿಂಬಿಸುವ ವಿನ್ಯಾಸ ಹೊಂದಿದ್ದು, ಮಳೆಹನಿಯ ಚಲನೆಯಿಂದ ಪ್ರೇರಿತ ಡಯಲ್ ಹಾಗೂ ವಜ್ರ ಅಳವಡಿಸಲಾದ ಚಿನ್ನದ ಬಳೆ ಇದರ ವಿಶೇಷತೆ. ಇದು ಬೆಳಕನ್ನು ಸೆರೆಹಿಡಿದು ಪ್ರತಿಫಲಿಸುವ ಮೂಲಕ ವಿಶಿಷ್ಟ ಆಕರ್ಷಣೆಯನ್ನು ನೀಡುತ್ತದೆ.

"ಕಮಲ" ಮಾದರಿಯ ಕೈಗಡಿಯಾರವು ಶಾಂತತೆ ಮತ್ತು ಆಳವನ್ನು ವ್ಯಕ್ತಪಡಿಸುವ ವಿನ್ಯಾಸ ಹೊಂದಿದ್ದು, ಮಸುಕಾದ ನೀಲಿ ಬಣ್ಣದ ಮುತ್ತಿನ ಡಯಲ್ ಬೆಳಕಿನಲ್ಲಿ ಹೂಬಿಡುವಂತೆ ಕಾಣುತ್ತದೆ. ಹಳದಿ ಚಿನ್ನದ ಕೇಸ್ ಹಾಗೂ ಗಾಢ ನೀಲಿ ಚರ್ಮದ ಪಟ್ಟಿಯೊಂದಿಗೆ ಈ ವಿನ್ಯಾಸವು ಗಂಭೀರತೆ ಮತ್ತು ಆತ್ಮವಿಶ್ವಾಸವನ್ನು ಪ್ರತಿಬಿಂಬಿಸುತ್ತದೆ.

ಒಟ್ಟಾರೆ, ಟೈಟಾನ್ ನೆಬುಲಾ ಸಂಗ್ರಹವು ಅಕ್ಷಯ ತೃತೀಯದ ಸಂದರ್ಭದಲ್ಲಿ ಚಿನ್ನವನ್ನು ಹೊಸ ಅರ್ಥದಲ್ಲಿ ಪರಿಚಯಿಸುವ ಜೊತೆಗೆ, ವಿನ್ಯಾಸ ಮತ್ತು ಕರಕುಶಲತೆಯ ಮೌಲ್ಯವನ್ನು ಉನ್ನತ ಮಟ್ಟಕ್ಕೆ ಏರಿಸಿದೆ.

# ವಿಶೇಷ ರೆಫರಲ್ ಅಭಿಯಾನ ಪ್ರಾರಂಭ




ಬೆಂಗಳೂರು

ಫಟಾಕ್ ಪೇ ಸಂಸ್ಥೆಯು 'ಫಟಾಕ್ ಪೇ ಪ್ರೀಮಿಯರ್ ಲೀಗ್' ಎಂಬ ವಿಶೇಷ ರೆಫರಲ್ ಅಭಿಯಾನವನ್ನು ಪ್ರಾರಂಭಿಸಿದೆ. ಕ್ರಿಕೆಟ್ ಹಂಗಾಮಿಗೆ ಹೊಂದಿಕೊಂಡಂತೆ ರೂಪಿಸಲಾದ ಈ ಯೋಜನೆ ಬಳಕೆದಾರರಿಗೆ ಖಚಿತ ಡಿಜಿಟಲ್ ಚಿನ್ನದ ಬಹುಮಾನಗಳ ಜೊತೆಗೆ ಹೆಚ್ಚಿನ ಮೌಲ್ಯದ ಬಹುಮಾನಗಳನ್ನು ಗೆಲ್ಲುವ ಅವಕಾಶವನ್ನು ಒದಗಿಸುತ್ತದೆ. ಈ ಅಭಿಯಾನದ ಒಟ್ಟು ಬಹುಮಾನ ಮೊತ್ತವು ಸುಮಾರು 15 ಲಕ್ಷ ರೂಪಾಯಿವರೆಗೆ ಇರಲಿದೆ.

ಮಾರ್ಚ್ 28ರಿಂದ ಮೇ 31, 2026ರವರೆಗೆ ನಡೆಯಲಿರುವ ಈ ಅಭಿಯಾನವು ಕ್ರಿಕೆಟ್ ಉತ್ಸಾಹವನ್ನು ಆರ್ಥಿಕ ಪ್ರೋತ್ಸಾಹದೊಂದಿಗೆ ಸಂಯೋಜಿಸುವ ಉದ್ದೇಶ ಹೊಂದಿದೆ.

ಬಳಕೆದಾರರು ತಮ್ಮ ಸ್ನೇಹಿತರು ಹಾಗೂ ಕುಟುಂಬದವರನ್ನು ಫಟಾಕ್ ಪೇನಲ್ಲಿ ನೋಂದಣಿ ಮಾಡಿಸಲು ಹಾಗೂ ತ್ವರಿತ ಸಾಲ ಅಥವಾ ಫಟಾಕ್ ಉಡಾಣ್ ಸೇವೆಗಳನ್ನು ಬಳಸಲು ಪ್ರೇರೇಪಿಸುವ ಮೂಲಕ ಭಾಗವಹಿಸಬಹುದು.

ರೆಫರ್ ಮಾಡಿದ ಬಳಕೆದಾರರು ಸಾಲದ ವಿತರಣೆಯನ್ನು ಪೂರ್ಣಗೊಳಿಸಿದಾಗ ಅಥವಾ ಫಟಾಕ್ ಉಡಾಣ್ ಸೇವೆಯನ್ನು ಸಕ್ರಿಯಗೊಳಿಸಿದಾಗ ಆ ರೆಫರಲ್ ಯಶಸ್ವಿಯಾಗಿದೆ ಎಂದು ಪರಿಗಣಿಸಲಾಗುತ್ತದೆ. ಪ್ರತಿಯೊಂದು ಯಶಸ್ವಿ ರೆಫರಲ್ ಅನ್ನು "ಒಂದು ರನ್" ಎಂದು ಪರಿಗಣಿಸಲಾಗುತ್ತಿದ್ದು, ಇದರ ಆಧಾರದ ಮೇಲೆ ಬಳಕೆದಾರರು ಹಂತ ಹಂತವಾಗಿ ಬಹುಮಾನಗಳನ್ನು ಪಡೆಯಲು ಸಾಧ್ಯವಾಗುತ್ತದೆ.

ಈ ಅಭಿಯಾನದಡಿ ಎರಡು ಯಶಸ್ವಿ ರೆಫರಲ್‌ಗಳಿಗೆ 100 ರೂಪಾಯಿ ಮೌಲ್ಯದ ಡಿಜಿಟಲ್ ಚಿನ್ನ, ನಾಲ್ಕು ಯಶಸ್ವಿ ರೆಫರಲ್‌ಗಳಿಗೆ 500 ರೂಪಾಯಿ ಮೌಲ್ಯದ ಬಹುಮಾನ ಹಾಗೂ ಆರು ಯಶಸ್ವಿ ರೆಫರಲ್‌ಗಳಿಗೆ 1000 ರೂಪಾಯಿ ಮೌಲ್ಯದ ಬಹುಮಾನಗಳನ್ನು ನೀಡಲಾಗುತ್ತದೆ.

ಇದಲ್ಲದೆ, ನಾಲ್ಕು ಮತ್ತು ಆರು ಯಶಸ್ವಿ ರೆಫರಲ್‌ಗಳನ್ನು ಸಾಧಿಸಿದ ಬಳಕೆದಾರರು ಲಕ್ಕಿ ಡ್ರಾಗಳಿಗೆ ಅರ್ಹರಾಗಲಿದ್ದಾರೆ.

# ಫೋನ್‌ಪೇ ಸಂಸ್ಥೆ ತನ್ನ ಎಸ್‌ಬಿಐ ಕ್ರೆಡಿಟ್ ಕಾರ್ಡ್‌ಗೆ ವಿಶೇಷ ಆಫರ್ ಪ್ರಕಟ

ಬೆಂಗಳೂರು

ಡಿಜಿಟಲ್ ಪಾವತಿ ಸೇವೆಯಲ್ಲಿ ಪ್ರಮುಖ ಸ್ಥಾನ ಪಡೆದಿರುವ ಫೋನ್‌ಪೇ ಸಂಸ್ಥೆ ತನ್ನ ಎಸ್‌ಬಿಐ ಕ್ರೆಡಿಟ್ ಕಾರ್ಡ್‌ಗೆ ಸಂಬಂಧಿಸಿದಂತೆ ಸೀಮಿತ ಅವಧಿಯ ವಿಶೇಷ ಆಫರ್ ಪ್ರಕಟಿಸಿದೆ. ಈ ಆಫರ್‌ನಡಿ ಕಾರ್ಡ್‌ಗೆ ಸೇರ್ಪಡೆ ಶುಲ್ಕವನ್ನು ಸಂಪೂರ್ಣವಾಗಿ ರದ್ದುಗೊಳಿಸಲಾಗಿದ್ದು, ಮೊದಲ ವರ್ಷದ ಬಳಕೆ ಉಚಿತವಾಗಿ ನೀಡಲಾಗುತ್ತಿದೆ.

ಆಧುನಿಕ ಡಿಜಿಟಲ್ ಬಳಕೆದಾರರ ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು ವಿನ್ಯಾಸಗೊಳಿಸಲಾದ ಈ ಕ್ರೆಡಿಟ್ ಕಾರ್ಡ್ ಅನ್ನು ಭಾರತೀಯ ಸ್ಟೇಟ್ ಬ್ಯಾಂಕ್ ಸಹಯೋಗದಲ್ಲಿ ಪರಿಚಯಿಸಲಾಗಿದೆ. ರೂಪೇ ಹಾಗೂ ವೀಸಾ ವೇದಿಕೆಗಳಲ್ಲಿ ಈ ಕಾರ್ಡ್ ಲಭ್ಯವಿದ್ದು, ಆನ್‌ಲೈನ್ ವಹಿವಾಟುಗಳನ್ನು ಸುಲಭಗೊಳಿಸುವ ಉದ್ದೇಶ ಹೊಂದಿದೆ.

ಈ ಕಾರ್ಡ್‌ನ ಪ್ರಮುಖ ವಿಶೇಷತೆಯೆಂದರೆ, ಎಲ್ಲಾ ಆನ್‌ಲೈನ್ ಖರೀದಿಗಳ ಮೇಲೆ ಐದು ಶೇಕಡಾ ಬಹುಮಾನ ನೀಡಲಾಗುತ್ತಿದೆ. ಫೋನ್‌ಪೇ ಮೂಲಕ ನಡೆಯುವ ದೈನಂದಿನ ವ್ಯವಹಾರಗಳು, ಬಿಲ್ ಪಾವತಿಗಳು ಮತ್ತು ಇತರೆ ಸೇವೆಗಳ ಮೇಲೂ ಹೆಚ್ಚುವರಿ ಬಹುಮಾನಗಳ ಸೌಲಭ್ಯ ಕಲ್ಪಿಸಲಾಗಿದೆ.

ಇದಲ್ಲದೆ, ವಿಮಾ ಪ್ರೀಮಿಯಂ ಪಾವತಿಗಳ ಮೇಲೂ ವಿಶೇಷ ಲಾಭ ದೊರೆಯಲಿದ್ದು, ರೂಪೇ ಮೂಲಕ ಸ್ಕ್ಯಾನ್ ಮಾಡಿ ಮಾಡುವ ಪಾವತಿಗಳಿಗೂ ಬಹುಮಾನ ನೀಡುವ ವ್ಯವಸ್ಥೆ ಮಾಡಲಾಗಿದೆ.

ಒಟ್ಟಾರೆ, ಈ ವಿಶೇಷ ಆಫರ್ ಡಿಜಿಟಲ್ ವಹಿವಾಟುಗಳನ್ನು ಉತ್ತೇಜಿಸುವುದರ ಜೊತೆಗೆ ಬಳಕೆದಾರರಿಗೆ ಹೆಚ್ಚುವರಿ ಆರ್ಥಿಕ ಲಾಭ ನೀಡುವ ಉದ್ದೇಶ ಹೊಂದಿದೆ.

# ದಿನ್ನೆ ಕೆರೆ ಹೂಳೆತ್ತುವ ಕಾಮಗಾರಿಗೆ ಚಾಲನೆ

ದೊಡ್ಡಬಳ್ಳಾಪುರ

ತಾಲೂಕಿನ ಜಲಮೂಲಗಳ ಪುನಶ್ಚೇತನಕ್ಕಾಗಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಹಾಗೂ ಕ್ಷೇಮಾವನ ಟ್ರಸ್ಟ್ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾದ ಪಾಲ್ ಪಾಲ್ ದಿನ್ನೆ ಕೆರೆ ಹೂಳೆತ್ತುವ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸುವ ಮೂಲಕ ಅಧಿಕೃತ ಚಾಲನೆ ನೀಡಲಾಯಿತು.

ಕೆರೆಯಲ್ಲಿ ಹೂಳು ತುಂಬಿರುವುದರಿಂದ ನೀರಿನ ಸಂಗ್ರಹಣಾ ಸಾಮರ್ಥ್ಯ ಕುಸಿದಿದ್ದು, ಇದನ್ನು ಅಭಿವೃದ್ಧಿಪಡಿಸುವ ಉದ್ದೇಶದಿಂದ ಈ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗಿದೆ. ಕೆರೆಯ ಅಭಿವೃದ್ಧಿಯಿಂದ ಅಂತರ್ಜಲ ಮಟ್ಟ ವೃದ್ಧಿಯಾಗಲಿದ್ದು, ಸುತ್ತಮುತ್ತಲ ರೈತರಿಗೆ ಮತ್ತು ಜಾನುವಾರುಗಳಿಗೆ ಅನುಕೂಲವಾಗಲಿದೆ ಎಂದು ಈ ಸಂದರ್ಭದಲ್ಲಿ ತಿಳಿಸಲಾಯಿತು.

ಕಾರ್ಯಕ್ರಮದಲ್ಲಿ ಭಾಗವಹಿಸಿದ ಪ್ರಮುಖರು:

ನಾಗೇಶ: ಜಿಲ್ಲಾ ಜನಜಾಗೃತಿ ವೇದಿಕೆ ಉಪಾಧ್ಯಕ್ಷರು ಹಾಗೂ ರಾಜ್ಯ ಛಾಯಾಗ್ರಾಹಕ ಸಂಘದ ಅಧ್ಯಕ್ಷರು.

ಉಮಾರಬ್ಬ: ಜಿಲ್ಲಾ ನಿರ್ದೇಶಕರು.

ರಂಗಪ್ಪ: ಘಾಟಿ ಪ್ರಾಧಿಕಾರ ಸದಸ್ಯರು.

ತಾಂತ್ರಿಕ ತಂಡ: ಪ್ರಾದೇಶಿಕ ಕಚೇರಿಯ ಕೆರೆ ಅಭಿಯಂತರರಾದ ಭರತ್, ಜಿಲ್ಲಾಧಿಕಾರಿ ಕಚೇರಿ ಇಂಜಿನಿಯರ್ ರವಿಚಂದ್ರ ಮತ್ತು ಕೆರೆ ನೋಡಲ್ ಅಧಿಕಾರಿ ಲೋಹಿತ್ ಗೌಡ.

ಯೋಜನಾ ತಂಡ: ತಾಲೂಕು ಯೋಜನಾಧಿಕಾರಿ ದಿನೇಶ್, ವಲಯ ಮೇಲ್ವಿಚಾರಕ ಈರಣ್ಣ ಮತ್ತು ಒಕ್ಕೂಟದ ಅಧ್ಯಕ್ಷ ಧನಂಜಯ್.

ಇವರೊಂದಿಗೆ ಗ್ರಾಮ ಪಂಚಾಯತ್ ಸದಸ್ಯರಾದ ಕೃಷ್ಣ ನಾಯ್ಕ್, ಲಕ್ಷ್ಮೀನಾಯ್ಕ್, ನಾಗಭೂಷಣ್, ಮುನಿರಾಜ್ ಸೇರಿದಂತೆ ಸೇವಾ ಪ್ರತಿನಿಧಿಗಳಾದ ರಿಜ್ವಾನಾ, ಶೈಲಜಾ ಮತ್ತು ಶೃತಿ ಭಾಗವಹಿಸಿದ್ದರು.



# 'ರೀಲ್ ಸೆ ರಿಯಲ್ ಸ್ಟಾರ್' ಆರಂಭ




ಮೈಸೂರು

ಪ್ರತಿಷ್ಠಿತ ಬಿರ್ಲಾ ಸ್ಟುಡಿಯೋಸ್ ಸಂಸ್ಥೆಯು ವೊಡಾಫೋನ್ ಐಡಿಯಾ (ವಿ) ಸಂಸ್ಥೆಯೊಂದಿಗೆ ಕೈಜೋಡಿಸಿ ದೇಶದ ಮನರಂಜನಾ ಕ್ಷೇತ್ರದಲ್ಲಿ ಹೊಸ ಕ್ರಾಂತಿಗೆ ನಾಂದಿ ಹಾಡುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆ ಇಟ್ಟಿದೆ. ಈ ಎರಡೂ ಸಂಸ್ಥೆಗಳು ನಟನಾ ಕಲಾವಿದರನ್ನು ಗುರುತಿಸುವ ಭಾರತದ ಮೊದಲ ಮೊಬೈಲ್ ಆಧಾರಿತ ಪ್ರತಿಭಾನ್ವೇಷಣಾ ಕಾರ್ಯಕ್ರಮ 'ರೀಲ್ ಸೆ ರಿಯಲ್ ಸ್ಟಾರ್' ಅನ್ನು ಇಂದು ಅನಾವರಣಗೊಳಿಸಿದೆ.

ವೊಡಾಫೋನ್ ಐಡಿಯಾದ ಬೃಹತ್ ಡಿಜಿಟಲ್ ಜಾಲ ಮತ್ತು ಬಿರ್ಲಾ ಸ್ಟುಡಿಯೋಸ್ ನ ಸೃಜನಶೀಲ ಪರಿಣತಿಯನ್ನು ಬಳಸಿಕೊಳ್ಳುವ ಮೂಲಕ ಈ ವೇದಿಕೆಯು, ಭಾರತದಲ್ಲಿರುವ ನಟನಾ ಕ್ಷೇತ್ರದಲ್ಲಿ ಆಸಕ್ತಿ ಇರುವ ಪ್ರತಿಭೆಗಳನ್ನು ಹುಡುಕಾಟ ನಡೆಸಲಿದೆ. ಪ್ರತಿಭೆ ಇರುವ ಪ್ರತಿಯೊಬ್ಬರಿಗೂ ಸಮಾನ ಅವಕಾಶ ನೀಡುವುದು ಈ ಯೋಜನೆಯ ಮೂಲಮಂತ್ರವಾಗಿದೆ.

# ರಾಜಕೀಯ ಹಿತಾಸಕ್ತಿಗಾಗಿ ದಲಿತರನ್ನು ಎತ್ತಿಕಟ್ಟಲಾಗುತ್ತಿದೆ: ಕೃಷ್ಣಪ್ಪ ಆರೋಪ

ವಿಜಯಪುರ



ಹೋಬಳಿಯ ಧರ್ಮಪುರ ಗ್ರಾಮದಲ್ಲಿ, ದಲಿತರು ತಿಪ್ಪೆಗಳು ಹಾಕಿರುವ ಜಾಗವನ್ನು ಕಬಳಿಸಲು ಹುನ್ನಾರ ನಡೆಸಿದ್ದಾರೆ ಎನ್ನುವ ದಲಿತರ ಆರೋಪಗಳು ಶುದ್ಧ ಸುಳ್ಳು, ದಲಿತರನ್ನು ಮುಂದಿಟ್ಟುಕೊಂಡು, ಕೆಲ ಜೆಡಿಎಸ್ ಮುಖಂಡರು, ನಮ್ಮನ್ನು ರಾಜಕೀಯವಾಗಿ ತೇಜೋವಧೆ ಮಾಡಿ, ಉಸ್ತುವಾರಿ ಸಚಿವ ಕೆ.ಹೆಚ್. ಮುನಿಯಪ್ಪ ಅವರಿಗೆ ಕೆಟ್ಟ ಹೆಸರು ತರಬೇಕೆಂದು ಮಾಡುತ್ತಿರುವ ಸಂಚು ಎಂದು ಮುಖಂಡ ಕೃಷ್ಣಪ್ಪ ಹೇಳಿದರು.

ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದಲಿತರು, ಮನೆಗಳು ಕಟ್ಟಿಕೊಂಡು, ತಿಪ್ಪೆಗಳು ಹಾಕಿಕೊಂಡಿರುವ ಜಾಗಕ್ಕೂ ನಮಗೂ ಸಂಬಂಧವಿಲ್ಲ. ನಾವು ಅವರು ಸ್ವಾಧೀನದಲ್ಲಿರುವ ಜಾಗಕ್ಕೆ ಒಂದಿಂಚು ಹೋಗಿಲ್ಲ. ನಮ್ಮ ಸ್ವಂತ ಜಮೀನು 2/8 ರಲ್ಲಿದೆ. ಅದು ರಾಜಕಾಲುವೆಯ ಪಕ್ಕದಲ್ಲಿದೆ. ನಮ್ಮ ಜಮೀನು ಹದ್ದುಬಸ್ತು ಮಾಡಿಕೊಂಡು, ಕಾಂಪೌಂಡ್ ನಿರ್ಮಾಣ ಮಾಡಿಕೊಳ್ಳಲು ಸರ್ವೆಗೆ ಹಾಕಿದ್ದೆ, ದಲಿತರು, ಸರ್ವೆ ಮಾಡಬಾರದೆಂದು ಭೂ ದಾಖಲೆಗಳ ಸಹಾಯಕ ನಿರ್ದೇಶಕರಿಗೆ ಮನವಿ ಕೊಟ್ಟಿದ್ದರು. ಅಳತೆ ಮಾಡಬಾರದೆಂದು ನ್ಯಾಯಾಲಯದಿಂದ ತಡೆಯಾಜ್ಞೆಯಾಗಲಿ, ಅಥವಾ ದಲಿತರ ಹೆಸರಿನಲ್ಲಿರುವ ದಾಖಲೆಯಿಲ್ಲದ ಕಾರಣ, ಸರ್ವೆ ಮಾಡದೆ ನಿಲ್ಲಿಸಲು ಸಾಧ್ಯವಿಲ್ಲವೆಂದು ಅವರಿಗೆ ತಿಳುವಳಿಕೆ ನೊಟೀಸನ್ನು ಭೂ ದಾಖಲೆಗಳ ಸಹಾಯಕ ನಿರ್ದೇಶಕರು ಕೊಟ್ಟಿದ್ದಾರೆ.

ನಾವು ನಮ್ಮ ಜಮೀನಿನ ಹದ್ದುಬಸ್ತು ಮಾಡಿಸಲು, ಪೊಲೀಸ್ ರಕ್ಷಣೆ ಕೋರಿ, 79,512 ರೂಪಾಯಿ ಪೊಲೀಸ್ ಇಲಾಖೆಗೆ ಕಟ್ಟಿ, ಪೊಲೀಸರಿಂದ ರಕ್ಷಣೆ ಕೊಡುವಂತೆ ಮನವಿ ಮಾಡಿಕೊಂಡಿದ್ದೇವು. ಭೂ ಮಾಪಕರನ್ನು ಕರೆದುಕೊಂಡು ಬಂದು, ಅಳತೆ ಮಾಡಿಸಿದ್ದೇವೆ. ನಮಗೆ ಬಂದ ಜಾಗದಲ್ಲಿ, 2 ಅಡಿಗಳಷ್ಟು ಭೂಮಿಯನ್ನು ದಲಿತರು ವಾಸವಾಗಿರುವ ಪ್ರದೇಶದ ಕಡೆಗೆ ಬಿಟ್ಟು ಕಲ್ಲುಗಳು ನೆಟ್ಟಿದ್ದೇವೆ. ಕೆಲವರು ಜೆಡಿಎಸ್ ಮುಖಂಡರು, ಉದ್ದೇಶ ಪೂರ್ವಕವಾಗಿ ನಮ್ಮನ್ನು ರಾಜಕೀಯವಾಗಿ ತೇಜೋವಧೆ ಮಾಡಬೇಕು, ನಮ್ಮ ಕುಟುಂಬದವರ ಮೇಲೆ ಅಟ್ರಾಸಿಟಿ ಹಾಕಿಸಲೇಬೇಕು ಎನ್ನುವ ದುರುದ್ದೇಶದಿಂದ ದಲಿತರನ್ನು ಎತ್ತಿಕಟ್ಟುತ್ತಿದ್ದಾರೆ. ದಲಿತರು ತಿಪ್ಪೆಗಳು ಹಾಕಿರುವ ಜಾಗ, ರಾಜಕಾಲುವೆ. ಅದರಲ್ಲೆ ಕೆಲವರು ಮನೆಗಳನ್ನು ಕಟ್ಟಿಕೊಂಡಿದ್ದಾರೆ. ರಾಜಕಾಲುವೆ ತೆರವು ಮಾಡಿಸಿದರೆ ಮನೆಗಳು ಕಳೆದುಕೊಳ್ಳುತ್ತಾರೆ ಎನ್ನುವ ಉದ್ದೇಶದಿಂದ ನಾವು ನಮ್ಮ ಜಮೀನನ್ನು ಮಾತ್ರ ಅಳತೆ ಮಾಡಿಸಿಕೊಳ್ಳುತ್ತಿದ್ದೇವೆ. ದಲಿತರು ಆರೋಪಿಸಿರುವಂತೆ ಇಲ್ಲಿ, ಗೋಮಾಳ ಇಲ್ಲ. ನಾವು ಮನೆಗಳು ಕಟ್ಟಿರುವುದು ನಮ್ಮ ಹಿಡುವಳಿ ಜಮೀನಿನಲ್ಲಿ ಎಂದರು. ನಾವು ಅಳತೆ ಮಾಡಲು ಹೋದಾಗ, ಕೆಲ ದಲಿತ ಮಹಿಳೆಯರನ್ನು ಕಳುಹಿಸಿ, ಜೆಸಿಬಿಗಳಿಗೆ ಅಡ್ಡ ಕೂರಿಸುವುದು, ಗಲಾಟೆ ಮಾಡಲಿ ಎಂದು ಪ್ರಚೋದನೆ ಮಾಡಿಸುತ್ತಿದ್ದಾರೆ. ಉದ್ದೇಶ ಪೂರ್ವಕವಾಗಿ ಮಾಡಿಸುತ್ತಿರುವುದು ಗೊತ್ತಿರುವ ಕಾರಣ, ಹಲವಾರು ಬಾರಿ ಸರ್ವೆ ಕಾರ್ಯ ಸ್ಥಗಿತಗೊಳಿಸಿದ್ದೇವೆಯೇ ಹೊರತು, ದಲಿತರ ಮೇಲೆ ನಾವು ದೌರ್ಜನ್ಯ ನಡೆಸಿಲ್ಲ. ನಮ್ಮ ವಿರುದ್ಧ ಸುಳ್ಳು ದೂರುಗಳು ನೀಡಿದ್ದಾರೆ. ನಮ್ಮ ಜಮೀನಿಗೆ ಕಾಂಪೌಂಡ್ ನಿರ್ಮಾಣ ಮಾಡಿಕೊಳ್ಳಲು ಸೂಕ್ತ ರಕ್ಷಣೆ ಕೊಡಬೇಕು ಎಂದು ಕೃಷ್ಣಪ್ಪ ಮನವಿ ಮಾಡಿದರು.

# ಲಂಡನ್ ವಿಶ್ವವಿದ್ಯಾಲಯಕ್ಕೆ ಯುಜಿಸಿ ಅನುಮೋದನೆ



ಬೆಂಗಳೂರು

ಭಾರತದ ಜಾಗತಿಕ ಶಿಕ್ಷಣದ ಆಶಯಗಳನ್ನು ಮುನ್ನಡೆಸುವ ನಿಟ್ಟಿನಲ್ಲಿ ಒಂದು ಮಹತ್ವದ ಹೆಜ್ಜೆಯಾಗಿ, ಬಿರ್ಕ್‌ಬೆಕ್, ಲಂಡನ್ ವಿಶ್ವವಿದ್ಯಾಲಯವು ಬೆಂಗಳೂರಿನಲ್ಲಿ ತನ್ನ ಜಾಗತಿಕ ಕ್ಯಾಂಪಸ್ ಅನ್ನು ಸ್ಥಾಪಿಸಲು ಭಾರತ ಸರ್ಕಾರದ ವಿಶ್ವವಿದ್ಯಾಲಯ ಧನಸಹಾಯ ಆಯೋಗದಿಂದ ಉದ್ದೇಶ ಪತ್ರವನ್ನು ಪಡೆದುಕೊಂಡಿದೆ.

ಈ ಉದ್ಘಾಟನಾ ಸಮಾರಂಭದಲ್ಲಿ ಸರ್ಕಾರದ ಗಣ್ಯರು, ಶಿಕ್ಷಣ ತಜ್ಞರು ಮತ್ತು ಅಂತರರಾಷ್ಟ್ರೀಯ ಸಂಸ್ಥೆಗಳ ನಾಯಕರು ಭಾಗವಹಿಸಿದ್ದರು. ಯುಜಿಸಿ ಅಧ್ಯಕ್ಷರು ಹಾಗೂ ಕೇಂದ್ರ ಶಿಕ್ಷಣ ಸಚಿವಾಲಯದ ಉನ್ನತ ಶಿಕ್ಷಣ ಇಲಾಖೆಯ ಕಾರ್ಯದರ್ಶಿ ವಿನೀತ್ ಜೋಶಿ, ಭಾರತಕ್ಕೆ ಬ್ರಿಟಿಷ್ ಹೈಕಮಿಷನರ್ ಲಿಂಡಿ ಕ್ಯಾಮರೂನ್, ಬರ್ಕ್‌ಬೆಕ್ ವಿಶ್ವವಿದ್ಯಾಲಯದ ಉಪಕುಲಪತಿ ಸ್ಯಾಲಿ ವೀಲರ್, ಬ್ರಿಟಿಷ್ ಕೌನ್ಸಿಲ್‌ನ ಭಾರತೀಯ ನಿರ್ದೇಶಕಿ ಆಲಿಸನ್ ಬ್ಯಾರೆಟ್, ಮತ್ತು ಶಿಕ್ಷಣ ಸಚಿವಾಲಯದ ಜಂಟಿ ಕಾರ್ಯದರ್ಶಿ ಕೆ. ಎಂ. ಪ್ರಫುಲ್ಲಚಂದ್ರ ಶರ್ಮಾ ಸೇರಿದಂತೆ ಬ್ರಿಟಿಷ್ ರಾಯಭಾರ ಕಚೇರಿ ಮತ್ತು ಬಿರ್ಕ್‌ಬೆಕ್ ವಿಶ್ವವಿದ್ಯಾಲಯದ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಗುಣಮಟ್ಟದ ಶಿಕ್ಷಣ: ಬೆಂಗಳೂರಿನ ಬಿರ್ಕ್‌ಬೆಕ್ ಕ್ಯಾಂಪಸ್‌ನಲ್ಲಿ ವಿದ್ಯಾರ್ಥಿಗಳು ಸಂಶೋಧನಾ–ಸಕ್ರಿಯ ಶಿಕ್ಷಣ ತಜ್ಞರಿಂದ ಪ್ರಾಯೋಗಿಕ ಕಲಿಕೆಯನ್ನು ಪಡೆಯಲಿದ್ದಾರೆ. ಇಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ವಿಶ್ವವಿಖ್ಯಾತ 'ಯುನಿವರ್ಸಿಟಿ ಆಫ್ ಲಂಡನ್'ನ ಪದವಿಗಳನ್ನು ನೀಡಲಾಗುತ್ತದೆ, ಇವುಗಳು ಜಾಗತಿಕವಾಗಿ ಉದ್ಯೋಗದಾತರಿಂದ ಮಾನ್ಯತೆ ಪಡೆದಿವೆ. ಆಧುನಿಕ ಕ್ಯಾಂಪಸ್: ಬೆಂಗಳೂರಿನ ಪ್ರಮುಖ ತಂತ್ರಜ್ಞಾನ ಮತ್ತು ವ್ಯಾಪಾರ ಕೇಂದ್ರವಾದ ಸತ್ವ ಟೆಕ್ ಪಾರ್ಕ್ ನಲ್ಲಿ ಈ ಕ್ಯಾಂಪಸ್ ತಲೆ ಎತ್ತಲಿದೆ.

ಇಲ್ಲಿ ಜಾಗತಿಕ ತಂತ್ರಜ್ಞಾನ ಕಂಪನಿಗಳ ಪ್ರಧಾನ ಕಚೇರಿಗಳಿರುವುದರಿಂದ ವಿದ್ಯಾರ್ಥಿಗಳಿಗೆ ಉದ್ಯಮದ ಸಂಪರ್ಕ ಸುಲಭವಾಗಲಿದೆ.

ಯುಜಿಸಿ ಅಧ್ಯಕ್ಷರಾದ ವಿನೀತ್ ಜೋಶಿ ಮಾತನಾಡಿ, "ಈ ಉದ್ದೇಶ ಪತ್ರದ ಹಸ್ತಾಂತರವು ಭಾರತೀಯ ವಿದ್ಯಾರ್ಥಿಗಳಿಗೆ ಜಾಗತಿಕ ಕಲಿಕೆಗೆ ದಾರಿಯಾಗಿದೆ. ವಿದ್ಯಾರ್ಥಿಗಳು ಈಗ ಅಂತರರಾಷ್ಟ್ರೀಯ ಮಟ್ಟದ ಶಿಕ್ಷಣವನ್ನು ವಿದೇಶದಲ್ಲಿ ಓದುವುದಕ್ಕಿಂತ ಸುಮಾರು 60% ಕಡಿಮೆ ವೆಚ್ಚದಲ್ಲಿ ಪಡೆಯಬಹುದು. ಇದು ಶಿಕ್ಷಣದಲ್ಲಿ ಸಮಾನತೆ ಮತ್ತು ಅವಕಾಶಗಳನ್ನು ವಿಸ್ತರಿಸಲು ಸಹಕಾರಿ," ಎಂದು ತಿಳಿಸಿದರು.

# ಕುಡಿಯುವ ನೀರಿಗೆ ಕೊರತೆಯಾಗದಂತೆ ನಿಗಾವಹಿಸಿ: ಡಿಸಿ ರವಿ

ಕೋಲಾರ

ಜಿಲ್ಲೆಯಲ್ಲಿ ಬೇಸಿಗೆಯನ್ನು ಸಮರ್ಥವಾಗಿ ಎದುರಿಸಲು ಮತ್ತು ಕುಡಿಯುವ ನೀರಿನ ಸಮಸ್ಯೆ ತಲೆದೋರದಂತೆ ಮುನ್ನೆಚ್ಚರಿಕೆ ವಹಿಸಲು ಜಿಲ್ಲಾಧಿಕಾರಿ ಡಾ. ಎಂ.ಆರ್. ರವಿ ಅಧಿಕಾರಿಗಳಿಗೆ ತಾಕೀತು ಮಾಡಿದರು.

ಸೋಮವಾರ ಜಿಲ್ಲಾಧಿಕಾರಿಗಳ ಕೆಸ್ವಾನ್ ಸಭಾಂಗಣದಲ್ಲಿ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡುತ್ತಿದ್ದರು. 2025ರ ಜನವರಿಯಿಂದ ನವೆಂಬರ್‌ವರೆಗೆ ಜಿಲ್ಲೆಯಲ್ಲಿ 735.1 ಮಿ.ಮೀ ವಾಡಿಕೆ ಮಳೆಯಾಗಬೇಕಿದ್ದು, 927.0 ಮಿ.ಮೀ ಮಳೆಯಾಗಿದೆ (ಶೇ. 26 ರಷ್ಟು ಹೆಚ್ಚುವರಿ). 2026ರ ಜನವರಿಯಿಂದ ಏಪ್ರಿಲ್ 12ರವರೆಗೆ 24.6 ಮಿ.ಮೀ ವಾಡಿಕೆ ಮಳೆಗೆ ಬದಲಾಗಿ 26.0 ಮಿ.ಮೀ ಮಳೆಯಾಗಿದೆ.

ಜಿಲ್ಲೆಯ ಸರಾಸರಿ ಅಂತರ್ಜಲ ಮಟ್ಟವು ಸುಧಾರಿಸಿದ್ದು, 2019 ರಲ್ಲಿ 77.06 ಮೀಟರ್‌ಗಳಷ್ಟಿದ್ದ ಆಳವು 2025 ರ ವೇಳೆಗೆ 37.52 ಮೀಟರ್‌ಗಳಿಗೆ ತಲುಪಿದೆ ಎಂದರು.

ಮುಂದಿನ 3 ತಿಂಗಳಲ್ಲಿ ಜಿಲ್ಲೆಯ 239 ಗ್ರಾಮಗಳು ಮತ್ತು 52 ನಗರ ವಾರ್ಡ್‌ಗಳಲ್ಲಿ ನೀರಿನ ಕೊರತೆ ಉಂಟಾಗುವ ಸಾಧ್ಯತೆಯನ್ನು ಗುರುತಿಸಲಾಗಿದೆ ಎಂದು ಅವರು ತಿಳಿಸಿದರು. ಮುಂಜಾಗ್ರತಾ ಕ್ರಮವಾಗಿ ಗ್ರಾಮೀಣ ಭಾಗದಲ್ಲಿ 70 ಮತ್ತು ನಗರ ಪ್ರದೇಶದಲ್ಲಿ 24 ಹೆಚ್ಚಿನ ಇಳುವರಿ ನೀಡುವ ಖಾಸಗಿ ಕೊಳವೆಬಾವಿಗಳನ್ನು



ಗುರುತಿಸಲಾಗಿದೆ. ಪ್ರಸ್ತುತ ಬಂಗಾರಪೇಟೆ, ಕೆ.ಜಿ.ಎಫ್ ಮತ್ತು ಮಾಲೂರು ತಾಲ್ಲೂಕುಗಳ 15 ಗ್ರಾಮಗಳಿಗೆ ಖಾಸಗಿ ಕೊಳವೆಬಾವಿಗಳ ಮೂಲಕ ನೀರು ಪೂರೈಸಲಾಗುತ್ತಿದೆ. ತುರ್ತು ಸಂದರ್ಭದಲ್ಲಿ ಟ್ಯಾಂಕರ್ ಮೂಲಕ ನೀರು ಪೂರೈಸಲು ವೈಜ್ಞಾನಿಕ ದರ ನಿಗದಿಪಡಿಸುವಂತೆ ಜಿಲ್ಲಾಧಿಕಾರಿಗಳು ಆಯಾ ತಹಶೀಲ್ದಾರ್‌ಗಳಿಗೆ ಸೂಚಿಸಿದರು.

ಯರಗೋಳ್ ಜಲಾಶಯದಿಂದ ಕೋಲಾರ, ಮಾಲೂರು ಮತ್ತು ಬಂಗಾರಪೇಟೆ ನಗರಸಭೆಗಳ ವಿವಿಧ ವಾರ್ಡ್‌ಗಳಿಗೆ ಪ್ರತಿನಿತ್ಯ ನೀರು ಪೂರೈಸಲಾಗುತ್ತಿದ್ದು, ಜಲಾಶಯದಲ್ಲಿ ಪ್ರಸ್ತುತ 186 ಒಅಈಖ ನೀರು ಲಭ್ಯವಿದೆ ಇದು ಈಬಾರಿ ಬೇಸಿಗೆಗೆ ಸಾಕಷ್ಟು ದಾಸ್ತಾನು ಎಂದು ಅಭಿಪ್ರಾಯಪಟ್ಟರು.

ಜಿಲ್ಲೆಯಲ್ಲಿ ಪ್ರಸ್ತುತ 2,76,432 ಟನ್ ಮೇವು ಲಭ್ಯವಿದ್ದು, ಇದು ಮುಂದಿನ 23 ವಾರಗಳಿಗೆ ಸಾಕಾಗಲಿದೆ ಎಂದು ತಿಳಿಸಿದರು. ಜಾನುವಾರುಗಳ ಕುಡಿಯುವ ನೀರಿಗಾಗಿ ಜಿಲ್ಲೆಯಾದ್ಯಂತ ಒಟ್ಟು 1,316 ನೀರಿನ ತೊಟ್ಟಿಗಳ ವ್ಯವಸ್ಥೆ ಮಾಡಲಾಗಿದೆ ಎಂದರು. ಜಿಲ್ಲಾ ಶಾಖ ತರಂಗ ಕ್ರಿಯಾ ಯೋಜನೆ–2026 ರನ್ವಯ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಸೂಚಿಸಿದರು. ಜಿಲ್ಲೆಯ ಎಲ್ಲಾ ತಾಲ್ಲೂಕಿನ ಆಸ್ಪತ್ರೆಗಳಲ್ಲಿ ಅಗತ್ಯ ಔಷಧಗಳು, ಐವಿ ಫ್ಲೂಯಿಡ್ಸ್ ಮತ್ತು ಓಆರ್‌ಎಸ್ ದಾಸ್ತಾನು ಇರುವಂತೆ ನೋಡಿಕೊಳ್ಳಲು ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದರು. ಬಿಸಿಲಿನ ತೀವ್ರತೆ ಹೆಚ್ಚಿರುವ ಅವಧಿಯಲ್ಲಿ ನರೇಗಾ ಕೆಲಸದ ಸಮಯವನ್ನು ಬದಲಾಯಿಸಲು ಸೂಚನೆ ನೀಡಲಾಗಿದೆ. ಮಾರ್ಚ್ 18 ರಿಂದ ಏಪ್ರಿಲ್ 6ರವರೆಗೆ ಉಂಟಾದ ಆಲಿಕಲ್ಲು ಮಳೆಯಿಂದಾಗಿ ಸುಮಾರು 37.50 ಹೆಕ್ಟೇರ್ ತೋಟಗಾರಿಕೆ ಬೆಳೆ ಹಾನಿಯಾಗಿದೆ. ಈ ಸಂಬಂಧ 40 ರೈತರಿಗೆ ಪರಿಹಾರ ನೀಡಲು ಸರ್ಕಾರಕ್ಕೆ ವರದಿ ಸಲ್ಲಿಸಲಾಗಿದೆ. ಜಿಲ್ಲಾಧಿಕಾರಿಗಳ ಮತ್ತು ತಹಶೀಲ್ದಾರ್‌ಗಳ ಪಿ.ಡಿ ಖಾತೆಯಲ್ಲಿ ಒಟ್ಟು 1,240.24 ಲಕ್ಷ ರೂ. ಎಸ್‌ಡಿಆರ್‌ಎಫ್ ಅನುದಾನ ಲಭ್ಯವಿದೆ ಎಂದು ತಿಳಿಸಿದರು.

ಸಾರ್ವಜನಿಕರ ದೂರುಗಳಿಗೆ ತಕ್ಷಣ ಸ್ಪಂದಿಸದ ಮತ್ತು ಕುಡಿಯುವ ನೀರಿನ ಪೂರೈಕೆಯಲ್ಲಿ ನಿರ್ಲಕ್ಷ್ಯ ತೋರುವ ಅಧಿಕಾರಿಗಳ ವಿರುದ್ಧ ವಿಪತ್ತು ನಿರ್ವಹಣಾ ಕಾಯ್ದೆಯಡಿ ಕಠಿಣ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಎಚ್ಚರಿಸಿದರು. ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಪ್ರವೀಣ್. ಪಿ. ಬಾಗೇವಾಡಿ, ಜಿಲ್ಲಾಧಿಕಾರಿ ಪೊಲೀಸ್ ವರಿಷ್ಟಾಧಿಕಾರಿ ಕನ್ನಿಕಾ ಸಿಕ್ರಿವಾಲ್, ಅಪರ ಜಿಲ್ಲಾಧಿಕಾರಿ ಎಸ್. ಎಂ. ಮಂಗಳ, ಎಲ್ಲಾ ತಹಸೀಲ್ದಾರ್‌ಗಳು, ಎಲ್ಲಾ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹನಾಧಿಕಾರಿಗಳು, ತೋಟಗಾರಿಕೆ ಉಪನಿರ್ದೇಶಕ ಕುಮಾರಸ್ವಾಮಿ, ಪಶುಪಾಲನಾ ಇಲಾಖೆಯ ಉಪನಿರ್ದೇಶಕ ಡಾ. ರಮೇಶ್, ಆರ್‌ಸಿಹೆಚ್ ಅಧಿಕಾರಿ ಡಾ. ಚಾರಿಣಿ, ಜಿಲ್ಲಾ ಭುವಿಜ್ಞಾನಿ ತಿಪ್ಪೆಸ್ವಾಮಿ, ಬೇತಮಂಗಲ ಈ ಈ ಚಂದ್ರಶೇಖರ, ಬೆಸ್ಕಮ್ನ ಈ ಈ ಶುಭ ಹಾಗೂ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಉಚಿತ ಆರೋಗ್ಯ ಶಿಬಿರ ಯಶಸ್ವಿ




ಕೆಜಿಎಫ್

ನಗರಸಭೆ ವ್ಯಾಪ್ತಿಯ 29ನೇ ಗಣೇಶ್‌ಪುರಂ ವಾರ್ಡ್‌ನ ನಾಚಪಲ್ಲಿಯಲ್ಲಿ ಭಾನುವಾರದಂದು ಡಾ. ಅಂಬೇಡ್ಕರ್ ಯುವಕರ ಸಂಘ ಹಾಗೂ ಬೆಂಗಳೂರಿನ ವೈದೇಹಿ ಆಸ್ಪತ್ರೆಯ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಉಚಿತ ಮೆಗಾ ವೈದ್ಯಕೀಯ ತಪಾಸಣಾ ಶಿಬಿರವು ಯಶಸ್ವಿಯಾಗಿ ಜರುಗಿತು.

ಗಣೇಶ್‌ಪುರಂ ನಾಚಪಲ್ಲಿಯ ನೀರಿನ ಟ್ಯಾಂಕ್ ಆವರಣದಲ್ಲಿ ನಡೆದ ಈ ಶಿಬಿರದ ನೇತೃತ್ವವನ್ನು ಯುವಕರ ಸಂಘದ ಅಧ್ಯಕ್ಷರಾದ ಆರ್. ಪ್ರಭು ವಹಿಸಿದ್ದರು.

ಸ್ಥಳದಲ್ಲೇ ತಪಾಸಣೆ ಮತ್ತು ಉಚಿತ ಔಷಧಿ ವಿತರಣೆ:

ಶಿಬಿರಕ್ಕೆ ಆಗಮಿಸಿದ ನೂರಾರು ಜನರಿಗೆ ವಿವಿಧ ಕಾಯಿಲೆಗಳಿಗೆ ಸಂಬಂಧಿಸಿದಂತೆ ತಜ್ಞ ವೈದ್ಯರು ತಪಾಸಣೆ ನಡೆಸಿದರು. ಶಿಬಿರದ ವಿಶೇಷತೆಗಳೆಂದರೆ.

ಲ್ಯಾಬ್ ಪರೀಕ್ಷೆ: ಬಿಪಿ (ರಕ್ತದೊತ್ತಡ) ಮತ್ತು ಸಕ್ಕರೆ ಕಾಯಿಲೆಗೆ ಸಂಬಂಧಿಸಿದ ಪರೀಕ್ಷೆಗಳನ್ನು ಸ್ಥಳದಲ್ಲೇ ನಡೆಸಲಾಯಿತು.

ಹೃದ್ರೋಗ ತಪಾಸಣೆ: ಹೃದ್ರೋಗದ ಲಕ್ಷಣಗಳಿರುವವರಿಗೆ ಇಸಿಜಿ ಮತ್ತು ಎಕೋ ಪರೀಕ್ಷೆಗಳನ್ನು ನಡೆಸಿ, ವರದಿಗಳನ್ನು ತಕ್ಷಣವೇ ನೀಡಲಾಯಿತು.

ಔಷಧಿ ವಿತರಣೆ: ತಪಾಸಣೆಯ ನಂತರ ರೋಗಿಗಳಿಗೆ ಅಗತ್ಯವಿರುವ ಔಷಧಿಗಳನ್ನು ಉಚಿತವಾಗಿ ವಿತರಿಸಲಾಯಿತು.

ಸುತ್ತಮುತ್ತಲ ಗ್ರಾಮಸ್ಥರಿಂದ ಸದುಪಯೋಗ: ಶಿಬಿರದ ಕುರಿತು ಮಾತನಾಡಿದ ಅಧ್ಯಕ್ಷ ಆರ್. ಪ್ರಭು ಅವರು, "ನಾಚಪಲ್ಲಿ ಸೇರಿದಂತೆ ಪೊಟ್ಟೆಪಲ್ಲಿ, ಸುಭಾಶ್‌ನಗರ, ದಿನ್ನೆಹಳ್ಳಿ ಮತ್ತು ಪಾಲ್ಕಾರ್ ಗುಡಿಸಲು ಪ್ರದೇಶಗಳ ಜನಸಾಮಾನ್ಯರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಈ ಶಿಬಿರದ ಸದುಪಯೋಗ ಪಡೆದುಕೊಂಡಿದ್ದಾರೆ. ಬಡಜನರಿಗೆ ಉತ್ತಮ ವೈದ್ಯಕೀಯ ಸೇವೆ ತಲುಪಿಸುವುದೇ ನಮ್ಮ ಸಂಘದ ಮುಖ್ಯ ಉದ್ದೇಶ," ಎಂದು ತಿಳಿಸಿದರು.

ವೈದೇಹಿ ಆಸ್ಪತ್ರೆಯ ನುರಿತ ತಜ್ಞ ವೈದ್ಯರ ತಂಡ ಮತ್ತು ಆರೋಗ್ಯ ಸಿಬ್ಬಂದಿಯ ಸೇವೆಯನ್ನು ಸ್ಮರಿಸಿದ ಪ್ರಭು ಅವರು, ಶಿಬಿರದ ಯಶಸ್ಸಿಗೆ ಸಹಕರಿಸಿದ ಎಲ್ಲರಿಗೂ ಕೃತಜ್ಞತೆ ಸಲ್ಲಿಸಿದರು.

# 'ಬೀದಿ ನಾಯಿಗಳ ಅಟ್ಟಹಾಸಕ್ಕೆ ಬ್ರೇಕ್ ಹಾಕಿ'



ಚಿಕ್ಕಬಳ್ಳಾಪುರ

ಜಿಲ್ಲಾ ಕೇಂದ್ರವಾದ ಚಿಕ್ಕಬಳ್ಳಾಪುರ ನಗರದ ವಿವಿಧ ಬಡಾವಣೆಗಳಲ್ಲಿ ಬೀದಿ ನಾಯಿಗಳ ಹಾವಳಿ ಮಿತಿಮೀರಿದ್ದು, ಸಾರ್ವಜನಿಕರು ರಸ್ತೆಯಲ್ಲಿ ಓಡಾಡಲು ಭಯಪಡುವಂತ ಪರಿಸ್ಥಿತಿ ನಿರ್ಮಾಣವಾಗಿದೆ. ರೇಬೀಸ್ ಭೀತಿ ಹಾಗೂ ನಾಯಿ ಕಡಿತದ ಪ್ರಕರಣಗಳು ಹೆಚ್ಚುತ್ತಿರುವುದು ನಾಗರಿಕರ ನಿದ್ದೆಗೆಡಿಸಿದೆ.

ನಗರದ ಪ್ರಶಾಂತನಗರ, ಸುಣ್ಣಕಲ್ಲು ಬೀದಿ, ಜೈ ಭೀಮ್ ನಗರ, ಸಾಧು ಮಠ ಸರ್ಕಲ್, ಕೋಟೆ, ಕಂದವಾರಪೇಟೆ ಹಾಗೂ ಸರ್ ಎಂ.ವಿ. ಬಡಾವಣೆ ಸೇರಿದಂತೆ ಪ್ರಮುಖ ಪ್ರದೇಶಗಳಲ್ಲಿ ನಾಯಿಗಳ ಹಿಂಡು ಹಿಂಡೇ ಪ್ರತ್ಯಕ್ಷವಾಗುತ್ತಿವೆ. ರಾತ್ರಿ ವೇಳೆ ಮಾತ್ರವಲ್ಲದೆ, ಹಗಲಿನಲ್ಲಿಯೂ ಬೈಕ್ ಸವಾರರನ್ನು ಬೆನ್ನಟ್ಟುವುದು ಮತ್ತು ಶಾಲಾ ಮಕ್ಕಳ ಮೇಲೆ ದಾಳಿ ಮಾಡುವುದು ಇಲ್ಲಿ ಸರ್ವೇಸಾಮಾನ್ಯವಾಗಿದೆ.

ಸ್ಥಳೀಯ ನಗರಸಭೆಯ ನಿರ್ಲಕ್ಷ್ಯದಿಂದಾಗಿ ಬೀದಿ ನಾಯಿಗಳ ಸಂತಾನೋತ್ಪತ್ತಿ ಸಂಖ್ಯೆ ಗಣನೀಯವಾಗಿ ಏರಿಕೆಯಾಗುತ್ತಿದೆ. ಬಿಡಾಡಿ ನಾಯಿಗಳನ್ನು ಸಾರ್ವಜನಿಕ ಸ್ಥಳಗಳಿಂದ ತೆರವುಗೊಳಿಸಲು ನ್ಯಾಯಾಲಯದ ಸೂಚನೆಗಳಿದ್ದರೂ, ಅಧಿಕಾರಿಗಳು ಕಣ್ಣಿದ್ದೂ ಕುರುಡರಂತೆ ವರ್ತಿಸುತ್ತಿದ್ದಾರೆ ಎಂಬ ಆರೋಪ ಕೇಳಿಬಂದಿದೆ. ಸಂತಾನಹರಣ ಶಸ್ತ್ರಚಿಕಿತ್ಸೆ ಮತ್ತು ಲಸಿಕೆ ಹಾಕುವ ಕಾರ್ಯಕ್ರಮಗಳು ಕೇವಲ ಹೆಸರಿಗಷ್ಟೇ ಸೀಮಿತವಾಗಿವೆ ಎಂದು ಸಾರ್ವಜನಿಕರು ದೂರಿದ್ದಾರೆ.

ಪರಿಹಾರಕ್ಕಾಗಿ ನಾಗರಿಕರ ಒತ್ತಾಯ:

ಬೀದಿ ನಾಯಿಗಳನ್ನು ಕೊಲ್ಲುವುದು ಕಾನೂನುಬಾಹಿರವಾಗಿರುವುದರಿಂದ, ನಗರಸಭೆಯು ಶಾಶ್ವತ ಪರಿಹಾರಕ್ಕೆ ಮುಂದಾಗಬೇಕಿದೆ.

ಸಂತಾನಹರಣ ಚಿಕಿತ್ಸೆ: ನಗರದ ಪ್ರತಿ ವಾರ್ಡ್‌ಗಳಲ್ಲೂ ನಾಯಿಗಳನ್ನು ಹಿಡಿದು ವೈಜ್ಞಾನಿಕವಾಗಿ ಸಂತಾನಹರಣ ಚಿಕಿತ್ಸೆ ನೀಡಬೇಕು.

ರೇಬೀಸ್ ಮುಕ್ತ ನಗರವನ್ನಾಗಿಸಲು ವ್ಯಾಪಕ ಲಸಿಕೆ ಕಾರ್ಯಕ್ರಮ ಹಮ್ಮಿಕೊಳ್ಳಬೇಕು.

"ರೈಲು ನಿಲ್ದಾಣ ಮತ್ತು ಬಸ್ ನಿಲ್ದಾಣಗಳಲ್ಲಿ ನಾಯಿಗಳ ಕಾಟದಿಂದ ಪ್ರಯಾಣಿಕರು ಪರದಾಡುತ್ತಿದ್ದಾರೆ. ಅನಾಹುತಗಳು ಸಂಭವಿಸುವ ಮುನ್ನವೇ ನಗರಸಭೆ ಎಚ್ಚೆತ್ತುಕೊಳ್ಳಬೇಕು," ಎಂದು ಬಡಾವಣೆ ನಿವಾಸಿಗಳು ಮಾಧ್ಯಮಗಳ ಮೂಲಕ ಆಗ್ರಹಿಸಿದ್ದಾರೆ.

# ಭಗತ್ ಸಿಂಗ್ ಚಾರಿಟಬಲ್ ಟ್ರಸ್ಟ್ ವತಿಯಿಂದ ಅದ್ಧೂರಿ 'ರಾಮೋತ್ಸವ' ಬೈಕ್ ರ‍್ಯಾಲಿ

ಚಿಕ್ಕಬಳ್ಳಾಪುರ

"ಶ್ರೀರಾಮ ಭಕ್ತಿ – ರಾಷ್ಟ್ರ ಶಕ್ತಿ" ಎಂಬ ಘೋಷವಾಕ್ಯದೊಂದಿಗೆ ನಗರದಲ್ಲಿ ಭಗತ್ ಸಿಂಗ್ ಚಾರಿಟಬಲ್ ಟ್ರಸ್ಟ್ ಮತ್ತು ಶ್ರೀರಾಮಸೇವಾ ಸಮಿತಿ ವತಿಯಿಂದ ಎರಡನೇ ವರ್ಷದ 'ರಾಮೋತ್ಸವ' ಬೈಕ್ ರ‍್ಯಾಲಿ ಅತ್ಯಂತ ವಿಜೃಂಭಣೆಯಿಂದ ಜರುಗಿತು.

ನಗರದ ಹೊರವಲಯದ ಸೂಲಾಲಪ್ಪನ ದಿನ್ನೆಯ ಶ್ರೀ ವೀರಾಂಜನೇಯಸ್ವಾಮಿ ದೇವಾಲಯದಲ್ಲಿ ಭಗತ್ ಸಿಂಗ್ ಚಾರಿಟಬಲ್ ಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷ ಸಂದೀಪ್ ಬಿ. ರೆಡ್ಡಿ ಅವರು ರ‍್ಯಾಲಿಗೆ ಚಾಲನೆ ನೀಡಿದರು.

ಜಾತಿ–ಮತ ಮೀರಿದ ಹಿಂದುತ್ವದ ಸಂಘಟನೆ: ರ‍್ಯಾಲಿಯ ನೇತೃತ್ವ ವಹಿಸಿ ಮಾತನಾಡಿದ ಸಂದೀಪ್ ರೆಡ್ಡಿ, "ಯಾವುದೇ ಆಸೆ ಅಥವಾ ಲಾಭದ ನಿರೀಕ್ಷೆಯಿಲ್ಲದೆ ಯುವ ಸಮುದಾಯವು ಇಷ್ಟು ದೊಡ್ಡ ಸಂಖ್ಯೆಯಲ್ಲಿ ಭಾಗವಹಿಸಿರುವುದು ಶ್ರೀರಾಮನ ಮಹಿಮೆಯೇ ಸರಿ. ಬಿಸಿಲನ್ನು ಲೆಕ್ಕಿಸದೆ ಸಾವಿರಾರು ಭಕ್ತರು ಶ್ರೀರಾಮನ ನಾಮಸ್ಮರಣೆ ಮಾಡುತ್ತಾ ರ‍್ಯಾಲಿಯಲ್ಲಿ ಪಾಲ್ಗೊಂಡಿದ್ದಾರೆ. ಜಾತಿ, ಮತಗಳನ್ನು ಮೀರಿ ಹಿಂದುತ್ವವನ್ನು ಕಟ್ಟುವ ಮತ್ತು ರಾಮನ ಆದರ್ಶಗಳನ್ನು ಪಾಲಿಸಿ ದೇಶವನ್ನು ಸದೃಢಗೊಳಿಸುವ ಉದ್ದೇಶದಿಂದ ಈ ಕಾರ್ಯಕ್ರಮ ಆಯೋಜಿಸಲಾಗಿದೆ," ಎಂದರು.

ನಗರವಿಡೀ ಕೇಸರಿಮಯ: ಬೈಕ್ ರ‍್ಯಾಲಿಯ ಹಿನ್ನೆಲೆಯಲ್ಲಿ ಕಳೆದ ಮೂರು ದಿನಗಳಿಂದಲೂ ಚಿಕ್ಕಬಳ್ಳಾಪುರ ನಗರವು ಕೇಸರಿಮಯವಾಗಿ ಕಂಗೊಳಿಸುತ್ತಿತ್ತು. ರಸ್ತೆಯುದ್ದಕ್ಕೂ ಓಂಕಾರದ ಬ್ಯಾನರ್‌ಗಳು ರಾರಾಜಿಸಿದವು. ರ‍್ಯಾಲಿಯು



ವೀರಾಂಜನೇಯ ಸ್ವಾಮಿ ದೇವಾಲಯದಿಂದ ಆರಂಭವಾಗಿ ಬಿ.ಬಿ. ರಸ್ತೆ, ಬಜಾರ್ ರಸ್ತೆ, ಗಂಗಮ್ಮನಗುಡಿ ರಸ್ತೆ ಹಾಗೂ ಎಂ.ಜಿ. ರಸ್ತೆ ಸೇರಿದಂತೆ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿತು.

ಮೊಳಗಿದ 'ಜೈ ಶ್ರೀರಾಮ್' ಘೋಷಣೆ: ನಗರ ಹಾಗೂ ಗ್ರಾಮೀಣ ಭಾಗಗಳಿಂದ ಬಂದಿದ್ದ ಸಾವಿರಾರು ಯುವಕರು ದ್ವಿಚಕ್ರ ವಾಹನಗಳಲ್ಲಿ ಸಾಗುತ್ತಾ "ಜೈ ಶ್ರೀರಾಮ್, ಶ್ರೀರಾಮ್ ಜಯ ಜಯ ರಾಮ್" ಎಂದು ಘೋಷಣೆಗಳನ್ನು ಮೊಳಗಿಸಿದರು. ಶ್ರೀರಾಮನವಮಿಯಂದು ಎಲ್ಲರೂ ವಿವಿಧ ಸೇವಾ ಕಾರ್ಯಗಳಲ್ಲಿ ತೊಡಗಿರುತ್ತಾರೆ ಎಂಬ ಕಾರಣಕ್ಕೆ ಈ ಭಾನುವಾರ ರ‍್ಯಾಲಿಯನ್ನು ಹಮ್ಮಿಕೊಳ್ಳಲಾಗಿತ್ತು ಎಂದು ಸಂಘಟಕರು ತಿಳಿಸಿದರು.

ಕಾರ್ಯಕ್ರಮದಲ್ಲಿ ರಾಮೋತ್ಸವ ಸಮಿತಿಯ ಸುಹಾಸ್, ರಘು, ಹರ್ಷ, ಗಿರೀಶ್, ಸುನಿಲ್, ಹರಿಕೃಷ್ಣ, ಭುವನ್, ನವೀನ್ ಮಂಚೇನಹಳ್ಳಿ, ಶ್ರೀಕಾಂತ್ ಸಿ.ವಿ. ಸೇರಿದಂತೆ ಸಾವಿರಾರು ಸಂಖ್ಯೆಯಲ್ಲಿ ರಾಮಭಕ್ತರು ಮತ್ತು ಯುವಪಡೆ ಪಾಲ್ಗೊಂಡಿದ್ದರು.

# ಶಾಸಕ ಸುಬ್ಬಾರೆಡ್ಡಿಗೆ ಎನ್‌ಡಿಎ ಮುಖಂಡ ಹರಿನಾಥರೆಡ್ಡಿ ಬಹಿರಂಗ ಸವಾಲ್

ಬಾಗೇಪಲ್ಲಿ

"ನಿಮಗೆ ತಾಕತ್ತಿದ್ದರೆ ಮಂಗಳವಾರ ನಡೆಯಲಿರುವ ಡಾ. ಬಿ.ಆರ್. ಅಂಬೇಡ್ಕರ್ ಮತ್ತು ಬಾಬು ಜಗಜೀವನ್‌ರಾಂ ಜಯಂತಿ ಮಹೋತ್ಸವವನ್ನು ನಿಲ್ಲಿಸಿ ನೋಡೋಣ," ಎಂದು ಶಾಸಕ ಎಸ್.ಎನ್. ಸುಬ್ಬಾರೆಡ್ಡಿ ಅವರಿಗೆ ಎನ್‌ಡಿಎ ಮುಖಂಡ ಹರಿನಾಥರೆಡ್ಡಿ ನೇರ ಸವಾಲು ಎಸೆದಿದ್ದಾರೆ.

ಪಟ್ಟಣದ ಪತ್ರಕರ್ತರ ಭವನದಲ್ಲಿ ಹರಿನಾಥರೆಡ್ಡಿ ಚಾರಿಟಬಲ್ ಟ್ರಸ್ಟ್ ಹಾಗೂ ದಲಿತ ಮುಖಂಡರ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಲಾಗಿದ್ದ ಸುದ್ದಿಗೋಷ್ಠಿಯಲ್ಲಿ ಅವರು ಶಾಸಕರ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು.

ಅನುಮತಿ ರದ್ದು ಶಾಸಕರ ವಿರುದ್ಧ ಕಿಡಿ: ಸಂಸದ ಡಾ. ಕೆ. ಸುಧಾಕರ್ ಅವರ ಸೂಚನೆಯಂತೆ ಯುವಜನ ಕ್ರೀಡಾ ಇಲಾಖೆಯಿಂದ ಪಟ್ಟಣದ ಕ್ರೀಡಾಂಗಣದಲ್ಲಿ ಜಯಂತಿ ಆಚರಿಸಲು ಅನುಮತಿ ಪಡೆಯಲಾಗಿತ್ತು. ಆದರೆ, ಶಾಸಕರು ಅಧಿಕಾರಿಗಳ ಮೇಲೆ ಒತ್ತಡ ಹೇರಿ ಈ ಅನುಮತಿಯನ್ನು ರದ್ದುಪಡಿಸಿದ್ದಾರೆ ಎಂದು ಹರಿನಾಥರೆಡ್ಡಿ ಆರೋಪಿಸಿದರು. "ಸಮಾಜಸೇವೆಗೆ ಅಡ್ಡಿಪಡಿಸುವ ಇಂತಹ ನೀಚ ರಾಜಕೀಯ ಬಿಟ್ಟು ಕ್ಷೇತ್ರದ ಅಭಿವೃದ್ಧಿಯ ಕಡೆ ಗಮನಹರಿಸಿ," ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.




"ಇದೇನಾ ನಿಮ್ಮ ಅಭಿವೃದ್ಧಿ?"

ಶಾಸಕರ ವಿರುದ್ಧ ಹತ್ತಾರು ಪ್ರಶ್ನೆಗಳನ್ನು ಎಸೆದ ಹರಿನಾಥರೆಡ್ಡಿ.

ಕ್ಷೇತ್ರದಲ್ಲಿ ಬೇರೆಯವರು ಸಮಾಜಸೇವೆ ಮಾಡಬಾರದೇ?

ಟಾರ್‌ಪ್ಲಾಂಟ್ ನಿಮ್ಮದೇ ಇರಬೇಕು, ರೈತರು ಜಮೀನನ್ನು ನಿಮಗೇ ಮಾರಬೇಕು ಎಂಬ ಅಲಿಖಿತ ನಿಯಮವಿದೆಯೇ?

ನಿಮಗೆ ವಿರುದ್ಧವಾಗಿ ಮಾತನಾಡಿದರೆ ರೌಡಿಶೀಟ್ ಹಾಕಿಸಿ ರಾಜಕೀಯವಾಗಿ ತುಳಿಯುತ್ತೀರಾ?

"ನಾನೂ ಇದೇ ಕ್ಷೇತ್ರದವನು, ನನಗೂ ಇಲ್ಲಿ ದೊಡ್ಡ ಬಂಧುಬಳಗವಿದೆ. ನೀವು ಎಷ್ಟೇ ಅಡ್ಡಿಪಡಿಸಿದರೂ ಜಯಂತಿ ಮಹೋತ್ಸವಗಳು ನಡೆದೇ ತೀರುತ್ತವೆ," ಎಂದು ಅವರು ಗುಡುಗಿದರು.

ದಲಿತ ವಿರೋಧಿ ಧೋರಣೆ: ಅ.ನ. ಮೂರ್ತಿ ಆರೋಪ

ಮಾದಾರ ಮಹಾಸಂಘದ ಅಧ್ಯಕ್ಷ ಅ.ನ. ಮೂರ್ತಿ ಮಾತನಾಡಿ, "ಇದೇ 8 ರಂದು ಅನುಮತಿ ನೀಡಿ, ಮರುದಿನವೇ (ಇದೇ 9) ಯಾವುದೇ ಕಾರಣ ನೀಡದೆ ರದ್ದುಪಡಿಸಲಾಗಿದೆ. ದಲಿತರ ಮತಗಳಿಂದ ಗೆದ್ದ ಶಾಸಕರು ಈಗ ದಲಿತ ಮಹಾಪುರುಷರ ಜಯಂತಿಗೇ ಅಡ್ಡಿಪಡಿಸುವ ಮೂಲಕ ಸಮುದಾಯವನ್ನು ದಮನ ಮಾಡುತ್ತಿದ್ದಾರೆ," ಎಂದು ದೂರಿದರು.

ಸುದ್ದಿಗೋಷ್ಠಿಯಲ್ಲಿ ಮುಖಂಡರಾದ ಜೆ.ಪಿ. ಚಂದ್ರಶೇಖರರೆಡ್ಡಿ, ಗೂಳೂರು ಲಕ್ಷ್ಮೀನಾರಾಯಣ, ಜಯಂತ್, ಎವಿಟಿ ನಾರಾಯಣಸ್ವಾಮಿ, ಹಂಪಸಂದ್ರ ರಾಮಾಂಜಿ ಸೇರಿದಂತೆ ಹಲವಾರು ದಲಿತ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಮಂಡ್ಯದಲ್ಲಿ ಕೈಗಾರಿಕಾ ಹಬ್ ಸ್ಥಾಪನೆಗೆ ಗಂಭೀರ ಚರ್ಚೆ

ಬೆಂಗಳೂರು

ಮಂಡ್ಯ ಜಿಲ್ಲೆಯಲ್ಲಿ ಕೇಂದ್ರ ಸರ್ಕಾರದ ಎ.ಆರ್.ಎ.ಐ. (ಆಟೋಮೋಟಿವ್ ರಿಸರ್ಚ್ ಅಸೋಸಿಯೇಷನ್ ಆಫ್ ಇಂಡಿಯಾ) ಕೇಂದ್ರದೊಂದಿಗೆ ಕನಿಷ್ಠ 500 ಎಕರೆ ಪ್ರದೇಶದಲ್ಲಿ ಬೃಹತ್ ಕೈಗಾರಿಕಾ ಹಬ್ ಸ್ಥಾಪಿಸಲು ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಗಂಭೀರ ಚಿಂತನೆ ನಡೆಸಿವೆ. ಈ ಕುರಿತು ರಾಜ್ಯ ಬೃಹತ್ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ ಮತ್ತು ಕೇಂದ್ರ ಬೃಹತ್ ಕೈಗಾರಿಕಾ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಸೋಮವಾರ ವಿಸ್ತೃತ ಚರ್ಚೆ ನಡೆಸಿದರು.

ವಿಧಾನಸೌಧದ ಸಮಿತಿ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ, ಕೇವಲ 100 ಎಕರೆಯಲ್ಲಿ ಕೇಂದ್ರ ಸ್ಥಾಪಿಸುವ ಬದಲು, ಆಟೋಮೊಬೈಲ್ ಕ್ಷೇತ್ರಕ್ಕೆ ಪೂರಕವಾದ ಕೈಗಾರಿಕಾ ಪಾರ್ಕ್ ನಿರ್ಮಿಸಲು ಪೂರಕ ಸ್ಥಳ ಗುರುತಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಯಿತು.

ಸ್ಥಳ ಅನ್ವೇಷಣೆ: ಬಸರಾಳು ಅಥವಾ ಬೆಳ್ಳೂರು?

ಬಸರಾಳು: ಎ.ಆರ್.ಎ.ಐ ಕೇಂದ್ರಕ್ಕಾಗಿ ಮಂಡ್ಯದ ಬಸರಾಳು ಬಳಿ ಈಗಾಗಲೇ 105 ಎಕರೆ ಜಾಗವನ್ನು ಗುರುತಿಸಲಾಗಿದ್ದು, ಕೇಂದ್ರಕ್ಕೆ ಇದು ಬಹುಮಟ್ಟಿಗೆ ಒಪ್ಪಿಗೆಯಾಗಿದೆ.

ಬೆಳ್ಳೂರು: ಕೈಗಾರಿಕಾ ಹಬ್ ಉದ್ದೇಶಕ್ಕಾಗಿ ಬೆಂಗಳೂರು–ಮಂಗಳೂರು ರಾಷ್ಟ್ರೀಯ ಹೆದ್ದಾರಿಗೆ ಹೊಂದಿಕೊಂಡಿರುವ ಬೆಳ್ಳೂರು ಬಳಿ ಸ್ವಾಧೀನಪಡಿಸಿಕೊಂಡಿರುವ 425 ಎಕರೆ ಜಾಗವನ್ನು ಪರಿಶೀಲಿಸುವಂತೆ ಎಂ.ಬಿ. ಪಾಟೀಲರು ಸಲಹೆ ನೀಡಿದ್ದಾರೆ.

ತೂಬಿನಕೆರೆ: ಮಂಡ್ಯ ಸಮೀಪದ ತೂಬಿನಕೆರೆ ಕೈಗಾರಿಕಾ ಪ್ರದೇಶಕ್ಕೆ ಹೊಂದಿಕೊಂಡಿರುವ ಪಾಂಡವಪುರ ಮತ್ತು ಮಂಡ್ಯ ತಾಲೂಕುಗಳ ಅಂಚಿನಲ್ಲೂ ಸ್ಥಳ ಗುರುತಿಸುವ ಬಗ್ಗೆ ಸಭೆಯಲ್ಲಿ ಚರ್ಚೆಯಾಯಿತು.

ಕೈಗಾರಿಕಾ ಹಬ್ ಸ್ಥಾಪನೆಯಿಂದ ಮಂಡ್ಯ ಜಿಲ್ಲೆಯಲ್ಲಿ ಆರ್ಥಿಕ ವಹಿವಾಟು ಹೆಚ್ಚುವುದಲ್ಲದೆ, ಸ್ಥಳೀಯ ಯುವಕರಿಗೆ ದೊಡ್ಡ ಮಟ್ಟದಲ್ಲಿ ಉದ್ಯೋಗ ಸೃಷ್ಟಿಯಾಗಲಿದೆ ಎಂದು ಎಂ.ಬಿ. ಪಾಟೀಲರು ವಿವರಿಸಿದರು. ಅಲ್ಲದೆ, ಎಲೆಕ್ಟ್ರಿಕ್ ಸಾಧನಗಳನ್ನು ತಯಾರಿಸುವ ಆ್ಯಂಡ್ರ್ಯೂ ಲೂಯಿ ಕಂಪನಿ ಲಿಮಿಟೆಡ್ ಸಂಸ್ಥೆಗೂ 25 ರಿಂದ 50 ಎಕರೆ ಭೂಮಿಯನ್ನು ತ್ವರಿತವಾಗಿ ಒದಗಿಸಲು ತೀರ್ಮಾನಿಸಲಾಯಿತು. ಈ ಪ್ರಮುಖ ಸಭೆಯಲ್ಲಿ ಮಂಡ್ಯ ಶಾಸಕ ರವಿ ಗಣಿಗ, ಶಾಸಕ ಎಚ್.ಡಿ. ರೇವಣ್ಣ, ಮಾಜಿ ಸಚಿವರಾದ ಸಿ.ಎಸ್. ಪುಟ್ಟರಾಜು, ಡಿ.ಸಿ. ತಮ್ಮಣ್ಣ, ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್, ಕೆಐಎಡಿಬಿ ಸಿಇಒ ಡಾ. ಮಹೇಶ ಹಾಗೂ ಎ.ಆರ್.ಎ.ಐ ನಿರ್ದೇಶಕ ಡಾ. ರೆಜಿ ಮಥಾಯ್ ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.





ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಚಿಕ್ಕಮಗಳೂರು ಜಿಲ್ಲಾಡಳಿತ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ, "ಹಂದೂರು ಗ್ರಾಮದಿಂದ ಎನ್.ಆರ್.ಪುರಕ್ಕೆ ಸಂಪರ್ಕಿಸುವ ಭದ್ರಾ ಸೇತುವೆಯನ್ನು ಲೋಕಾರ್ಪಣೆಗೊಳಿಸಿ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳ ಉದ್ಘಾಟನೆ, ಶಂಕುಸ್ಥಾಪನೆ ನೆರವೇರಿಸಿ ಫಲಾನುಭವಿಗಳಿಗೆ ಸರ್ಕಾರದ ಸವಲತ್ತುಗಳನ್ನು ವಿತರಿಸಿದರು. ಸಚಿವ ಸತೀಶ್ ಜಾರಕಿಹೊಳಿ, ಕೆ.ಜೆ.ಜಾರ್ಜ್, ಶೃಂಗೇರಿ ಶಾಸಕ ಟಿ.ಡಿ.ರಾಜುಗೌಡ, ಕಡೂರು ಶಾಸಕ ಆನಂದ್, ತರೀಕೆರೆ ಶಾಸಕ ಶ್ರೀನಿವಾಸ್, ಮಾಗಡಿ ಶಾಸಕ ಬಾಲಕೃಷ್ಣ ಸೇರಿ ಜಿಲ್ಲೆಯ ಶಾಸಕರುಗಳು, ವಿಧಾನ ಪರಿಷತ್ ಸದಸ್ಯರು, ಮುಖಂಡರು ಕೆಎಸ್‌ಟಿಡಿಸಿ ಅಧ್ಯಕ್ಷ ಸರೋವರ್ ಶ್ರೀನಿವಾಸ್ ಸೇರಿ ಹಲವು ಪ್ರಮುಖರು ಉಪಸ್ಥಿತರಿದ್ದರು.

# 'ಕಲಬುರಗಿ ಸಮೀಪ ತಲೆಎತ್ತಲಿದೆ ಆಧುನಿಕ ವಚನ ಮಂಟಪ'

ಬೆಂಗಳೂರು

ಕಲಬುರಗಿ ನಗರದ ಹೊರವಲಯದ ಕಪನೂರು ಗ್ರಾಮದ ಬಳಿ ಶರಣ–ಶರಣೆಯರ ಪರಂಪರೆಯನ್ನು ಪ್ರತಿಬಿಂಬಿಸುವ ಆಧುನಿಕ ಸ್ಪರ್ಶದ ನೂತನ 'ವಚನ ಮಂಟಪ' ನಿರ್ಮಾಣಕ್ಕೆ ಚಾಲನೆ ನೀಡಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಬೆಂಗಳೂರಿನ ತಮ್ಮ ಕಚೇರಿಯಲ್ಲಿ ಅಧಿಕಾರಿಗಳೊಂದಿಗೆ ನಡೆಸಿದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಈ ವಿಷಯವನ್ನು ಹಂಚಿಕೊಂಡರು.

ವಿಸ್ತೀರ್ಣ: ಕಪನೂರು ಗ್ರಾಮದ ಬಳಿ ಸುಮಾರು 6.06 ಗುಂಟೆ ಪ್ರದೇಶದಲ್ಲಿ ಈ ಮಂಟಪ ನಿರ್ಮಾಣವಾಗಲಿದೆ.

ಶರಣ ಪರಂಪರೆಯ ಅನಾವರಣ: ಜಗಜ್ಯೋತಿ ಬಸವಣ್ಣನವರು ಸೇರಿದಂತೆ ವಚನ ಕ್ರಾಂತಿಯಲ್ಲಿ ಪಾಲ್ಗೊಂಡಿದ್ದ ಎಲ್ಲಾ ಶರಣ–ಶರಣೆಯರ ಚಿತ್ರಗಳು ಹಾಗೂ ಅವರ ಆಯ್ದ ವಚನಗಳನ್ನು ಇಲ್ಲಿ ಅಳವಡಿಸಲಾಗುತ್ತದೆ.

ವಚನ ಸಾಹಿತ್ಯದ ಪ್ರಸಾರ, ಸಂವಾದ, ಉಪನ್ಯಾಸ ಮತ್ತು ಸಾಂಸ್ಕೃತಿಕ ಸಭೆಗಳನ್ನು ನಡೆಸಲು ಅನುಕೂಲವಾಗುವಂತೆ ಸುಸಜ್ಜಿತ ತೆರೆದ ಸಭಾಂಗಣವನ್ನು ವಿನ್ಯಾಸಗೊಳಿಸಲಾಗಿದೆ.

ಕಲಬುರಗಿ ಜಿಲ್ಲೆಯ ಇತಿಹಾಸ ಪ್ರಸಿದ್ಧ ತಾಣಗಳನ್ನು ಪ್ರವಾಸಿ ಕೇಂದ್ರಗಳಾಗಿ ಅಭಿವೃದ್ಧಿಪಡಿಸಲು ಸಚಿವರು ಅಧಿಕಾರಿಗಳಿಗೆ



ಹಲವು ಸೂಚನೆಗಳನ್ನು ನೀಡಿದರು.

ಕನಗನಹಳ್ಳಿ ಬೌದ್ಧ ತಾಣ: ಚಿತ್ತಾಪುರ ತಾಲೂಕಿನ ಕನಗನಹಳ್ಳಿಯಲ್ಲಿರುವ ವಿಶ್ವವಿಖ್ಯಾತ ಬೌದ್ಧ ಸ್ತೂಪ ಹಾಗೂ ಪ್ರಾಚೀನ ಅವಶೇಷಗಳ ಸಂರಕ್ಷಣೆಗೆ ಒತ್ತು.

ನಾಗಾವಿ ಪಾರಂಪರಿಕ ತಾಣ: ಚಿತ್ತಾಪುರ ತಾಲೂಕಿನ ನಾಗಾವಿಯಲ್ಲಿ ಮೂಲಸೌಕರ್ಯ ಅಭಿವೃದ್ಧಿ ಮತ್ತು ಸ್ಮಾರಕಗಳ ರಕ್ಷಣೆ.

ಮಳಖೇಡ ಕೋಟೆ: ಸೇಡಂ ತಾಲೂಕಿನ ಐತಿಹಾಸಿಕ ಮಳಖೇಡ ಕೋಟೆಯ ಪುನಶ್ಚೇತನ.

ಸೂರ್ಯನಾರಾಯಣ ದೇವಾಲಯ: ಕಾಳಗಿಯ ಪ್ರಸಿದ್ಧ ಸೂರ್ಯನಾರಾಯಣ ದೇವಸ್ಥಾನದ ಸಂರಕ್ಷಣಾ ಕಾರ್ಯ.

ಈ ಯೋಜನೆಗಳ ಮೂಲಕ ಜಿಲ್ಲೆಯ ಸಾಂಸ್ಕೃತಿಕ ವೈಭವವನ್ನು ಜಗತ್ತಿಗೆ ಪರಿಚಯಿಸುವುದು ಮತ್ತು ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡುವುದು ಸರ್ಕಾರದ ಗುರಿಯಾಗಿದೆ ಎಂದು ಸಚಿವರು ವಿವರಿಸಿದರು.

# ಅಂಬೇಡ್ಕರ್ ಕೇವಲ ಸಂವಿಧಾನ ಶಿಲ್ಪಿಯಲ್ಲ, ಸಮಾನತೆಯ ಸಂಕೇತ: ಸಂಸದ ಗೋವಿಂದ ಕಾರಜೋಳ

ಬೆಂಗಳೂರು

ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರ ಜಯಂತಿಯ ಅಂಗವಾಗಿ ನಾಳೆಯಿಂದ (ಏಪ್ರಿಲ್ 13) ಏಪ್ರಿಲ್ 20 ರವರೆಗೆ ರಾಜ್ಯಾದ್ಯಂತ ವಾರ ಕಾಲ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ಸಂಸದ ಗೋವಿಂದ ಕಾರಜೋಳ ತಿಳಿಸಿದರು.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ 'ಜಗನ್ನಾಥ ಭವನ'ದಲ್ಲಿ ಇಂದು



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಾಬಾ ಸಾಹೇಬರ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ರಾಜ್ಯದ ಎಲ್ಲಾ ಜಿಲ್ಲೆ ಮತ್ತು ತಾಲೂಕು ಘಟಕಗಳಿಗೆ ಪಕ್ಷದ ವತಿಯಿಂದ ಸೂಚನೆ ನೀಡಲಾಗಿದೆ ಎಂದರು.

"ಅಂಬೇಡ್ಕರ್ ಅವರು ಕೇವಲ ಸಂವಿಧಾನ ಶಿಲ್ಪಿಯಲ್ಲ, ಅವರು ಸಾಮಾಜಿಕ ನ್ಯಾಯದ ಹರಿಕಾರ ಮತ್ತು ಸಮಾನತೆಯ ಸಂಕೇತ. ದೇಶದ ಅಭಿವೃದ್ಧಿಗೆ ಅವರು ಹಾಕಿಕೊಟ್ಟ ಅಡಿಪಾಯ ಅಪ್ರತಿಮವಾದುದು. ಅಂಬೇಡ್ಕರ್ ಅವರ ಜೀವನಕ್ಕೆ ಸಂಬಂಧಿಸಿದ ಐದು ಪ್ರಮುಖ ಸ್ಥಳಗಳನ್ನು ಪ್ರಧಾನಿ ನರೇಂದ್ರ ಮೋದಿ ಅವರು 'ಪಂಚತೀರ್ಥ'ಗಳಾಗಿ ಅಭಿವೃದ್ಧಿಪಡಿಸುವ ಮೂಲಕ ಅವರಿಗೆ ಗೌರವ ಸಲ್ಲಿಸಿದ್ದಾರೆ," ಎಂದು ಅವರು ವಿವರಿಸಿದರು.

ಈ ಸಂದರ್ಭದಲ್ಲಿ ಪಕ್ಷದ ಪ್ರಮುಖ ಮುಖಂಡರಾದ ಜಗದೀಶ್ ಹಿರೇಮನಿ, ಶಾಂತಗೌಡ ಪಾಟೀಲ್, ಪ್ರಶಾಂತ್ ಕುಮಾರ್ ಹಾಗೂ ಅಣ್ಣಯ್ಯ ಉಪಸ್ಥಿತರಿದ್ದರು.

15/04/2026
# ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ‘ಜಾನಪದ ಬೆಳಕಿಂಡಿ’ ಲೋಕಾರ್ಪಣೆ



ತುಮಕೂರು

ಜಿಲ್ಲಾ ನಿವೃತ್ತ ಸರ್ಕಾರಿ ನೌಕರರ ಸಂಘ ಮತ್ತು ಡಾ ಟಿ. ಗೋವಿಂದರಾಜು ಗೆಳೆಯರ ಬಳಗದ ಆಶ್ರಯದಲ್ಲಿ ನಗರದಲ್ಲಿ ನಡೆದ ಸಮಾರಂಭದಲ್ಲಿ ಜಾನಪದ ವಿದ್ವಾಂಸ, ಸಂಶೋಧಕ ಡಾ. ಎಸ್.ಪಿ. ಪದ್ಮಪ್ರಸಾದ್ ಅವರು ಸಂಪಾದಿಸಿದ ‘ಜಾನಪದ ಬೆಳಕಿಂಡಿ’ ಕೃತಿ ಲೋಕಾರ್ಪಣೆ ಮಾಡಲಾಯಿತು.

ಲೇಖಕಿ ಬಾ.ಹ. ರಮಾಕುಮಾರಿ ಅವರು ಹಿರಿಯ ಸಂಗಾತಿಗಳೊಂದಿಗೆ ಕೃತಿಯನ್ನು ಜನಾರ್ಪಣೆ ಮಾಡಿದರು. ಕೃತಿಯ ಸಂಪಾದಕ ಡಾ ಪದ್ಮಪ್ರಸಾದ್ ಮಾತನಾಡಿ, ಡಾ.ಟಿ. ಗೋವಿಂದರಾಜು ಅವರು ಬಹು ದೊಡ್ಡ ವಿದ್ವಾಂಸರು, ಬಹುಮುಖ ಪ್ರತಿಭೆಯುಳ್ಳ ಲೇಖಕರು, ತಮ್ಮ ಆಸಕ್ತಿಯ ಅನೇಕ ವಿಷಯಗಳಲ್ಲಿ ಮೊದಲಿಗರಾಗಿ ಕೆಲಸ ಮಾಡಿದ್ದಾರೆ ಎಂದರು.

ಇವರು ಕಡಿಮೆ ಸಾಧನೆ ಮಾಡಿ ತಮಟೆ ಹೊಡೆದುಕೊಳ್ಳುವವರು ಅಲ್ಲ. ದುರದೃಷ್ಟವಶಾತ್ ಬಹು ದೊಡ್ಡ ಸಾಧನೆ ಮಾಡಿಯೂ ಅವಗಣನೆಗೆ ಒಳಗಾಗಿದ್ದಾರೆ. ಇದನ್ನು ನಾನು ಗಮನಿಸಿದ್ದೇನೆ. ಯಾವುದೇ ನಿರೀಕ್ಷೆ ಇಲ್ಲದೆ ಅವರ ಬದುಕು ಮತ್ತು ಬರಹವನ್ನು ಅವಲೋಕಿಸುವ ‘ಜಾನಪದ ಬೆಳಕಿಂಡಿ’ ಕೃತಿಯನ್ನು ಸಿದ್ಧಪಡಿಸಿದ್ದೇನೆ. ಈ ಮೂಲಕ ಅವರಿಗೆ ಗೌರವ ಸಲ್ಲಿಕೆ ಕೆಸಲ ಮಾಡಿದ್ದೇನೆ ಎಂದು ಹೇಳಿದರು.

ಇವರು ಕಡಿಮೆ ಸಾಧನೆ ಮಾಡಿ ತಮಟೆ ಹೊಡೆದುಕೊಳ್ಳುವವರು ಅಲ್ಲ. ದುರದೃಷ್ಟವಶಾತ್ ಬಹು ದೊಡ್ಡ ಸಾಧನೆ ಮಾಡಿಯೂ ಅವಗಣನೆಗೆ ಒಳಗಾಗಿದ್ದಾರೆ. ಇದನ್ನು ನಾನು ಗಮನಿಸಿದ್ದೇನೆ. ಯಾವುದೇ ನಿರೀಕ್ಷೆ ಇಲ್ಲದೆ ಅವರ ಬದುಕು ಮತ್ತು ಬರಹವನ್ನು ಅವಲೋಕಿಸುವ ‘ಜಾನಪದ ಬೆಳಕಿಂಡಿ’ ಕೃತಿಯನ್ನು ಸಿದ್ಧಪಡಿಸಿದ್ದೇನೆ. ಈ ಮೂಲಕ ಅವರಿಗೆ ಗೌರವ ಸಲ್ಲಿಕೆ ಕೆಸಲ ಮಾಡಿದ್ದೇನೆ ಎಂದು ಹೇಳಿದರು.

ಲೇಖಕ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಕೋಶಾಧ್ಯಕ್ಷ ಎಂ.ಹೆಚ್. ನಾಗರಾಜು ಪ್ರಾಸ್ತಾವಿಕ ನುಡಿಗಳಾಡಿದರು. ಹಲವು ಬರಹಗಾರರು, ನಿವೃತ್ತ ನೌಕರರ ಸಂಘದ ಪದಾಧಿಕಾರಿಗಳು ಭಾಗವಹಿಸಿದ್ದರು.

## ಆರೋಗ್ಯ ಮಾನವೀಯತೆಯೇ ನಿಜವಾದ ಸಂಪತ್ತು: ಹೆಗಡೆ

ಚಿಕ್ಕಬಳ್ಳಾಪುರ

ಪ್ರತಿಯೊಬ್ಬರೂ ಆರೋಗ್ಯದ ಕಡೆಗೆ ಹೆಚ್ಚಿನ ಗಮನ ಹರಿಸಿ, ನೆಮ್ಮದಿಯ ಜೀವನ ನಡೆಸುವತ್ತ ಒತ್ತು ನೀಡಬೇಕು ಎಂದು ಲೋಕಾಯುಕ್ತ ನಿವೃತ್ತ ನ್ಯಾಯಮೂರ್ತಿ ಎನ್. ಸಂತೋಷ್ ಹೆಗಡೆ ತಿಳಿಸಿದರು.

ನಗರದ ಹೊರವಲಯದಲ್ಲಿರುವ ಜೈನ್ ಮಿಷನ್ ಆಸ್ಪತ್ರೆಯ ಮೂರು ನೂತನ ಬ್ಲಾಕ್‌ಗಳನ್ನು ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.

“ಮನುಷ್ಯನಲ್ಲಿ ತೃಪ್ತಿ ಮತ್ತು ಮಾನವೀಯತೆ ನೆಲೆಸಿದ್ದರೆ ಮಾತ್ರ ಉತ್ತಮ ಸಮಾಜ ನಿರ್ಮಾಣ ಸಾಧ್ಯ. ಎಂದಿಗೂ ದುರಾಸೆಗೆ ಪಡಬಾರದು, ಆಗ ಮಾತ್ರ ಮಾನವೀಯತೆ ಉಳಿಯಲು ಸಾಧ್ಯ. ಮಕ್ಕಳಿಗೆ ಬಾಲ್ಯದಿಂದಲೇ ತೃಪ್ತಿ, ಒಳ್ಳೆಯ



ಸಂಸ್ಕಾರ ಹಾಗೂ ಗುಣನಡತೆಗಳ ಬಗ್ಗೆ ಪೋಷಕರು ತಿಳಿ ಹೇಳಬೇಕು,” ಎಂದು ಅವರು ಕಿವಿಮಾತು ಹೇಳಿದರು.

ವಿದ್ಯೆ ಮತ್ತು ಆರೋಗ್ಯ ನೀಡುವುದು ಸರ್ಕಾರದ ಆದ್ಯ ಕರ್ತವ್ಯವಾಗಿದ್ದರೂ, ಈ ವಿಷಯದಲ್ಲಿ ಸರ್ಕಾರಗಳು ಹಿನ್ನಡೆ ಅನುಭವಿಸಿವೆ. ಪ್ರಸ್ತುತ ಸರ್ಕಾರಗಳಿಗಿಂತಲೂ ಹೆಚ್ಚಾಗಿ ಸೇವಾ ಮನೋಭಾವ ಹೊಂದಿರುವ ಖಾಸಗಿ ಸಂಸ್ಥೆಗಳು ಜನಮನ್ನಣೆ ಗಳಿಸುತ್ತಿವೆ. ಜೈನ್ ಮಿಷನ್ ಆಸ್ಪತ್ರೆಯು ಅಂತಹ ಉತ್ತಮ ಸೇವಾ ಕಾರ್ಯಗಳನ್ನು ಮಾಡುತ್ತಿದೆ ಎಂದು ಶ್ಲಾಘಿಸಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಕ್ಷೇತ್ರ ಸಂಸದ ಡಾ. ಕೆ. ಸುಧಾಕರ್ ಮಾತನಾಡಿ, “ಆರೋಗ್ಯವಂತ ವ್ಯಕ್ತಿಯೇ ಇಂದಿನ ಸಮಾಜದ ನಿಜವಾದ ಶ್ರೀಮಂತ. ನಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳುವುದು ನಮ್ಮದೇ ಜವಾಬ್ದಾರಿ. ಕೇವಲ ಆಹಾರ ಸೇವನೆ ಮಾತ್ರವಲ್ಲದೆ, ದೈಹಿಕ ಚಟುವಟಿಕೆ ಮತ್ತು ಮಾನಸಿಕ ನೆಮ್ಮದಿಯತ್ತ ಗಮನ ನೀಡಬೇಕು,” ಎಂದರು.

ಮಹಾವೀರರ ಅಹಿಂಸೆ, ಸತ್ಯ ಮತ್ತು ದಯೆಯ ಮಾರ್ಗವನ್ನು ಅನುಸರಿಸಿದರೆ ಜೀವನದಲ್ಲಿ ನೆಮ್ಮದಿ ಕಾಣಲು ಸಾಧ್ಯ ಎಂದು ಅವರು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಜೆ.ಐ.ಟಿ.ಒ ಅಧ್ಯಕ್ಷ ಪೃಥ್ವಿರಾಜ್ ಕೊಠಾರಿ, ಶ್ರೀ ಶಂಕರ ಕ್ಯಾನ್ಸರ್ ಫೌಂಡೇಶನ್‌ನ ಡಾ. ಬಿ.ಎಸ್. ಶ್ರೀನಾಥ್, ಡಿವೈಎಸ್‌ಪಿ ಕೆ.ವಿ. ರಮೇಶ್, ಕೆ.ವಿ. ನವೀನ್ ಕಿರಣ್, ಜೈನ್ ಮಿಷನ್ ಟ್ರಸ್ಟ್ ಅಧ್ಯಕ್ಷ ಸುರೇಶ್ ಕುಮಾರ್ ಸೇರಿದಂತೆ ಆಸ್ಪತ್ರೆಯ ವೈದ್ಯಕೀಯ ಮಂಡಳಿಯ ಸದಸ್ಯರು ಮತ್ತು ದಾನಿಗಳು ಉಪಸ್ಥಿತರಿದ್ದರು.

## ಶಿಕ್ಷಕರ ಸಂಘದ ಚುನಾವಣೆ: ನಾಮಪತ್ರ ಸಲ್ಲಿಕೆ



ಬೂದಿಕೋಟೆ

ತಾಲೂಕು ಶಿಕ್ಷಕರ ಸಂಘದ ಚುನಾವಣಾ ಕಣ ಕಳೆಗಟ್ಟಿದ್ದು, ಜಿಲ್ಲಾ ಶಿಕ್ಷಕರ ಸಂಘದ ಮಾಜಿ ಪ್ರಧಾನ ಕಾರ್ಯದರ್ಶಿ ಸಿ.ಅಪ್ಪಯ್ಯ ಗೌಡ ಅವರ ನೇತೃತ್ವದಲ್ಲಿ ಸೋಮವಾರ 16 ಮಂದಿ ಅಭ್ಯರ್ಥಿಗಳು ತಮ್ಮ ನಾಮಪತ್ರವನ್ನು ಸಲ್ಲಿಸಿದರು.

ಪಟ್ಟಣದ ಬಿಆರ್‌ಸಿ ಕೇಂದ್ರದಲ್ಲಿ ಚುನಾವಣಾಧಿಕಾರಿ ಜಿ.ಬಿ. ಯುವರಾಜು ಅವರಿಗೆ ಸಿ.ಅಪ್ಪಯ್ಯಗೌಡ ತಂಡವು ಅಧಿಕೃತವಾಗಿ ನಾಮಪತ್ರಗಳನ್ನು ಹಸ್ತಾಂತರಿಸಿತು. ಒಟ್ಟು 10 ಸ್ಥಾನಗಳಿಗಾಗಿ ಈ ತಂಡದಿಂದ 16 ಮಂದಿ ಉತ್ಸಾಹದಿಂದ ನಾಮಪತ್ರ ಸಲ್ಲಿಸಿರುವುದು ವಿಶೇಷ.

ನಾಮಪತ್ರ ಸಲ್ಲಿಸಿದ ಪ್ರಮುಖರು: ಸಿ.ಅಪ್ಪಯ್ಯಗೌಡ, ಎಂ.ನಾರಾಯಣಸ್ವಾಮಿ, ಶ್ಯಾಮಮೂರ್ತಿ, ಕಾಂತರಾಜ್, ಪ್ರೇಮಲತಾ, ಪ್ರೇಮಕುಮಾರಿ, ರುಕ್ಮಿಣಿಯಮ್ಮ, ವಿಜಯಕುಮಾರ್, ಎಂ.ನಾಗರಾಜ್, ಶ್ರೀನಿವಾಸ್, ಶಶಿಧರ್, ಸಹನಾ, ಸಿ.ವೆಂಕಟೇಶ್, ಎಸ್.ಎ. ನಾಗರಾಜಪ್ಪ ಹಾಗೂ ಪಿ.ಎಂ.ಕೃಷ್ಣಮೂರ್ತಿ ಅವರು ಈ ತಂಡದ ಪರವಾಗಿ ಕಣಕ್ಕಿಳಿದಿದ್ದಾರೆ.

ಚುನಾವಣಾ ಪ್ರಕ್ರಿಯೆ ವಿವರ:

ಪರಿಶೀಲನೆ: ನಾಮಪತ್ರಗಳ ಪರಿಶೀಲನೆಯು ಮುಂಬರುವ ಸೋಮವಾರದಂದು ನಡೆಯಲಿದೆ.

ಹಿಂಪಡೆಯುವಿಕೆ: ನಾಮಪತ್ರಗಳನ್ನು ವಾಪಸ್ ಪಡೆಯಲು ಅಕ್ಟೋಬರ್ 14 ಕೊನೆಯ ದಿನವಾಗಿದೆ (ದಿನಾಂಕ ಗಮನಿಸಿ).

ಈ ಸಂದರ್ಭದಲ್ಲಿ ಸರ್ಕಾರಿ ನೌಕರರ ಸಂಘದ ಕಾರ್ಯದರ್ಶಿ ಸುಜಾತ, ಮುಖಂಡರಾದ ದೇವರಾಜ್, ಕಸಾಪ ಅಧ್ಯಕ್ಷ ಆರ್.ಅಶ್ವಥ್, ನಾಗರಾಜ್, ಸಹಾಯಕ ಚುನಾವಣಾಧಿಕಾರಿ ಸೋಮಶೇಖರ್ ಸೇರಿದಂತೆ ಸಂಘದ ಪ್ರಮುಖರು ಉಪಸ್ಥಿತರಿದ್ದರು.

ಶಿಕ್ಷಕರ ಹಿತರಕ್ಷಣೆ ಮತ್ತು ಸಂಘಟನೆಯ ಬಲವರ್ಧನೆಗೆ ತಮ್ಮ ತಂಡ ಬದ್ಧವಾಗಿದೆ ಎಂದು ನಾಮಪತ್ರ ಸಲ್ಲಿಕೆಯ ಬಳಿಕ ಸಿ.ಅಪ್ಪಯ್ಯ ಗೌಡ ವಿಶ್ವಾಸ ವ್ಯಕ್ತಪಡಿಸಿದರು.

## ಒಳಮೀಸಲಾತಿಗೆ ಆಗ್ರಹಿಸಿ ಅಂಬೇಡ್ಕರ್ ಜಯಂತಿ ಬಹಿಷ್ಕಾರ

ತುಮಕೂರು

ರಾಜ್ಯದಲ್ಲಿ ಒಳ ಮೀಸಲಾತಿಯನ್ನು ಜಾರಿಗೊಳಿಸಲು ವಿಳಂಬ ಮಾಡುತ್ತಿರುವ ರಾಜ್ಯ ಸರಕಾರದ ಧೋರಣೆಯನ್ನು ಖಂಡಿಸಿ ಮಾದಿಗ ಸಮುದಾಯ ಸರಕಾರ ಆಚರಿಸುವ ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಬಾಬು ಜಗಜೀವನ್ ರಾಂ ಅವರ ಜಯಂತಿ ಬಹಿಷ್ಕರಿಸಲಿದೆ ಎಂದು ಒಳಮೀಸಲಾತಿ ಹೋರಾಟ ಸಮಿತಿ ಜಿಲ್ಲಾಧ್ಯಕ್ಷ ಡಾ. ವೈ.ಕೆ. ಬಾಲಕೃಷ್ಣಪ್ಪ ತಿಳಿಸಿದರು.

ನಗರದ ಅಂಬೇಡ್ಕರ್ ಭವನದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಒಳಮೀಸಲಾತಿ ವಿಚಾರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾದಿಗ ಸಮುದಾಯಕ್ಕೆ ಕೊಟ್ಟಿದ್ದ ಮಾತನ್ನು ತಪ್ಪಿದ್ದಾರೆ. 35 ವರ್ಷಗಳ ಒಳಮೀಸಲಾತಿ ಹೋರಾಟವನ್ನು ನಿರ್ಲಕ್ಷಿಸಿರುವುದನ್ನು ಖಂಡಿಸಿ ರಾಜ್ಯದ ಎಲ್ಲ ಒಳಮೀಸಲಾತಿ ಹೋರಾಟಗಾರರು ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ ಹಾಗೂ ಡಾ. ಬಾಬು ಜಗಜೀವನ್ ರಾಂ ಜಯಂತಿಯನ್ನು ಬಹಿಷ್ಕರಿಸಿ ಸರ್ಕಾರದ ನಡೆಯನ್ನು ವಿರೋಧಿಸಲು ತೀರ್ಮಾನಿಸಲಾಗಿದೆ. ಎಂದರು.

ಸರ್ಕಾರದ ವತಿಯಿಂದ ಆಚರಿಸುವ ಜಯಂತಿಯನ್ನು ಬಹಿಷ್ಕರಿಸಿ ಒಳಮೀಸಲಾತಿ ಹೋರಾಟ ಸಮಿತಿ, ಮಾದರ ಮಹಾಸಭಾ, ಸಿಐಟಿಯು ನೇತೃತ್ವದಲ್ಲಿ ಪ್ರತ್ಯೇಕವಾಗಿ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿಯನ್ನು ನಗರದ ಅಂಬೇಡ್ಕರ್ ಭವನದಲ್ಲಿ ಬೆಳಿಗ್ಗೆ 11ಗಂಟೆ ಆಚರಿಸಲು ತೀರ್ಮಾನಿಸಲಾಗಿದ್ದು, ಪೌರ ಕಾರ್ಮಿಕರು ಹಾಗೂ



ಶೋಷಿತ ವರ್ಗಗಳು ಒಳಮೀಸಲಾತಿ ಬೆಂಬಲಿಸುವವರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ಕರೆ ನೀಡಿದರು.

ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷ ವೈ.ಎಚ್. ಹುಚ್ಚಯ್ಯ ಮಾತನಾಡಿ, ಮಾದಿಗ ಸಮುದಾಯದ ಇದೇ 14ರಂದು ಸರಕಾರದಿಂದ ಆಚರಿಸುವ ಡಾ. ಬಾಬು ಜಗಜೀವನ್ ರಾಮ್ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ ಆಚರಣೆಗೆ ಭಾಗವಹಿಸುವುದಿಲ್ಲ. ಸರಕಾರದ ನೀತಿಗೆ ನಮ್ಮ ಧಿಕ್ಕಾರ ವ್ಯಕ್ತಪಡಿಸುತ್ತಿದ್ದೇವೆ. ನಮ್ಮ ಉಳಿವಿಗಾಗಿ ನಾವು ಹೋರಾಡುತ್ತಿದ್ದೇವೆ. ಯಾರ ಅಳಿವಿಗಾಗಿ ಅಲ್ಲ. ಸರಕಾರ ಮಾಡುವ ಅಂಬೇಡ್ಕರ್ ಜಯಂತಿಗೆ ಪ್ರತಿಭಟನೆ ರೂಪದಲ್ಲಿ ನಾವು ಭಾಗವಹಿಸುತ್ತಿಲ್ಲ. ಪ್ರತ್ಯೇಕವಾಗಿ ಆಚರಿಸುವ ಜಯಂತಿಯಲ್ಲಿ ಸ್ವಾಭಿಮಾನದ ಮಾದಿಗರು ಎಲ್ಲರೂ ತಪ್ಪದೇ ಬರಬೇಕು ಎಂದರು.

ಈ ಸಂದರ್ಭದಲ್ಲಿ ಸಿಐಟಿಯು ಜಿಲ್ಲಾ ಕಾರ್ಯದರ್ಶಿ ಎನ್.ಕೆ.ಸುಬ್ರಮಣ್ಯ, ದಲಿತ ಮುಖಂಡರಾದ ನರಸೀಯಪ್ಪ, ಕೊಟ್ಟ ಶಂಕರ್, ಗಂಗರಾಜು, ಕೇಬಲ್ ರಘು, ಅಂಜಿನಪ್ಪ, ಗಂಗಾಧರ್, ನರಸಿಂಹಯ್ಯ, ಮಹಾಲಿಂಗಪ್ಪ, ಟಿ.ಸಿ.ರಾಮಯ್ಯ, ಮೋಹನ್ ಸೇರಿದಂತೆ ಇತರರಿದ್ದರು.

## ಬೇಸಿಗೆ ಚಿಣ್ಣರ ಸಂಭ್ರಮವನ್ನು ಸದುಪಯೋಗ ಮಾಡಿಕೊಳ್ಳಲು ಕರೆ

ವಿಜಯಪುರ

ಪಟ್ಟಣದ ಸರಕಾರಿ ಮಾದರಿ ಬಾಲಕಿಯರ ಹಿರಿಯ ಪ್ರಾಥಮಿಕ ಶಾಲೆಯಲ್ಲಿ, ಅಗಸ್ತ್ಯ ಫೌಂಡೇಷನ್ ಹಾಗೂ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಸಹಯೋಗದಲ್ಲಿ, ಬೇಸಿಗೆ ಚಿಣ್ಣರ ಸಂಭ್ರಮ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಇದೇ 13 ರಿಂದ 23 ರವರೆಗೆ ನಡೆಯಲಿರುವ ಚಿಣ್ಣರ ಸಂಭ್ರಮದಲ್ಲಿ, ಭಾಗವಹಿಸುವ ವಿದ್ಯಾರ್ಥಿಗಳಿಗೆ ಚಿತ್ರಕಲೆ, ನೃತ್ಯ, ಯೋಗ, ಕರಾಟೆ ಮುಂತಾದ ಕೌಶಲ್ಯಗಳನ್ನು ಕಲಿಸಿಕೊಡುವುದರ ಜೊತೆಗೆ, ಅವರಿಗೆ ವಿವಿಧ ಕೌಶಲ್ಯ ತರಬೇತಿಗಳನ್ನು ಕೊಡುವುದಕ್ಕೆ ಸಿದ್ಧತೆ ಮಾಡಿಕೊಂಡಿದ್ದಾರೆ.

ಶಾಲೆಯ ಮುಖ್ಯಶಿಕ್ಷಕ ಮನೋಹರ್ ಮಾತನಾಡಿ, ಶಾಲೆಯಲ್ಲಿ, ನಡೆಯುವಂತಹ ಚಿಣ್ಣರ ಸಂಭ್ರಮದಲ್ಲಿ, ಸಂಪನ್ಮೂಲ ಶಿಕ್ಷಕರಿಂದ ಮಕ್ಕಳಿಗೆ ವಿಶೇಷ ತರಬೇತಿಗಳನ್ನು ಆಯೋಜನೆ ಮಾಡಲಾಗುತ್ತದೆ. ನಿರುಪಯುಕ್ತ ವಸ್ತುಗಳಿಂದ, ಉಪಯೋಗಕ್ಕೆ ಬರುವಂತಹ ವಸ್ತುಗಳನ್ನು ತಯಾರಿಸುವುದು, ಗಣಿತ ಸಮಸ್ಯೆಗಳನ್ನು ಸುಲಭವಾಗಿ ಬಿಡಿಸುವುದು, ಕಥೆ ಹೇಳುವುದು, ಹಾಡು ಹಾಡುವುದು, ಆತ್ಮರಕ್ಷಣೆಗಾಗಿ ಕರಾಟೆ ಕಲಿಸುವಂತಹ ಕಾರ್ಯಕ್ರಮಗಳು ನಡೆಯಲಿವೆ. ಚಿಣ್ಣರ ಸಂಭ್ರಮ




ಮುಗಿದ ನಂತರವೂ, ನಿರಂತರವಾಗಿ ಶಾಲೆಯ ವಿದ್ಯಾರ್ಥಿಗಳಿಗೆ ಈ ಎಲ್ಲಾ ಅಭ್ಯಾಸಗಳನ್ನು ನಿರಂತರವಾಗಿ ಮುಂದುವರೆಸಿಕೊಂಡು ಹೋಗುತ್ತೇವೆ. 9 ದಿನಗಳ ಕಾಲ ಕಲಿತಿರುವ ಎಲ್ಲಾ ವಿಚಾರಗಳ ಕುರಿತು, ವಸ್ತು ಪ್ರದರ್ಶನ ಕಾರ್ಯಕ್ರಮವನ್ನೂ ಆಯೋಜನೆ ಮಾಡಲಾಗುತ್ತದೆ ಎಂದರು.

ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರಾಧಿಕಾರದ ಸಿ.ಎಸ್.ಆರ್ ಮೇಲ್ವಿಚಾರಕ ಕೇಶವಮೂರ್ತಿ ಮಾತನಾಡಿ, ಬೇಸಿಗೆಯ ಬಿಸಿಲಿನಲ್ಲಿ, ಮಕ್ಕಳು, ಸುತ್ತಾಡುವುದರ ಬದಲಿಗೆ, ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸುವ ಮೂಲಕ ತಮ್ಮ ಕಲಿಕಾ ಸಾಮರ್ಥ್ಯವನ್ನು ಹೆಚ್ಚಿಸಿಕೊಳ್ಳುವುದಲ್ಲದೆ, ಶಿಬಿರದಲ್ಲಿ ಕಲಿಯುವಂತಹ ಕಲಿಕೆಯನ್ನು ತಮ್ಮ ವಿದ್ಯಾರ್ಥಿ ಜೀವನದಲ್ಲಿ ಅಳವಡಿಸಿಕೊಳ್ಳಲು ಸಹಕಾರಿಯಾಗಲಿದೆ. ಪೋಷಕರೂ ಸಹಾ ಹೆಚ್ಚಿನ ಪ್ರೋತ್ಸಾಹವನ್ನು ನೀಡಬೇಕು ಎಂದರು.

ಶಾಲಾಭಿವೃದ್ಧಿ ಸಮಿತಿಯ ಉಪಾಧ್ಯಕ್ಷ ಶ್ರೀನಿವಾಸ್, ಸದಸ್ಯರಾದ ಮಾಲ, ಗೌರೀಶ್ವರಿ, ಹಾಗೂ ಸಂಪನ್ಮೂಲ ಶಿಕ್ಷಕರು ಹಾಜರಿದ್ದರು.

## ವಸತಿ ಶಾಲೆಗಳ ಪ್ರವೇಶ ಪರೀಕ್ಷೆ ಯಶಸ್ವಿ

ವಿಜಯಪುರ

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ನಡೆಸಲ್ಪಡುವ ಪ್ರತಿಷ್ಠಿತ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಹಾಗೂ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ 6ನೇ ತರಗತಿ ಪ್ರವೇಶಕ್ಕಾಗಿ ಭಾನುವಾರ ಪಟ್ಟಣದಲ್ಲಿ ಪರೀಕ್ಷೆ ಸುಸೂತ್ರವಾಗಿ ನಡೆಯಿತು.

2026–27ನೇ ಸಾಲಿನ ಶೈಕ್ಷಣಿಕ ಪ್ರವೇಶಕ್ಕಾಗಿ ಏರ್ಪಡಿಸಲಾಗಿದ್ದ ಈ ಪರೀಕ್ಷೆಯು ಪಟ್ಟಣದ ಸರ್ಕಾರಿ ಬಾಲಕಿಯರ ಪ್ರೌಢಶಾಲೆ ಹಾಗೂ ಮೌಲಾನಾ ಆಜಾದ್ ಆಂಗ್ಲ ಮಾಧ್ಯಮ ಶಾಲೆಯ ಕೇಂದ್ರಗಳಲ್ಲಿ ನಡೆಯಿತು.

ಪರೀಕ್ಷೆಗೆ ಹಾಜರಾದ ಒಟ್ಟು 209 ವಿದ್ಯಾರ್ಥಿಗಳಿಗೆ ಆಧುನಿಕ ತಂತ್ರಜ್ಞಾನದಡಿ ಆನ್‌ಲೈನ್ ಹಾಜರಾತಿಯನ್ನು ದಾಖಲಿಸಿಕೊಂಡು ಪರೀಕ್ಷಾ ಕೊಠಡಿಗಳಿಗೆ ಪ್ರವೇಶ ನೀಡಲಾಯಿತು. ಬೆಳಿಗ್ಗೆ 11 ಗಂಟೆಗೆ ಆರಂಭವಾದ ಪರೀಕ್ಷೆಯು ಮಧ್ಯಾಹ್ನ 1 ಗಂಟೆಗೆ ಮುಕ್ತಾಯವಾಯಿತು. ಪರೀಕ್ಷಾರ್ಥಿಗಳು ಉತ್ಸಾಹದಿಂದ ಭಾಗವಹಿಸಿದ್ದರು.

ಈ ಪ್ರವೇಶ ಪರೀಕ್ಷೆಯಲ್ಲಿ ಮೆರಿಟ್ ಆಧಾರದ ಮೇಲೆ ಉತ್ತಮ ಅಂಕ ಗಳಿಸುವ ವಿದ್ಯಾರ್ಥಿಗಳಿಗೆ ವಸತಿ ಶಾಲೆಗಳಲ್ಲಿ ಸೀಟು ದೊರೆಯಲಿದೆ. ಆಯ್ಕೆಯಾದ ವಿದ್ಯಾರ್ಥಿಗಳು 12ನೇ ತರಗತಿಯವರೆಗೆ ಸಂಪೂರ್ಣ ಉಚಿತವಾದ ವಸತಿ ಸಹಿತ ಗುಣಮಟ್ಟದ ಶಿಕ್ಷಣವನ್ನು ಪಡೆಯಲು ಅರ್ಹರಾಗುತ್ತಾರೆ.

## ಎನ್‌ಎಸ್‌ಯುಐ ಜಿಲ್ಲಾಧ್ಯಕ್ಷರಿಂದ ಬಿಜೆಪಿ ಸೇರ್ಪಡೆ



ಬೂದಿಕೋಟೆ

ಜಿಲ್ಲಾ ರಾಜಕಾರಣದಲ್ಲಿ ಮಹತ್ವದ ಬೆಳವಣಿಗೆಯೊಂದು ನಡೆದಿದ್ದು, ಎನ್‌ಎಸ್‌ಯುಐ ಜಿಲ್ಲಾಧ್ಯಕ್ಷ ಮುತ್ತುಕುಮಾರ್ ಅವರು ತಮ್ಮ ನೂರಾರು ಬೆಂಬಲಿಗರೊಂದಿಗೆ ಕಾಂಗ್ರೆಸ್ ತೊರೆದು ಅಧಿಕೃತವಾಗಿ ಬಿಜೆಪಿ ಪಕ್ಷಕ್ಕೆ ಸೇರ್ಪಡೆಯಾದರು.

ಪಟ್ಟಣದ ದೇಶಿಹಳ್ಳಿಯಲ್ಲಿರುವ ಮಾಜಿ ಶಾಸಕ ಬಿ.ಪಿ. ವೆಂಕಟಮುನಿಯಪ್ಪ ಅವರ ಗೃಹ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ವಿಶೇಷ ಕಾರ್ಯಕ್ರಮದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಓಂಶಕ್ತಿ ಚಲಪತಿ ಹಾಗೂ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಿ.ವಿ. ಮಹೇಶ್ ಅವರು ಮುತ್ತುಕುಮಾರ್ ಮತ್ತು ತಂಡವನ್ನು ಪಕ್ಷದ ಶಾಲನ್ನು ಹೊದಿಸುವ ಮೂಲಕ ಬರಮಾಡಿಕೊಂಡರು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಿ.ವಿ. ಮಹೇಶ್, “ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವ ಮತ್ತು ಬಿಜೆಪಿ ಪಕ್ಷದ ತತ್ವ ಸಿದ್ಧಾಂತಗಳನ್ನು ಮೆಚ್ಚಿ ಮುತ್ತುಕುಮಾರ್ ಅವರು ಪಕ್ಷಕ್ಕೆ ಸೇರ್ಪಡೆಯಾಗಿದ್ದಾರೆ. ಇವರ ಸೇರ್ಪಡೆಯಿಂದ ಮುಂಬರುವ ಚುನಾವಣೆಗಳಲ್ಲಿ ಪಕ್ಷಕ್ಕೆ ಹೆಚ್ಚಿನ ಬಲ ಬಂದಂತಾಗಿದೆ. ಪಕ್ಷದ ಸಿದ್ಧಾಂತಗಳನ್ನು ಒಪ್ಪಿ ಬರುವ ಎಲ್ಲರನ್ನೂ ನಾವು ಗೌರವದಿಂದ ಸ್ವಾಗತಿಸುತ್ತೇವೆ,” ಎಂದರು.

ಯುವ ಮುಖಂಡರ ಈ ಸೇರ್ಪಡೆಯಿಂದ ಬಂಗಾರಪೇಟೆ ಕ್ಷೇತ್ರದಲ್ಲಿ ಬಿಜೆಪಿ ಸಂಘಟನೆಗೆ ಹೊಸ ಚೈತನ್ಯ ಸಿಕ್ಕಂತಾಗಿದೆ ಎಂದು ಮುಖಂಡರು ವಿಶ್ವಾಸ ವ್ಯಕ್ತಪಡಿಸಿದರು. ಯುವ ಮೋರ್ಚಾ ಜಿಲ್ಲಾ ಉಪಾಧ್ಯಕ್ಷ ಶಿವಕುಮಾರ್ ಅವರು ಈ ಸೇರ್ಪಡೆ ಕಾರ್ಯಕ್ರಮದ ರೂವಾರಿಯಾಗಿದ್ದರು.

ಕಾರ್ಯಕ್ರಮದಲ್ಲಿ ಮಂಡಲ ಅಧ್ಯಕ್ಷ ಸಂಪಂಗಿ ರೆಡ್ಡಿ, ಪ್ರಧಾನ ಕಾರ್ಯದರ್ಶಿ ಶ್ರೀನಿವಾಸ್, ಹನುಮಪ್ಪ, ಶಶಿಕುಮಾರ್, ಚೌಡಪ್ಪ, ಮಂಜುನಾಥ್, ಮಾಜಿ ಗ್ರಾ.ಪಂ ಸದಸ್ಯರಾದ ಪ್ರತಾಪ್, ಜಯರಾಮ್ ಹಾಗೂ ಪ್ರಮುಖರಾದ ನಂಜುಂಡೇಗೌಡ, ನಾರಾಯಣಸ್ವಾಮಿ, ಆರ್.ಎಂ. ಮಂಜುನಾಥ್ ಸೇರಿದಂತೆ ನೂರಾರು ಯುವ ಕಾರ್ಯಕರ್ತರು ಪಾಲ್ಗೊಂಡಿದ್ದರು.

## ವಿದ್ಯಾರ್ಥಿಗಳಿಗೆ ಸನ್ಮಾನ ವಿಚಾರದಲ್ಲಿ ಶಾಸಕರು ತಾರತಮ್ಯ: ವಳ್ಳಲ್ ಮುನಿಸ್ವಾಮಿ ಆರೋಪ

ಬೇತಮಂಗಲ

ಕೆಜಿಎಫ್ ಮೀಸಲು ಕ್ಷೇತ್ರದಲ್ಲಿ ಗೆದ್ದು ಬಂದಿರುವ ಶಾಸಕಿ ರೂಪಕಲಾ ಶಶಿಧರ್ ಅವರು ವಿದ್ಯಾರ್ಥಿಗಳ ನಡುವೆ ಜಾತಿ ತಾರತಮ್ಯ ಮಾಡುತ್ತಿದ್ದಾರೆ ಎಂದು ನಗರಸಭೆ ಮಾಜಿ ಅಧ್ಯಕ್ಷ ಹಾಗೂ ಬಿಜೆಪಿ ಮುಖಂಡ ವಳ್ಳಲ್ ಮುನಿಸ್ವಾಮಿ ಗಂಭೀರವಾಗಿ ಆರೋಪಿಸಿದರು.

ಪಿಯು ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ದಲಿತ ಹಾಗೂ ಅಹಿಂದ ವರ್ಗದ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಅವರು ಮಾತನಾಡಿದರು.

“ಈ ವರ್ಷದ ಪಿಯುಸಿ ಪರೀಕ್ಷೆಯಲ್ಲಿ ಉತ್ತಮ ಅಂಕ ಪಡೆದ ಮೇಲ್ವರ್ಗದ ವಿದ್ಯಾರ್ಥಿಗಳನ್ನು ಮಾತ್ರ ತಮ್ಮ ಮನೆಗೆ ಕರೆಸಿಕೊಂಡು ಶಾಸಕರು ಸನ್ಮಾನಿಸಿದ್ದಾರೆ. ಆದರೆ ಸಾಧನೆ ಮಾಡಿದ ದಲಿತ ಮತ್ತು ಅಹಿಂದ ಮಕ್ಕಳನ್ನು ಕಡೆಗಣಿಸಿರುವುದು ಎಷ್ಟರ ಮಟ್ಟಿಗೆ ಸರಿ?” ಎಂದು ಅವರು ಪ್ರಶ್ನಿಸಿದರು. ಶಾಸಕರು ಕೇವಲ ವೋಟ್ ಬ್ಯಾಂಕ್ ರಾಜಕಾರಣಕ್ಕಾಗಿ ಮಕ್ಕಳ ಮನಸ್ಸಿನಲ್ಲಿ ಜಾತಿ ವಿಷಬೀಜ ಬಿತ್ತುವ ಕೆಲಸ ಮಾಡುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಆದರೆ ಮೀಸಲು ಕ್ಷೇತ್ರದಿಂದ ಆಯ್ಕೆಯಾದ ಶಾಸಕರು ಈ ಆಶಯಗಳಿಗೆ ವಿರುದ್ಧವಾಗಿ ನಡೆದುಕೊಳ್ಳುತ್ತಿದ್ದಾರೆ ಎಂದು ಕಿಡಿಕಾರಿದರು.

## ನಾಯಿಗಳ ಭಯದಲ್ಲಿ ಚಿಂತಾಮಣಿ ಜನತೆ: ಬೀದಿಗಿಳಿಯಲು ನಡುಕ!

ಚಿಂತಾಮಣಿ

ನಗರದಾದ್ಯಂತ ಬೀದಿ ನಾಯಿಗಳ ಹಾವಳಿ ಮಿತಿಮೀರಿದ್ದು, ಮುದುಕರು, ಮಕ್ಕಳು ಹಾಗೂ ಮಹಿಳೆಯರು ಸೇರಿದಂತೆ ಸಾರ್ವಜನಿಕರು ರಸ್ತೆಯಲ್ಲಿ ಓಡಾಡಲು ಭಯಪಡುವಂತಾಗಿದೆ. ನಾಯಿಗಳ ಕಾಟಕ್ಕೆ ಕಡಿವಾಣ ಹಾಕಲು ನಗರಸಭೆ ಅಧಿಕಾರಿಗಳು ಯಾವುದೇ ಕ್ರಮ ಕೈಗೊಳ್ಳದಿರುವುದು ನಾಗರಿಕರ ತೀವ್ರ ಅಸಹನೆಗೆ ಕಾರಣವಾಗಿದೆ.

ನಗರದ ರಸ್ತೆಗಳಲ್ಲಿ ನಡೆದುಕೊಂಡು ಹೋದರೂ ಅಥವಾ ದ್ವಿಚಕ್ರ ವಾಹನಗಳಲ್ಲಿ ಸಂಚರಿಸಿದರೂ ನಾಯಿಗಳು ಗುಂಪು ಗುಂಪಾಗಿ ಹಿಂಬಾಲಿಸುತ್ತಿವೆ. ಎಲ್ಲಿ ಕಚ್ಚುತ್ತವೆಯೋ ಎಂಬ ಭಯದಿಂದ ವಾಹನ ಸವಾರರು ವೇಗವಾಗಿ ಗಾಡಿ ಓಡಿಸಲು ಹೋಗಿ ನಿಯಂತ್ರಣ ತಪ್ಪಿ ಬಿದ್ದು ಗಾಯಗೊಂಡಿರುವ ಅನೇಕ ಘಟನೆಗಳು ನಡೆದಿವೆ.



ಹಾವಳಿ ಹೆಚ್ಚಿರುವ ಪ್ರಮುಖ ಪ್ರದೇಶಗಳು: ನಗರದ ಬಹುತೇಕ ಎಲ್ಲಾ ಭಾಗಗಳಲ್ಲೂ ನಾಯಿಗಳದ್ದೇ ಸಾಮ್ರಾಜ್ಯ ಎಂಬಂತಾಗಿದೆ. ಮುಖ್ಯವಾಗಿ ರಾಯಲ್ ವೃತ್ತ, ಟ್ಯಾಂಕ್ ಬಂಡ್ ರಸ್ತೆ, ಟೀಚರ್ಸ್ ಕಾಲೋನಿ, ಕೆಎಸ್ಆರ್ಟಿಸಿ ಬಸ್ ನಿಲ್ದಾಣ, ಅಗ್ರಹಾರ, ನೆಕ್ಕುಂದಿಪೇಟೆ, ಐಡಿಎಸ್ ಎಂ ಟಿ ಮಾರುಕಟ್ಟೆ ಪ್ರಾಂಗಣ, ಆಶ್ರಯ ಬಡಾವಣೆ ಹಾಗೂ ವೆಂಕಟಗಿರಿಕೋಟೆ ಸೇರಿದಂತೆ ಜನನಿಬಿಡ ಪ್ರದೇಶಗಳಲ್ಲೇ ನಾಯಿಗಳ ಹಾವಳಿ ಹೆಚ್ಚಾಗಿದೆ.

ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಸಾರ್ವಜನಿಕರ ಆಕ್ರೋಶ: “ಹಗಲು ವೇಳೆಯಲ್ಲೂ ಓಡಾಡಲು ಭಯದ ವಾತಾವರಣ ನಿರ್ಮಾಣವಾಗಿದೆ. ಈ ಬಗ್ಗೆ ನಗರಸಭೆ ಅಧಿಕಾರಿಗಳಿಗೆ ತಿಳಿದಿದ್ದರೂ ಯಾವುದೇ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುತ್ತಿಲ್ಲ. ಬೀದಿ ನಾಯಿಗಳ ಸಂಖ್ಯೆ ದಿನೇ ದಿನೇ ಹೆಚ್ಚಾಗುತ್ತಿದೆ,” ಎಂದು ಸ್ಥಳೀಯ ನಿವಾಸಿಗಳು ಆರೋಪಿಸಿದ್ದಾರೆ. ಕೂಡಲೇ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಎಚ್ಚೆತ್ತುಕೊಂಡು ಬೀದಿ ನಾಯಿಗಳ ಹಾವಳಿಯಿಂದ ನಗರದ ಜನತೆಯನ್ನು ಮುಕ್ತಗೊಳಿಸಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

## ಅಂಬೇಡ್ಕರ್- ಜಗಜೀವನರಾಂ ಜಯಂತಿಗೆ ಭರ್ಜರಿ ಸಿದ್ಧತೆ: 20 ಸಾವಿರ ಹೆಲ್ಮೆಟ್ ವಿತರಣೆ

ಬಾಗೇಪಲ್ಲಿ

ಪಟ್ಟಣದ ಹೊರವಲಯದ ರಾಷ್ಟ್ರೀಯ ಹೆದ್ದಾರಿ 44ರ ಬಳಿಯ ಬಾಬುಘಾರಂನಲ್ಲಿ ಇದೇ 14 ರಂದು ನಡೆಯಲಿರುವ ಡಾ. ಬಿ.ಆರ್. ಅಂಬೇಡ್ಕರ್ ಮತ್ತು ಡಾ. ಬಾಬೂ ಜಗಜೀವನರಾಂ ಜಯಂತಿ ಮಹೋತ್ಸವಗಳನ್ನು ಆಚರಣೆ ಮಾಡಲಾಗುವುದು ಮತ್ತು 20 ಸಾವಿರ ಹೆಲ್ಮೀಟ್‌ಗಳನ್ನು ವಿತರಣೆ ಮಾಡಲಾಗುವುದು ಎಂದು ಎನ್.ಡಿ.ಎ. ಮುಖಂಡ ಹರಿನಾಥರೆಡ್ಡಿ ತಿಳಿಸಿದರು.

ಸಂಸದರಾದ ಡಾ. ಕೆ.ಸುಧಾಕರ್ ಸೂಚನೆಯಂತೆ ನಮ್ಮ ಹರಿನಾಥರೆಡ್ಡಿ ಚಾರಿಟಬಲ್ ಟ್ರಸ್ಟ್ ವತಿಯಿಂದ ಜಯಂತಿಗಳನ್ನು ಬಾರಿ ವಿಜೃಂಬಣೆಯಿಂದ ಆಚರಣೆ ಮಾಡಲಾಗುವುದು, ಪರಿಶಿಷ್ಠ ಜಾತಿ ಪರಿಶಿಷ್ಠ ವರ್ಗದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಸಾಧಕರಿಗೆ ಸನ್ಮಾನ, ಬಾಗೇಪಲ್ಲಿ ಪಟ್ಟಣ ಹಾಗೂ ಕಸಬಾ ಹೋಬಳಿಯ ಯಲ್ಲಂಪಲ್ಲಿ, ದೇವರಗುಡಿಪಲ್ಲಿ, ಪರಗೋಡು, ಘಂಟಂವಾರಿಪಲ್ಲಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ದ್ವಿಚಕ್ರ ವಾಹನ ಸವಾರರಿಗೆ ಉಚಿತ ಹೆಲ್ಮೀಟ್ ವಿತರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ, ಆದರೆ ಕ್ಷೇತ್ರದ ಶಾಸಕರ ಸೇಡಿನ ರಾಜಕಾರಣದಿಂದ ಆಯೋಜಿಸಿದ್ದ ಕಾರ್ಯಕ್ರಮಕ್ಕೆ ಅಡ್ಡಿಯನ್ನುಂಟು ಮಾಡಿ ಅನುಮತಿಯನ್ನು ರದ್ದುಗೊಳಿಸಿ, ಪೊಲೀಸ್ ಇಲಾಖೆಯಿಂದ ಧ್ವನಿವರ್ಧಕಕ್ಕೆ ಪರವಾನಗಿ ನೀಡದಂತೆ ಹುನ್ನಾರ ನಡೆಸಿದ್ದಾರೆ ಎಂದು ಆರೋಪಿಸಿದರು.

ಬಸ್ ಡಿಪೋ ಬಳಿಯಿರುವ ಮೈದಾನದ ಮಾಲೀಕರಿಂದ ಕಾರ್ಯಕ್ರಮ ನಡೆಸಲು ಅನುಮತಿ ಪಡೆಯಲಾಗಿತ್ತು, ಅಲ್ಲಿಯೂ ಸಹ ಶಾಸಕರ ಬೆಂಬಲಿಗರು ಮಾಲೀಕರನ್ನು ಬೆದರಿಸಿ, ಟ್ರಸ್ ಕಾರ್ಯಕ್ರಮಕ್ಕೆ ಜಮೀನು ನೀಡದಂತೆ ಬೆದರಿಸಿರುತ್ತಾರೆ, ಕೊನೆಗೆ ಪಟ್ಟಣದ ಹೊರವಲಯದ ಬಾಬುಘಾರಂನಲ್ಲಿ ಕಾರ್ಯಕ್ರಮ ನಡೆಸಲು ನಿಗಧಿಯಾಗಿದ್ದು, ಸಂಬಂಧಿಸಿದ ವಿವಿಧ ಇಲಾಖೆಗಳಿಂದ ಅನುಮತಿ ಪಡೆದು ಸಕಲ ಸಿದ್ದತೆಗಳನ್ನು ಮಾಡಲಾಗುತ್ತಿದೆ.

ಈ ನಿಟ್ಟಿನಲ್ಲಿ ಸಕಲ ಸಿದ್ದತೆಗಳನ್ನು ಮಾಡಲಾಗುತ್ತಿದ್ದು, ಸುಮಾರು 15 ಸಾವಿರ ಜನರು ಕಾರ್ಯಕ್ರಮದಲ್ಲಿ ಭಾಗವಹಿಸುವ ನಿರೀಕ್ಷೆಯಿದ್ದು, ಕುಡಿಯುವ ನೀರು, ನೆರಳು, ಊಟದ ವ್ಯವಸ್ಥೆ ಏರ್ಪಾಟುಗಳನ್ನು ಮಾಡಲಾಗಿದೆ ಎಂದರು.

ಸಂಸದರಾದ ಡಾ. ಕೆ. ಸುಧಾಕರ್ ಅಧ್ಯಕ್ಷತೆಯಲ್ಲಿ ನಡೆಯಲಿರುವ ಡಾ. ಬಿ.ಆರ್.ಅಂಬೇಡ್ಕರ್ ಹಾಗೂ ಡಾ.ಬಾಬು ಜಗಜೀವನರಾಂ ಜಯಂತಿ ಕಾರ್ಯಕ್ರದಲ್ಲಿ ವಾಲ್ಮೀಕಿ, ಮಾದರ, ಲಂಬಾಣಿ, ಭೋವಿ, ಛಲವಾಧಿ ಸಮುದಾಯದ ಸ್ವಾಮಿಜೀಗಳು, ಒಕ್ಕಲಿಗರ ಸಂಘದ ನಿರ್ದೇಶಕ ಟಿ.ಕೋನಪರೆಡ್ಡಿ, ಜಿಲ್ಲಾ ಪಂಚಾಯತ್ ಮಾಜಿ ಅದ್ಯಕ್ಷರಾದ ಪಿ.ಎನ್.ಕೇಶವರೆಡ್ಡಿ, ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ರಾಮಲಿಂಗಪ್ಪ ಸೇರಿದಂತೆ ಹಲವು ಮುಖಂಡರು ಭಾಗವಹಿಸಲಿದ್ದಾರೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಮಾದಾರ ಮಹಾಸಭಾ ತಾಲೂಕು ಅದ್ಯಕ್ಷ ಆ.ನ.ಮೂರ್ತಿ, ಬಿಜೆಪಿ ಯುವ ಮೋಚಾ ಅಧ್ಯಕ್ಷ ಸುನೀಲ್, ಶ್ರೀನಿವಾಸರೆಡ್ಡಿ, ಗೂಳೂರು ಲಕ್ಷ್ಮಿ ನಾರಾಯಣ, ಜಯಂತ್, ಶಿವಪ್ಪ, ಗಣೇಶ್‌ರೆಡ್ಡಿ, ಭರತ್‌ರೆಡ್ಡಿ, ಯಾಮನ್ನ, ಕಡಪಲ್ಲಿ ಬಾಬುರೆಡ್ಡಿ ಮತ್ತಿತರರು ಇದ್ದರು.

## ರಾಯಲ್ ರೂರಲ್ ಕ್ರಿಕೆಟ್ ಕ್ಲಬ್ ಉದ್ಘಾಟನೆ ಮತ್ತು ಜೆರ್ಸಿ ಅನಾವರಣ

ಕೋಲಾರ

ನೂತನವಾಗಿ ಜಿಲ್ಲೆಯಲ್ಲಿ ರಾಯಲ್ ರೂರಲ್ ಕ್ರಿಕೆಟ್ ಕ್ಲಬ್ ಉದ್ಘಾಟನೆ ಹಾಗೂ ಜೆರ್ಸಿ ಅನಾವರಣ ಮಾಡಲಾಯಿತು.

ನಿದರಮಂಗಲದ ರಮೇಶ್ (ವಿಧಾನಸೌಧ) ಮತ್ತು ತೋಟಗಾರಿಕೆ ಇಲಾಖೆಯ ಪರಮೇಶ್ ನೇತೃತ್ವದ ರೂರಲ್ ರಾಯಲ್ ಕ್ರಿಕೆಟ್ ಕ್ಲಬ್ ಉದ್ಘಾಟನೆ ಹಾಗೂ ಜೆರ್ಸಿಯನ್ನ ಕೋಲಾರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಎಸ್.ಕೆ.ಚಂದ್ರಶೇಖರ್ ಅನಾವರಣ




ಮಾಡಿದರು.

ಇದೇ ಸಂದರ್ಭದಲ್ಲಿ ಕೋಲಾರ ಜಿಲ್ಲಾ ಪತ್ರಕರ್ತರ ಸಂಘ ಮತ್ತು ರಾಯಲ್ ರೂರಲ್ ಕ್ರಿಕೆಟ್ ಕ್ಲಬ್ ತಂಡಗಳ ನಡುವೆ ಸೌಹಾರ್ದಯುತ ಕ್ರಿಕೆಟ್ ಪಂದ್ಯವನ್ನು ಆಯೋಜಿಸಲಾಯಿತು. ಎರಡೂ ತಂಡಗಳು ಉತ್ತಮ ಪ್ರದರ್ಶನ ನೀಡಿ ಪಂದ್ಯವನ್ನು ಯಶಸ್ವಿಯಾಗಿ ನಡೆಸಿಕೊಟ್ಟರು.

ಈ ಸಂದರ್ಭದಲ್ಲಿ ರಾಯಲ್ ರೂರಲ್ ಕ್ರಿಕೆಟ್ ಕ್ಲಬ್ ತಂಡದ ಸದಸ್ಯರು ಹಾಗೂ ಜಿಲ್ಲಾ ಪತ್ರಕರ್ತರ ಸಂಘದ ಕ್ರಿಕೆಟ್ ತಂಡದ ಸದಸ್ಯರು ಮತ್ತು

ಜಯರಾಮ್ (ಆಹಾರ ಇಲಾಖೆ), ಅನಿಲ್ (ಎಚ್‌ಡಿಎಫ್‌ಸಿ), ರವಿ ಗೌಡ, ಅಶ್ವತ್, ನಕ್ಕನಹಳ್ಳಿ ಸುನಿಲ್ ನಿದರಮಂಗಲ ಮತ್ತಿತರರು ಉಪಸ್ಥಿತರಿದ್ದರು.

# ಕಾಂಗ್ರೆಸ್ಸಿನಿಂದ ನಾರಿಶಕ್ತಿಗೆ ಅಪಮಾನ: ವಿಜಯೇಂದ್ರ



ಬೆಂಗಳೂರು

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕಾಂಗ್ರೆಸ್ಸಿನವರು ಮಹಿಳಾ ಮೀಸಲಾತಿ ಒಂದು ರಾಜಕೀಯ ಗಿಮಿಕ್ ಎಂದಿದ್ದಾರೆ. ಈ ಹೇಳಿಕೆಯ ಮೂಲಕ ದೇಶದ ನಾರಿಶಕ್ತಿಗೆ ಅಪಮಾನ ಮಾಡುವ ಕೆಲಸವನ್ನು ಕಾಂಗ್ರೆಸ್ ಪಕ್ಷದವರು ಮಾಡಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಅವರು ತಿಳಿಸಿದ್ದಾರೆ.

ಮಾಧ್ಯಮಗಳ ಜೊತೆ ಇಂದು ಮಾತನಾಡಿದ ಅವರು, ಮಹಿಳಾ ಮೀಸಲಾತಿಯು ನರೇಂದ್ರ ಮೋದಿಜಿ ಅವರು ತೆಗೆದುಕೊಂಡ ಐತಿಹಾಸಿಕ ನಿರ್ಣಯ ಎಂದು ತಿಳಿಸಿದರು. ಉಪ ಚುನಾವಣೆಯಲ್ಲಿ ರಾಜ್ಯದ ಮುಖ್ಯಮಂತ್ರಿಗಳು ವಿಧಾನಸೌಧ ಮತ್ತು ಆಡಳಿತವನ್ನು ಸಂಪೂರ್ಣ ಮರೆತು ಬಾಗಲಕೋಟೆಯಲ್ಲಿ 8–9 ದಿನಗಳ ಕಾಲ ಇದ್ದರು. ದಾವಣಗೆರೆ ಬಗ್ಗೆ ಮುಖ್ಯಮಂತ್ರಿಗಳು ತಲೆ ಕೆಡಿಸಿಕೊಂಡಂತೆ ಕಾಣಲಿಲ್ಲ ಎಂದು ತಿಳಿಸಿದರು.

ಆದರೆ, ಬಾಗಲಕೋಟೆಯಲ್ಲಿ 8–9 ದಿನಗಳ ಕಾಲ ತಮ್ಮ ಪಟಾಲಂ ಜೊತೆ ಸೂಟ್‌ಕೇಸ್ ಜೊತೆ ಅಲ್ಲೇ ಇದ್ದುದನ್ನು ನೋಡಿದ್ದೀರಿ. ಮುಖ್ಯಮಂತ್ರಿಗಳು ಸಂಪೂರ್ಣ ಹತಾಶರಾಗಿದ್ದರು. ಬಾಗಲಕೋಟೆ, ದಾವಣಗೆರೆ ದಕ್ಷಿಣವನ್ನು ಕಾಂಗ್ರೆಸ್ ಪಕ್ಷದಿಂದ ಕಿತ್ತುಕೊಳ್ಳುವಲ್ಲಿ ಯಶಸ್ವಿ ಆಗುತ್ತೇವೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಎರಡೂ ಕಡೆ ಗೆಲ್ಲುವ ಸಂಪೂರ್ಣ ವಿಶ್ವಾಸ ನಮಗಿದೆ ಎಂದು ತಿಳಿಸಿದರು.

ದಾವಣಗೆರೆ ಸೋಲಿನ ಮುನ್ಸೂಚನೆ ಲಭಿಸಿದ್ದರಿಂದ ಕಾಂಗ್ರೆಸ್ ಪಕ್ಷದ ಹೈಕಮಾಂಡ್ ಮುಖ್ಯಮಂತ್ರಿಗಳ ರಾಜಕೀಯ ಸಲಹೆಗಾರರ ರಾಜೀನಾಮೆ ಪಡೆಯುವಂತೆ ಸೂಚನೆ ನೀಡಿದೆ. ಸಚಿವಸಂಪುಟದ ವಿಸ್ತರಣೆಗೆ ಆಗ್ರಹಿಸಿ 38ಕ್ಕೂ ಹೆಚ್ಚು ಶಾಸಕರು ಈಗಾಗಲೇ ದೆಹಲಿಯಲ್ಲಿ ಬೀಡು ಬಿಟ್ಟಿದ್ದಾರೆ. ಡಿ.ಕೆ.ಶಿವಕುಮಾರ್ ಬೆಂಬಲಿಗರು ಸಹ ದೆಹಲಿ ಯಾತ್ರೆ ಪ್ರಾರಂಭ ಮಾಡಿದ್ದನ್ನು ಗಮನಿಸಿದರೆ, ಉಪ ಚುನಾವಣೆ ಫಲಿತಾಂಶದ ನಂತರ ಆಡಳಿತ ಪಕ್ಷವಾದ ಕಾಂಗ್ರೆಸ್ ಪಕ್ಷದಲ್ಲಿ ಅಲ್ಲೋಲಕಲ್ಲೋಲ ಆಗಲಿದೆ. ಅದರ ಸ್ಪಷ್ಟ ಮುನ್ಸೂಚನೆ ಕಾಣುತ್ತಿದೆ ಎಂದು ತಿಳಿಸಿದರು.

ಚುನಾವಣಾ ಫಲಿತಾಂಶದ ಬಳಿಕ ಇವರಿಗೆ ಜ್ಞಾನೋದಯ ಆಗಲಿದೆ ಎಂದು ಪ್ರಶ್ನೆಗೆ ಉತ್ತರಿಸಿದರು. ಅಭಿವೃದ್ಧಿಶೂನ್ಯತೆ, ಓಲೈಕೆ ರಾಜಕಾರಣಕ್ಕೆ ಜನರು ಉತ್ತರ ಕೊಡಲಿದ್ದಾರೆ ಎಂದರು.

# ಕೆಪಿಸಿಎಲ್: ಜಲ ವಿದ್ಯುತ್ ಉತ್ಪಾದನೆಯಲ್ಲಿ ದಾಖಲೆ

ಬೆಂಗಳೂರು

ಕರ್ನಾಟಕ ವಿದ್ಯುತ್ ನಿಗಮವು (ಕೆಪಿಸಿಎಲ್) 2025–26ನೇ ಸಾಲಿನಲ್ಲಿ 15,509 ದಶಲಕ್ಷ ಯೂನಿಟ್ ಜಲ ವಿದ್ಯುತ್ ಉತ್ಪಾದಿಸುವ ಮೂಲಕ ದಾಖಲೆ ಮಾಡಿದೆ.

ಕೇಂದ್ರ ಅಂಕಿ–ಅಂಶ ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವಾಲಯದ ವರದಿಯ ಪ್ರಕಾರ 2025–26ನೇ ಸಾಲಿನಲ್ಲಿ ಕೆಪಿಸಿಎಲ್ 3.63 ಗಿಗಾವಾಟ್ ವಿದ್ಯುತ್‌ನೊಂದಿಗೆ ಜಲ ವಿದ್ಯುತ್ ಉತ್ಪಾದನೆಯಲ್ಲಿ ಮುಂಚೂಣಿಯಲ್ಲಿದೆ.

ಶರಾವತಿ ಕಣಿವೆಯಲ್ಲಿ ನಾಲ್ಕು, ಕಾಳಿ ಕಣಿವೆಯ ನಾಲ್ಕು, ವಾರಾಹಿ ಕಣಿವೆ ಮತ್ತು ಕಾವೇರಿ ಕಣಿವೆಯ ತಲಾ ಎರಡು, ಕೃಷ್ಣಾ ಮತ್ತು ತುಂಗಭದ್ರಾ ನದಿಗಳಲ್ಲಿ ತಲಾ ಒಂದು ವಿದ್ಯುತ್ ಉತ್ಪಾದನಾ ಸ್ಥಾವರಗಳಲ್ಲಿ 15,509 ದಶಲಕ್ಷ ಯೂನಿಟ್ ವಿದ್ಯುತ್ ಉತ್ಪಾದನೆಯಾಗಿದೆ. 2024–25ನೇ ಸಾಲಿನಲ್ಲಿ 13,853 ದಶಲಕ್ಷ ಯೂನಿಟ್ ವಿದ್ಯುತ್ ಉತ್ಪಾದಿಸಿರುವುದು ಇದುವರೆಗಿನ ದಾಖಲೆಯಾಗಿತ್ತು.

'ಕೆಪಿಸಿಎಲ್ ರಾಜ್ಯದ ವಿದ್ಯುತ್ ಬೇಡಿಕೆಯನ್ನು ಈಡೇರಿಸಲು ಶ್ರಮಿಸುತ್ತಿದೆ. ಶಿವನಸಮುದ್ರ, ಶಿಂಷಾ, ಶರಾವತಿ ಹಾಗೂ ಮಹಾತ್ಮ ಗಾಂಧಿ ಜಲ ವಿದ್ಯುತ್ ಕೇಂದ್ರದ ಕೆಲವು ಘಟಕಗಳು ರಾಜ್ಯದ ಅತ್ಯಂತ ಹಳೆಯ ಜಲವಿದ್ಯುತ್ ಕೇಂದ್ರಗಳಾಗಿದ್ದರೂ, ಈ ಘಟಕಗಳ ಕಾರ್ಯಕ್ಷಮತೆ ಗಮನಾರ್ಹವಾಗಿದೆ. ಉತ್ತಮ ನಿರ್ವಹಣೆಯಿಂದ ಹೆಚ್ಚು ವಿದ್ಯುತ್ ಉತ್ಪಾದನೆ ಸಾಧ್ಯವಾಗಿದೆ' ಎಂದು ಕೆಪಿಸಿಎಲ್‌ನ ವ್ಯವಸ್ಥಾಪಕ ನಿರ್ದೇಶಕರೂ ಆಗಿರುವ ಇಂಧನ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ ತಿಳಿಸಿದ್ದಾರೆ.

'ಕಳೆದ ವರ್ಷ ಹೆಚ್ಚು ಮಳೆ ಬಿದ್ದಿರುವುದರ ಜತೆಗೆ ವಿದ್ಯುತ್ ಸ್ಥಾವರಗಳನ್ನು ಉತ್ತಮ ರೀತಿಯಲ್ಲಿ ನಿರ್ವಹಣೆ ಮಾಡಿರುವುದರಿಂದ ರಾಜ್ಯದ ಜಲ ವಿದ್ಯುತ್ ಸ್ಥಾವರಗಳಲ್ಲಿ ದಾಖಲೆಯ ವಿದ್ಯುತ್ ಉತ್ಪಾದನೆಯಾಗಿದೆ' ಎಂದು ಇಂಧನ ಸಚಿವ ಕೆ.ಜೆ. ಜಾರ್ಜ್ ತಿಳಿಸಿದ್ದಾರೆ.

# ದಾವಣಗೆರೆ ಗಲಾಟೆ ಕಾಂಗ್ರೆಸ್ ಒಳಗಿನ ವಿಷಯ

ಬೆಂಗಳೂರು

ದಾವಣಗೆರೆ ದಕ್ಷಿಣದಲ್ಲಿ ನಡೆದ ಗಲಾಟೆ ಕಾಂಗ್ರೆಸ್ ಪಕ್ಷದ ಒಳಗಿನ ವಿಚಾರವಾಗಿದ್ದು, ಅದನ್ನು ಅವರು ತಾವೇ ಬಗೆಹರಿಸಿಕೊಳ್ಳಬೇಕು ಎಂದು ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವ ಎಚ್.ಡಿ. ಕುಮಾರಸ್ವಾಮಿ ತಿಳಿಸಿದ್ದಾರೆ.

ಕೇಂದ್ರ ಸಚಿವರಾಗಿ ಅಧಿಕಾರ ವಹಿಸಿಕೊಂಡ ಎರಡು ವರ್ಷಗಳ ನಂತರ ಇದೇ ಮೊದಲ ಬಾರಿಗೆ ಸೋಮವಾರ ವಿಧಾನಸೌಧಕ್ಕೆ ಭೇಟಿ ನೀಡಿದ ಅವರು, ರಾಜ್ಯದ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಅವರೊಂದಿಗೆ ಮಹತ್ವದ ಸಮಾಲೋಚನೆ ನಡೆಸಿದರು.

ವಿಧಾನಸೌಧದಲ್ಲಿರುವ ಸಚಿವರ ಕಚೇರಿಯಲ್ಲಿ ನಡೆದ ಈ ಸಭೆಯಲ್ಲಿ ಮಂಡ್ಯ ಲೋಕಸಭಾ ಕ್ಷೇತ್ರದಲ್ಲಿ ಕೈಗಾರಿಕೆಗಳ ಸ್ಥಾಪನೆ ಹಾಗೂ ರಾಜ್ಯದಲ್ಲಿ ಉದ್ಯಮಗಳನ್ನು ಉತ್ತೇಜಿಸುವ ಮೂಲಕ ಉದ್ಯೋಗಾವಕಾಶಗಳನ್ನು ಹೆಚ್ಚಿಸುವ ಕುರಿತು ವಿಸ್ತೃತ ಚರ್ಚೆ ನಡೆಯಿತು. ಸಭೆಯಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಹಿರಿಯ ಅಧಿಕಾರಿಗಳು, ಮಂಡ್ಯದ ಜನಪ್ರತಿನಿಧಿಗಳು ಹಾಗೂ ಮಾಜಿ ಸಚಿವರು ಮತ್ತು ಶಾಸಕರು ಭಾಗವಹಿಸಿದ್ದರು.

ಸಭೆ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಎಚ್.ಡಿ. ಕುಮಾರಸ್ವಾಮಿ ಅವರು, ಮಂಡ್ಯದಲ್ಲಿ ಕೈಗಾರಿಕೆ ಸ್ಥಾಪನೆಗೆ ಜಾಗ ಹಂಚಿಕೆ ವಿಚಾರವಾಗಿ ಈಗಾಗಲೇ ಹಲವಾರು ಚರ್ಚೆಗಳು ನಡೆದಿವೆ. ಅದನ್ನು ತಾರ್ಕಿಕ ಅಂತ್ಯಕ್ಕೆ ತೆಗೆದುಕೊಂಡು ಹೋಗುವ ಉದ್ದೇಶದಿಂದ ಸಭೆ ಕರೆದಿದ್ದು, ಸಚಿವ ಎಂ.ಬಿ. ಪಾಟೀಲ್ ಅವರು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದು ಹೇಳಿದರು.

# ಕೆಎಸ್ಆರ್‌ಟಿಸಿಗೆ ಮೂರು ರಾಷ್ಟ್ರಮಟ್ಟದ ಪ್ರಶಸ್ತಿಗಳು ಲಭ್ಯ

ನವದೆಹಲಿ / ಬೆಂಗಳೂರು

Best Customer Acquisition & Retention, ವರ್ಗದಲ್ಲಿ ನಿಗಮದ ಬಸ್‌ಗಳ ಬ್ರ್ಯಾಂಡಿಂಗ್ ಗೆ Best Use of Technology ವರ್ಗದಲ್ಲಿ AWATAR 4.0 (UPI ಸೌಲಭ್ಯ ಸಮೇತ) ಹಾಗೂ ಮಾನವ ಸಂಪನ್ಮೂಲ ಮತ್ತು ಆರೋಗ್ಯ ಉಪಕ್ರಮಗಳಿಗೆ ಪ್ರಶಸ್ತಿ ಲಭಿಸಿದೆ.

AWATAR ವ್ಯವಸ್ಥೆ ಮೂಲಕ ಆನ್‌ಲೈನ್ ಟಿಕೆಟ್ ಕಾಯ್ದಿರಿಸುವಿಕೆ, ನೈಜ–ಸಮಯ ಆಸನ ಮಾಹಿತಿ ಮತ್ತು ನಗದುರಹಿತ ಯುಪಿಐ ಪಾವತಿಗಳು ಸುಲಭವಾಗಿವೆ.

ನಿಗಮದ ಅತ್ಯುತ್ತಮ ಮಾನವ



ಸಂಪನ್ಮೂಲ ಮತ್ತು ಆರೋಗ್ಯ ಉಪಕ್ರಮಗಳಿಗೆ ಹಾಗೂ ನಿಗಮದ ಬಸ್ ಬ್ರಾಂಡಿಂಗ್ ಅಂಬಾರಿ ಉತ್ಸವ, ಪಲ್ಲಕ್ಕಿ, ಐರಾವತ ಕ್ಲಬ್ ಕ್ಲಾಸ್ 2.0, ಅಶ್ವ ಮೇಧ ಬಸ್ಸುಗಳು ಪ್ರಯಾಣಿಕರಲ್ಲಿ ಹೆಚ್ಚು ಜನಮನ್ನಣೆ ಗಳಿಸಿರುವುದನ್ನು ಗುರುತಿಸಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

ನವದೆಹಲಿಯಲ್ಲಿ ನಡೆದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಶ್ರೀಮತಿ ನಿಧಿ ಎಸ್ ಮಿತ್ತಲ್, ಮಾರ್ಕೆಟಿಂಗ್ ಲೀಡರ್ ಹಲ್ಟ್ ಇಂಟರ್ ನ್ಯಾಷನಲ್ ಬಿಸಿನೆಸ್ ಸ್ಕೂಲ್ ರವರು ಪ್ರಶಸ್ತಿ ಪ್ರದಾನ ಮಾಡಿದರು.

ನಿಗಮದ ಪರವಾಗಿ ಎಂ.ಪಿ. ಶ್ರೀಹರಿ ಬಾಬು, ವಿಭಾಗೀಯ ನಿಯಂತ್ರಣಾಧಿಕಾರಿ, ಪುತ್ತೂರು ವಿಭಾಗ ಹಾಗೂ ಎಸ್.ಎಸ್. ದಶರಥ್, ವಿಭಾಗೀಯ ನಿಯಂತ್ರಣಾಧಿಕಾರಿ, ಹಾಸನ ವಿಭಾಗ, ಪ್ರಶಸ್ತಿಯನ್ನು ಸ್ವೀಕರಿಸಿದರು.

# ಸಂಪುಟಕ್ಕೆ ಸರ್ಜರಿ..?



ಸಚಿವ ಸ್ಥಾನಕ್ಕೆ ಬೇಡಿಕೆಯಿಟ್ಟು ಕರ್ನಾಟಕ ರಾಜ್ಯದಿಂದ ದೆಹಲಿಗೆ ತೆರಳಿದ ಕಾಂಗ್ರೆಸ್ ಹಿರಿಯರು ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದರು.

ಬೆಂಗಳೂರು

ಹೈಕಮಾಂಡ್ ಈ ಮೊದಲು ಎರಡು ವರ್ಷಗಳನ್ನು ಪೂರ್ಣಗೊಳಿಸಿದ ನಂತರ ಸಂಪುಟ ಪುನಾರಚನೆ ಮತ್ತು ಹೊಸ ಮುಖಗಳನ್ನು ಸೇರಿಸುವುದಾಗಿ ಭರವಸೆ ನೀಡಿತ್ತು ಎಂದು ಶಾಸಕರು ಹೇಳಿಕೊಂಡಿದ್ದಾರೆ. ಈಗ ಸರ್ಕಾರ ರಚನೆಯಾಗಿ ಮೂರು ವರ್ಷಗಳು ಸಮೀಪಿಸುತ್ತಿವೆ. ಇನ್ನೊಂದು ತಿಂಗಳು ಕಳೆದರೆ ಮೂರು ವರ್ಷ ಪೂರ್ಣಗೊಳ್ಳಲಿವೆ. ಆದರೆ, ಭರವಸೆ ಇನ್ನೂ ಈಡೇರಿಲ್ಲ. ಆದ್ದರಿಂದ ಹೈಕಮಾಂಡ್‌ಗೆ ತನ್ನ ಭರವಸೆಯನ್ನು ನೆನಪಿಸಲು ಮತ್ತು ತಕ್ಷಣದ ಸಂಪುಟ ಪುನಾರಚನೆಗೆ ಒತ್ತಾಯಿಸಲು ನಾವು ಇಲ್ಲಿಗೆ ಬಂದಿದ್ದೇವೆ. ವಿಧಾನಸಭಾ ಚುನಾವಣೆಗೆ ಕೇವಲ ಎರಡು ವರ್ಷಗಳು ಬಾಕಿ ಇರುವುದರಿಂದ ಇತರ ಶಾಸಕರು ಸಚಿವರಾಗಿ ಸೇವೆ ಸಲ್ಲಿಸಲು ಅವಕಾಶ ಪಡೆಯುವ ಸಮಯ ಬಂದಿದೆ. ಇದು ಹೊಸ ಮುಖಗಳಿಗೆ ಅವಕಾಶ ಮಾಡಿಕೊಡುತ್ತದೆ. ಮಾತ್ರವಲ್ಲದೇ ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಗೆಲ್ಲಲು ಸಹಾಯ ಮಾಡುತ್ತದೆ ಎಂದು ಜಯಚಂದ್ರ ಸುದ್ದಿಗಾರರಿಗೆ ತಿಳಿಸಿದರು. ಅಧಿಕಾರ ಹಂಚಿಕೆ ಗುದ್ದಾಟಕ್ಕೂ ನಮಗೂ ಯಾವುದೇ ಸಂಬಂಧ ಇಲ್ಲ – ಪಟ್ಟಣ್: ಮೇ ಮೂರನೇ ವಾರದಲ್ಲಿ ಸಿದ್ದರಾಮಯ್ಯ ಸರ್ಕಾರ ಮೂರು ವರ್ಷಗಳನ್ನು ಪೂರೈಸಲಿದೆ. ಅಧಿಕಾರ ಹಂಚಿಕೆಯ ಹಗ್ಗಜಗ್ಗಾಟದ ನಡುವೆ, ಶಾಸಕರು ದೆಹಲಿ ಯಾತ್ರೆ ಕೈಗೊಂಡಿದ್ದಾರೆ. ಈ ಬಗ್ಗೆ ಪ್ರತಿಕ್ರಿಯೆ ನೀಡಿರುವ ಶಾಸಕ ಅಶೋಕ್ ಪಟ್ಟಣ್, ದೆಹಲಿಯಲ್ಲಿ ಸಿದ್ದರಾಮಯ್ಯ ಅಥವಾ ಶಿವಕುಮಾರ್ ಪರ ಲಾಬಿ ಮಾಡಲು ಬಂದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ನಾವು ಇಲ್ಲಿಗೆ ಸಂಪುಟ ಪುನಾರಚನೆ ಮಾಡಿ ಎಂದು ಕೇಳಲು ಹಾಗೂ ಸಚಿವ ಸಂಪುಟದಲ್ಲಿ ಸ್ಥಾನ ನೀಡುವಂತೆ ಕೇಳಲು ಬಂದಿದ್ದೇವೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ಮುಖ್ಯಮಂತ್ರಿಗಳು ಸಂಪುಟ ಪುನಾರಚನೆಗೆ ಒಲವು ತೋರುತ್ತಿದ್ದಾರೆ. ಆದರೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಸಿದ್ದರಾಮಯ್ಯ ನಡುವಣ ಅಧಿಕಾರ ಹಸ್ತಾಂತರ ಹಗ್ಗಜಗ್ಗಾಟಕ್ಕೂ ತಮ್ಮ ಬೇಡಿಕೆಗೂ ಯಾವುದೇ ಸಂಬಂಧವಿಲ್ಲ ಎಂದು ಶಾಸಕರು ಹೇಳಿದ್ದಾರೆ. ಆದರೆ, ಈ ಎಲ್ಲ ಬೆಳವಣಿಗೆಗಳು ಸಿದ್ದರಾಮಯ್ಯ ಅವರ ಆಶಯಕ್ಕೆ ಅನುಗುಣವಾಗಿ ನಡೆಯುತ್ತಿವೆ ಎನ್ನಲಾಗುತ್ತಿದೆ.

ಸಿದ್ದರಾಮಯ್ಯ ಮತ್ತು ರಾಜ್ಯ ಸರ್ಕಾರದಲ್ಲಿರುವ ಅವರ ಶಿಬಿರದ ಬೆಂಬಲಿಗರು ಸಂಪುಟ ಪುನರ್ರಚನೆಗೆ ಒತ್ತಾಯಿಸುತ್ತಿದ್ದಾರೆ. ಆದರೆ, ಅತ್ತ ಡಿಸಿಎಂ ಡಿಕೆ ಶಿವಕುಮಾರ್ ಬಣ ಸಂಪುಟ ಪುನರ್ ರಚನೆಯನ್ನು ಆದಷ್ಟು ಮುಂದೂಡಲು ಪ್ರಯತ್ನಿಸುತ್ತಿದ್ದಾರೆ. ಕಳೆದ ಆರು ತಿಂಗಳಿಂದ ಈ ಪ್ರಯತ್ನ ನಡೆಯುತ್ತಲೇ ಇದೆ.

ಕಳೆದ ವರ್ಷದ ಅಕ್ಟೋಬರ್‌ನಲ್ಲಿ ಸಿದ್ದರಾಮಯ್ಯ ಮತ್ತು ಶಿವಕುಮಾರ್ ಅವರ ಅಧಿಕಾರಾವಧಿ ಎರಡೂವರೆ ವರ್ಷಗಳನ್ನು ಪೂರೈಸಿದ ನಂತರ ಅವರ ನಡುವಿನ ಅಧಿಕಾರ ಹಸ್ತಾಂತರದ ಜಗಳ ತೀವ್ರಗೊಂಡಿತ್ತು. 2023ರ ವಿಧಾನಸಭಾ ಚುನಾವಣೆಯ ನಂತರ ಹೈಕಮಾಂಡ್ ಹಾಗೂ ಸಿಎಂ, ಡಿಸಿಎಂ ನಡುವೆ ನಡೆದಿದೆ ಎನ್ನಲಾದ ಅಥವಾ ಬಹಿರಂಗಪಡಿಸದ ಒಪ್ಪಂದದ ಪ್ರಕಾರ, ಸಿದ್ದರಾಮಯ್ಯ ಮತ್ತು ಶಿವಕುಮಾರ್ ತಲಾ 30 ತಿಂಗಳು ಸಿಎಂ ಹುದ್ದೆಯನ್ನು ಹಂಚಿಕೊಳ್ಳಬೇಕು. ಕಳೆದ ಅಕ್ಟೋಬರ್‌ನಲ್ಲಿ ಸಿದ್ದರಾಮಯ್ಯ ತಮ್ಮ 30 ತಿಂಗಳುಗಳ ಅಧಿಕಾರವನ್ನು ಪೂರೈಸಿದಾಗಿನಿಂದ ಡಿಸಿಎಂ ಡಿ ಕೆ ಶಿವಕುಮಾರ್ ಪಕ್ಷದ ಹೈಕಮಾಂಡ್ ಗೆ ಒಪ್ಪಂದ ಪ್ರಕಾರ ನೀಡಿದ ಮಾತನ್ನು ಪೂರೈಸುವಂತೆ ಒತ್ತಾಯಿಸುತ್ತಿದ್ದಾರೆ.

ಅಂದಿನಿಂದ ಅವರು ದೆಹಲಿಗೆ ಹಲವಾರು ಬಾರಿ ಭೇಟಿ ನೀಡಿ ರಾಹುಲ್ ಗಾಂಧಿ, ಪ್ರಿಯಾಂಕಾ ಗಾಂಧಿ ವಾದ್ರಾ, ಖರ್ಗೆ ಅವರನ್ನು ಭೇಟಿ ಮಾಡಿದ್ದಾರೆ. ಆದರೆ, ಯಾವುದೇ ಪ್ರಯೋಜನವಾಗಿಲ್ಲ. ಐದು ರಾಜ್ಯಗಳಲ್ಲಿ ನಡೆಯುತ್ತಿರುವ ಚುನಾವಣೆಗಳು ಮುಗಿದ ನಂತರ, ಕರ್ನಾಟಕದಲ್ಲಿ ನಾಯಕತ್ವದ ಸಮಸ್ಯೆಯನ್ನು ಇತ್ಯರ್ಥಪಡಿಸಲು ರಾಹುಲ್ ಒಲವು ಹೊಂದಿದ್ದಾರೆ ಎನ್ನಲಾಗಿದೆ. ಮೇ ತಿಂಗಳ ಮಧ್ಯ ಭಾಗದಲ್ಲಿ ಸಿಎಂ ಸಿದ್ದರಾಮಯ್ಯ ಮತ್ತು ಶಿವಕುಮಾರ್ ಅವರನ್ನು ದೆಹಲಿಗೆ ಕರೆಸುತ್ತಾರೆ ಎಂದು ಡಿಕೆ ಪಾಳಯ ನಿರೀಕ್ಷಿಸುತ್ತಿದೆ. ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಶಿವಕುಮಾರ್ ಮಂಗಳವಾರ ಈ ಬಗ್ಗೆ ಪ್ರತಿಕ್ರಿಯೆ ನೀಡಿ, ದೆಹಲಿಯಲ್ಲಿ ಬೀಡುಬಿಟ್ಟಿರುವ ಶಾಸಕರಿಗೆ ಸಂಪುಟ ಪುನರ್ರಚನೆಯ ಬಗ್ಗೆ ಸಾರ್ವಜನಿಕ ಹೇಳಿಕೆ ನೀಡದಂತೆ ಎಚ್ಚರಿಕೆ ನೀಡಿದ್ದಾರೆ.

ಶಾಸಕರು ಪಕ್ಷದ ಹೈಕಮಾಂಡ್ ಅನ್ನು ಭೇಟಿ ಮಾಡುವುದರಲ್ಲಿ ಯಾವುದೇ ತಪ್ಪಿಲ್ಲ. ಆದರೆ, ಅನಗತ್ಯ ಸಾರ್ವಜನಿಕ ಹೇಳಿಕೆಗಳನ್ನು ಅವರು ನೀಡುವುದನ್ನು ತಪ್ಪಿಸಬೇಕು. ಎಲ್ಲ ಶಾಸಕರು ಶಿಸ್ತನ್ನು ಕಾಪಾಡಿಕೊಳ್ಳಬೇಕು. ಅವರು ಮಾಧ್ಯಮಗಳ ಮುಂದೆ ಪಕ್ಷದ ಘನತೆಗೆ ದಕ್ಕೆ ತರಬಾರದು. ಎಲ್ಲರ ಭವಿಷ್ಯವು ಮಾಧ್ಯಮಗಳ ಮೇಲೆ ಅಲ್ಲ, ಪಕ್ಷದ ಮೇಲೆ ಇದೆ ಎಂಬುದನ್ನು ನೀವು ಅರ್ಥಮಾಡಿಕೊಳ್ಳಬೇಕು ಎಂದು ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಡಿಸಿಎಂ ಡಿ ಕೆ ಶಿವಕುಮಾರ್ ಹೇಳಿದ್ದಾರೆ. ಅವರಿಗೆ ಹೈಕಮಾಂಡ್ ಭೇಟಿ ಮಾಡುವ ಹಕ್ಕಿದ್ದರೂ, ಇದು ಸರಿಯಾದ ಸಮಯವಲ್ಲ. ಚುನಾವಣೆಗಳು ನಡೆಯುತ್ತಿವೆ. ಮೊದಲು ಚುನಾವಣೆಗಳು ಮುಗಿಯಲಿ, ನಂತರ ನಾವು ಇದರ ಬಗ್ಗೆ ಯೋಚಿಸಬಹುದು ಎಂದು ಡಿಕೆ ಶಿವಕುಮಾರ್ ಹೇಳಿದ್ದಾರೆ

# ಹುಬ್ಬಳ್ಳಿ – ಅಲಿಪುರ್ ದ್ವಾರ್ ನಡುವೆ ಬೇಸಿಗೆ ವಿಶೇಷ ರೈಲು ಸಂಚಾರ

ಬೆಂಗಳೂರು

ಬೇಸಿಗೆಯ ರಜಾ ದಿನಗಳಲ್ಲಿ ಪ್ರಯಾಣಿಕರಿಗೆ ಅನುಕೂಲವಾಗುವಂತೆ ಹುಬ್ಬಳ್ಳಿ ಮತ್ತು ಪಶ್ಚಿಮ ಬಂಗಾಳದ ಅಲಿಪುರ್ ದ್ವಾರ್ ನಿಲ್ದಾಣಗಳ ನಡುವೆ, ಬೆಂಗಳೂರಿನ ಮತ್ತು ಯಲಹಂಕ ನಿಲ್ದಾಣಗಳ ಮೂಲಕ ಒಂದು ಟ್ರಿಪ್ ವಿಶೇಷ ಎಕ್ಸ್ ಪ್ರೆಸ್ ರೈಲನ್ನು ಕಾರ್ಯಾಚರಣೆ ಮಾಡಲಾಗುವುದು.

ರೈಲು ಸಂಖ್ಯೆ 07323 ಹುಬ್ಬಳ್ಳಿ–ಅಲಿಪುರ್ ದ್ವಾರ್ ವಿಶೇಷ ಎಕ್ಸ್ ಪ್ರೆಸ್ ರೈಲು 2026ರ ಏಪ್ರಿಲ್ 15ರ ಬುಧವಾರ ರಾತ್ರಿ 11:15ಕ್ಕೆ ಹುಬ್ಬಳ್ಳಿಯಿಂದ ಹೊರಟು, ಶನಿವಾರ ಮಧ್ಯಾಹ್ನ 01:50ಕ್ಕೆ ಅಲಿಪುರ್ ದ್ವಾರ್ ತಲುಪಲಿದೆ. ಮರು ಪ್ರಯಾಣದಲ್ಲಿ ರೈಲು ಸಂಖ್ಯೆ 07324 ಅಲಿಪುರ್ ದ್ವಾರ್–ಹುಬ್ಬಳ್ಳಿ ವಿಶೇಷ ಎಕ್ಸ್ ಪ್ರೆಸ್ ರೈಲು ಏಪ್ರಿಲ್ 19ರ ಭಾನುವಾರ ಸಂಜೆ 04:25ಕ್ಕೆ ಅಲಿಪುರ್ ದ್ವಾರ್'ನಿಂದ ಹೊರಟು, ಬುಧವಾರ ಬೆಳಗ್ಗೆ 09:45ಕ್ಕೆ ಹುಬ್ಬಳ್ಳಿ ನಿಲ್ದಾಣಕ್ಕೆ ಬಂದು ಸೇರಲಿದೆ.

ಈ ರೈಲು ಎರಡೂ ಮಾರ್ಗಗಳಲ್ಲಿ ತನ್ನ ಪ್ರಯಾಣದ ಅವಧಿಯಲ್ಲಿ ದಾವಣಗೆರೆ, ಅರಸೀಕೆರೆ, ತುಮಕೂರು, ಬೆಂಗಳೂರು, ಯಲಹಂಕ, ಧರ್ಮಾವರಂ, ಡೋನ್, ನಂದ್ಯಾಲ, ಗುಂಟೂರು, ವಿಜಯವಾಡ, ರಾಜಮಂಡ್ರಿ, ಕೊಟ್ಟವಲಸ, ವಿಜಯನಗರಂ, ಶ್ರೀಕಾಕುಳಂ ರೋಡ್, ಪಲಾಸ, ಬ್ರಹ್ಮಪುರ, ಖುರ್ದಾ ರೋಡ್, ಭುವನೇಶ್ವರ, ಕಟಕ್, ಭದ್ರಾಕ್, ಖರಗ್ಪುರ, ಅಂದುಲ್, ಬೋಲ್ಪುರ್ (ಶಾಂತಿನಿಕೇತನ), ರಾಂಪುರ್ ಹಾಟ್, ನ್ಯೂ ಫರಕ್ಕಾ, ಮಾಲ್ಡಾ ಟೌನ್, ಬರಸೋಯಿ, ಕಿಶನ್ ಗಂಜ್, ನ್ಯೂ ಜಲ್ಪೈಗುರಿ, ಸಿಲಿಗುರಿ, ಬಿನ್ನಗುರಿ ಮತ್ತು ಹಸಿಮಾರಾ ನಿಲ್ದಾಣಗಳಲ್ಲಿ ನಿಲುಗಡೆ ಹೊಂದಿರಲಿದೆ.

20 ಎಲ್.ಹೆಚ್.ಬಿ ಬೋಗಿಗಳನ್ನು ಹೊಂದಿರುವ ಈ ರೈಲು, ಎಸಿ 2–ಟೈರ್, ಎಸಿ 3–ಟೈರ್, ಸ್ಲೀಪರ್ ಕ್ಲಾಸ್, ಸಾಮಾನ್ಯ ದ್ವಿತೀಯ ದರ್ಜೆ ಹಾಗೂ ಲಗೇಜ್ ಮತ್ತು ಬ್ರೇಕ್ ವ್ಯಾನ್ ಬೋಗಿಗಳನ್ನು ಒಳಗೊಂಡಿರುತ್ತದೆ.

# 'ಭವಿಷ್ಯ ಪಕ್ಷದಲ್ಲಿದೆಯೇ ಹೊರತು ಮಾಧ್ಯಮಗಳ ಮುಂದೆ ಅಲ್ಲ'

ಬೆಂಗಳೂರು

"ಪಕ್ಷದ ಶಾಸಕರು ಹೈಕಮಾಂಡ್ ವರಿಷ್ಠರನ್ನು ಭೇಟಿ ಮಾಡುವುದರಲ್ಲಿ ತಪ್ಪೇನಿಲ್ಲ. ಅನವಶ್ಯಕವಾಗಿ ಏನೇನೋ ಹೇಳಿಕೆ ನೀಡಿದರೆ ಶಿಸ್ತು ಕ್ರಮ ಜರುಗಿಸಲಾಗುವುದು" ಎಂದು ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಎಚ್ಚರಿಕೆ ನೀಡಿದರು.



ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಅವರ ನಿವಾಸದ ಬಳಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಸೋಮವಾರ ಪ್ರತಿಕ್ರಿಯೆ ನೀಡಿದರು.

25 ಜನ ಶಾಸಕರು ದೆಹಲಿಗೆ ತೆರಳಿರುವ ಬಗ್ಗೆ ಕೇಳಿದಾಗ, "ಪಕ್ಷದ ಶಿಸ್ತನ್ನು ಎಲ್ಲಾ ಶಾಸಕರು ಕಾಪಾಡಬೇಕು. ಪಕ್ಷಕ್ಕೆ ಗೌರವ ನೀಡಬೇಕು. ಮಾಧ್ಯಮಗಳ ಮುಂದೆ ಪಕ್ಷದ ಗೌರವವನ್ನು ಹಾಳು ಮಾಡಬಾರದು. ಮುಖ್ಯಮಂತ್ರಿಗಳೂ ಸಹ ಈಗಾಗಲೇ ಈ ವಿಚಾರದ ಬಗ್ಗೆ ಹೇಳಿದ್ದಾರೆ. ಮುಂದಕ್ಕೆ ಎಲ್ಲರ ಭವಿಷ್ಯ ಪಕ್ಷದಲ್ಲಿದೆಯೇ ಹೊರತು ಮಾಧ್ಯಮಗಳಲ್ಲಿ ಇಲ್ಲ" ಎಂದರು.

ಶಾಸಕರು ದೆಹಲಿಗೆ ತೆರಳುವ ಮುಂಚೆ ನಿಮ್ಮ ಬಳಿ ಚರ್ಚೆ ಮಾಡಿದ್ದಾರೆಯೇ ಎಂದು ಕೇಳಿದಾಗ, "ಒಂದಷ್ಟು ಜನ ಮಾಡಿದ್ದಾರೆ. ಹೈಕಮಾಂಡ್ ಬಳಿ ಸಚಿವ ಸ್ಥಾನ ಕೇಳುವುದರಲ್ಲಿ ತಪ್ಪೇನಿಲ್ಲ. ಮೊದಲ ಹಾಗೂ ಎರಡನೇ ಬಾರಿ ಗೆದ್ದಿರುವವರೂ ಮಂತ್ರಿಗಳಾಗಬಹುದು. ಈ ಹಿಂದೆ ಈ ರೀತಿ ನಡೆದಿದೆ. ಆದರೆ ಇದು ಸಮಯವಲ್ಲ. ಇನ್ನೂ ಚುನಾವಣೆಗಳು ನಡೆಯುತ್ತಿವೆ. ಒಂದಷ್ಟು ಜನ ತಮಿಳುನಾಡಿಗೆ ತೆರಳಿದ್ದಾರೆ. ಮೊದಲು ಚುನಾವಣೆ ಆಗಲಿ, ಆನಂತರ ಇದರ ಬಗ್ಗೆ ಯೋಚಿಸೋಣ" ಎಂದರು. ಮಲ್ಲಿಕಾರ್ಜುನ ಖರ್ಗೆ ಅವರ ಭೇಟಿ ಬಗ್ಗೆ ಕೇಳಿದಾಗ, "ಪಕ್ಷದಿಂದ ತಮಿಳುನಾಡಿಗೆ ತೆರಳುವಂತೆ ಸೂಚನೆ ನೀಡಿದ್ದರು. ಅಲ್ಲಿಗೆ ಹೋಗಿ ಬಂದಿದ್ದೇನೆ. ಮತ್ತೆ ತೆರಳಬೇಕಾಗಿದೆ. ಆ ಬಗ್ಗೆ ಎಐಸಿಸಿ ಅಧ್ಯಕ್ಷರಿಗೆ ವರದಿ ನೀಡಬೇಕಿತ್ತು. ಭೇಟಿ ಮಾಡಿ ವರದಿ ಮಾಡಿದ್ದೇನೆ" ಎಂದು ತಿಳಿಸಿದರು.

# ಆದಿಚುಂಚನಗಿರಿಯಲ್ಲಿ ಭೈರವೈಕ್ಯ ಮಂದಿರ ಲೋಕಾರ್ಪಣೆ: 15ರಂದು ಪ್ರಧಾನಿಯಿಂದ ಉದ್ಘಾಟನೆ

ಬೆಂಗಳೂರು

ಆದಿಚುಂಚನಗಿರಿ ಕ್ಷೇತ್ರದಲ್ಲಿ 71ನೇ ಜಗದ್ಗುರು ಡಾ. ಭೈರವೈಕ್ಯ ಬಾಲಗಂಗಾಧರನಾಥ ಸ್ವಾಮೀಜಿ ಅವರ ಸ್ಮರಣಾರ್ಥ ನಿರ್ಮಿತ ಭವ್ಯ ಮಂದಿರದ ಲೋಕಾರ್ಪಣೆ ಕಾರ್ಯಕ್ರಮ ಏಪ್ರಿಲ್ 15ರಂದು ನಡೆಯಲಿದ್ದು, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಉದ್ಘಾಟನೆ ನೆರವೇರಿಸಲಿದ್ದಾರೆ.

ಡಾ. ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಅವರ ಮಾರ್ಗದರ್ಶನದಲ್ಲಿ ನಿರ್ಮಾಣಗೊಂಡ ಈ ಮಂದಿರವು ಆಧ್ಯಾತ್ಮಿಕ ಹಾಗೂ ಶಿಲ್ಪಕಲೆಯ ವೈಭವವನ್ನು ಒಳಗೊಂಡಿದೆ. 69 ವರ್ಷಗಳ ಕಾಲ ಸಮಾಜಸೇವೆಯಲ್ಲಿ ತೊಡಗಿದ್ದ ಬಾಲಗಂಗಾಧರನಾಥ ಸ್ವಾಮೀಜಿಗಳು ಶಿಕ್ಷಣ, ಆರೋಗ್ಯ ಸೇರಿದಂತೆ 9 ವಿಧದ ಸೇವಾ ಕ್ಷೇತ್ರಗಳಲ್ಲಿ ಅಪಾರ ಕೊಡುಗೆ ನೀಡಿದ್ದಾರೆ. ಅವರು ಐಕ್ಯಗೊಂಡು ಈಗಾಗಲೇ 13 ವರ್ಷಗಳು ಕಳೆದಿವೆ.

ಮಂದಿರದ ಮಧ್ಯಭಾಗದಲ್ಲಿ ಗುರುಗಳು ಐಕ್ಯಗೊಂಡಿರುವ ಪವಿತ್ರ ಸ್ಥಳವಿದ್ದು, ಸೂಕ್ಷ್ಮದೇಹ ಮತ್ತು ಸ್ಥೂಲದೇಹದ ತತ್ವಗಳನ್ನು ಪ್ರತಿಬಿಂಬಿಸುವ ವಿನ್ಯಾಸವನ್ನು ಹೊಂದಿದೆ. ಮೂರು ದೇಹಗಳ ಕಲ್ಪನೆ ಮತ್ತು ಐದು ಕೋಶಗಳ ಆಧ್ಯಾತ್ಮಿಕ ತತ್ವಗಳ ಆಧಾರದ ಮೇಲೆ ದ್ರಾವಿಡ ಶೈಲಿಯಲ್ಲಿ ಮಂದಿರವನ್ನು ನಿರ್ಮಿಸಲಾಗಿದೆ.

ಒಡಿಶಾದ ಸೂರ್ಯ ದೇವಾಲಯದ



ಶಿಲ್ಪಕಲೆಯನ್ನು ಸ್ಮರಿಸುವ ವಿನ್ಯಾಸದ ಜೊತೆಗೆ ಹೊಯ್ಸಳ, ಚಾಲುಕ್ಯ ಮತ್ತು ಗಂಗರ ಕಾಲದ ಶಿಲ್ಪಕಲೆಗಳ ಸಂಯೋಜನೆಯೂ ಇಲ್ಲಿ ಕಾಣಸಿಗುತ್ತದೆ.

ಪ್ರಸಿದ್ಧ ಶಿಲ್ಪಿ ಶಂಕರ್ ಸ್ಥಪತಿ ಅವರ ನೇತೃತ್ವದಲ್ಲಿ ಮಂದಿರ ನಿರ್ಮಾಣವಾಗಿದ್ದು, ಅವರ ಚಿಕ್ಕಪ್ಪ ಮುತ್ತಯ್ಯ ಸ್ಥಪತಿ ಕಾಲಭೈರವೇಶ್ವರಸ್ವಾಮಿ ದೇವಾಲಯವನ್ನು ನಿರ್ಮಿಸಿದ್ದರು. ವಿಕಾಸಸೌಧ, ಉದ್ಯೋಗಸೌಧ ಮತ್ತು ಸುವರ್ಣಸೌಧಗಳ ಕಲ್ಲಿನ ವಿನ್ಯಾಸದಲ್ಲೂ ಇವರ ಕೈಚಳಕ ಇದೆ. ಅಮೇರಿಕಾದಲ್ಲಿ ನಿರ್ಮಿಸಲಾದ ಅನೇಕ ದೇವಾಲಯಗಳಲ್ಲಿಯೂ ಇವರ ಕೊಡುಗೆ ಗಮನಾರ್ಹವಾಗಿದೆ.

ಮಂದಿರ ನಿರ್ಮಾಣಕ್ಕೆ ಕೋಯ್ರ, ಹೆಸರಘಟ್ಟ ಕಲ್ಲು, ಗರ್ಭಗುಡಿಗೆ ಇಲಕಲ್ಲಿನ ಕೆಂಪುಕಲ್ಲು ಹಾಗೂ ಮಾಲೂರಿನ ಸಂತೆಕಲ್ಲುಗಳನ್ನು ಬಳಸಲಾಗಿದೆ.

ಈ ಮಹತ್ವಾಕಾಂಕ್ಷಿ ಯೋಜನೆಗೆ ಸುಮಾರು 80 ಕೋಟಿ ವೆಚ್ಚವಾಗಿದ್ದು, ಅನೇಕ ಭಕ್ತರು ಮತ್ತು ದಾನಿಗಳು ಸಹಕಾರ ನೀಡಿದ್ದಾರೆ ಎಂದು ಆದಿಚುಂಚನಗಿರಿ ಮಹಾಸಂಸ್ಥಾನದ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ತಿಳಿಸಿದರು.

ಈ ಸಂಬಂಧ ಶ್ರೀಕ್ಷೇತ್ರದಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ತಪೋವನದ ಹೆಲಿಪ್ಯಾಡ್‌ಗೆ ಆಗಮಿಸಿ, ಜ್ವಾಲಾಪೀಠ ದರ್ಶನ, ನಂತರ ಕಾಲಭೈರವೇಶ್ವರಸ್ವಾಮಿ ದೇವಾಲಯದಲ್ಲಿ ಪೂಜೆ ಸಲ್ಲಿಸಲಿದ್ದಾರೆ. ಬಳಿಕ ಮೂಲ ಮಂದಿರದಲ್ಲಿ ಗುರುಗಳ ದರ್ಶನ ಮಾಡಿ ಕ್ರೀಡಾಂಗಣದ ಕಾರ್ಯಕ್ರಮಕ್ಕೆ ಭಾಗವಹಿಸಲಿದ್ದಾರೆ.

ಬೆಳಿಗ್ಗೆ 9 ಗಂಟೆಯಿಂದ ಸಾರ್ವಜನಿಕರಿಗೆ ಕಾರ್ಯಕ್ರಮ ಸ್ಥಳಕ್ಕೆ ಪ್ರವೇಶ ಕಲ್ಪಿಸಲಾಗುತ್ತದೆ. ಭದ್ರತಾ ಕಾರಣಗಳಿಂದ ದೇವಾಲಯ ಹಾಗೂ ಭೈರವೈಕ್ಯ ಮಂದಿರಕ್ಕೆ ಮಧ್ಯಾಹ್ನ 12:30ರವರೆಗೆ ಪ್ರವೇಶ ನಿರ್ಬಂಧವಿರಲಿದೆ. ನಂತರ ಭಕ್ತರಿಗೆ ದರ್ಶನ ಅವಕಾಶ ನೀಡಲಾಗುತ್ತದೆ.

ವೇದಿಕೆಯಲ್ಲಿ ಎಚ್.ಡಿ. ದೇವೇಗೌಡ,



ಎಚ್.ಡಿ. ಕುಮಾರಸ್ವಾಮಿ, ಡಿ.ಕೆ. ಶಿವಕುಮಾರ್, ಚಲುವರಾಯಸ್ವಾಮಿ ಸೇರಿದಂತೆ ಗಣ್ಯರು ಹಾಗೂ ರಾಜ್ಯಪಾಲರು ಉಪಸ್ಥಿತರಿರಲಿದ್ದಾರೆ ಎಂದರು.

ಸುಮಾರು 1.5 ಲಕ್ಷಕ್ಕೂ ಹೆಚ್ಚು ಭಕ್ತರು ಕಾರ್ಯಕ್ರಮದಲ್ಲಿ ಭಾಗವಹಿಸುವ ನಿರೀಕ್ಷೆಯಿದ್ದು, ಅವರಿಗಾಗಿ 8ರಿಂದ 10 ಸ್ಥಳಗಳಲ್ಲಿ ಅನ್ನಸಂತರ್ಪಣೆ ವ್ಯವಸ್ಥೆ ಮಾಡಲಾಗಿದೆ. ಆದಿಚುಂಚನಗಿರಿಯ ಸಂಕೇತವಾದ ನವಿಲಿನ ರೂಪದ ಕಾಣಿಕೆಯನ್ನು ವಿಶೇಷವಾಗಿ ಅರ್ಪಿಸಲಾಗುವುದು.

ಈ ಭವ್ಯ ಮಂದಿರ ಲೋಕಾರ್ಪಣೆ ಕಾರ್ಯಕ್ರಮ ರಾಜ್ಯದ ಆಧ್ಯಾತ್ಮಿಕ ಹಾಗೂ ಸಾಂಸ್ಕೃತಿಕ ಇತಿಹಾಸದಲ್ಲಿ ಹೊಸ ಅಧ್ಯಾಯವನ್ನು ದಾಖಲಿಸುವ ನಿರೀಕ್ಷೆಯಿದೆ ಎಂದು ಶ್ರೀಗಳು ಹೇಳಿದರು.

ಪ್ರಸಿದ್ಧ ಶಿಲ್ಪಿ ಶಂಕರ್ ಸ್ಥಪತಿ ಅವರ ನೇತೃತ್ವದಲ್ಲಿ ಮಂದಿರ ನಿರ್ಮಾಣವಾಗಿದ್ದು, ಅವರ ಚಿಕ್ಕಪ್ಪ ಮುತ್ತಯ್ಯ ಸ್ಥಪತಿ ಕಾಲಭೈರವೇಶ್ವರಸ್ವಾಮಿ ದೇವಾಲಯವನ್ನು ನಿರ್ಮಿಸಿದ್ದರು. ವಿಕಾಸಸೌಧ, ಉದ್ಯೋಗಸೌಧ ಮತ್ತು ಸುವರ್ಣಸೌಧಗಳ ಕಲ್ಲಿನ ವಿನ್ಯಾಸದಲ್ಲೂ ಇವರ ಕೈಚಳಕ ಇದೆ. ಅಮೇರಿಕಾದಲ್ಲಿ ನಿರ್ಮಿಸಲಾದ ಅನೇಕ ದೇವಾಲಯಗಳಲ್ಲಿಯೂ ಇವರ ಕೊಡುಗೆ ಗಮನಾರ್ಹವಾಗಿದೆ.

# ಮಾಲೂರಿನಲ್ಲಿ ಧಾರ್ಮಿಕ ಉತ್ಸವಕ್ಕೆ ಅದ್ದೂರಿ ತೆರೆ

ಮಾಲೂರು

ಪಟ್ಟಣದ ಆರಾಧ್ಯ ದೈವಗಳಾದ ಶ್ರೀಧರ್ಮರಾಯಸ್ವಾಮಿ ದ್ರೌಪತಾಂಬ ಕರಗ ಮಹೋತ್ಸವ ಹಾಗೂ ಪಟಾಲಮ್ಮ–ಮುತ್ಯಾಲಮ್ಮ ಜಾತ್ರಾ ಮಹೋತ್ಸವವು ಅಪಾರ ಜನಸ್ತೋಮದ ನಡುವೆ ಅತ್ಯಂತ ಸಡಗರ ಮತ್ತು ವಿಜೃಂಭಣೆಯಿಂದ ನೆರವೇರಿತು.

ಕಳೆದ ಒಂದು ವಾರದಿಂದ ವಿವಿಧ ಧಾರ್ಮಿಕ ವಿಧಿವಿಧಾನಗಳೊಂದಿಗೆ ಆರಂಭವಾಗಿದ್ದ ಈ ಉತ್ಸವವು, ಭಾನುವಾರ ರಾತ್ರಿ ನಡೆದ ಐತಿಹಾಸಿಕ 'ಹೂವಿನ ಕರಗ'ದೊಂದಿಗೆ ಪರಾಕಾಷ್ಠೆ ತಲುಪಿತು.



**ಹೂವಿನ ಕರಗ ಮತ್ತು ಅಗ್ನಿಕುಂಡ ಪ್ರವೇಶ:** ಭಾನುವಾರ ರಾತ್ರಿ 11:15 ಗಂಟೆಗೆ ದೇವಸ್ಥಾನದ ಪೂಜಾರಿ ವೆಂಕಟೋರಣಪ್ಪ ಅವರು ಹೂವಿನ ಕರಗ ಹೊತ್ತು ದೇವಾಲಯದಿಂದ ಹೊರಬಂದರು. ವೀರಕುಮಾರರ 'ಅಲಗು' ಸೇವೆ ಮತ್ತು ವಾದ್ಯಗೋಷ್ಠಿಗಳ ನಡುವೆ ಕರಗವು ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿತು. ಪ್ರತಿ ಮನೆಗಳ ಮುಂದೆ ಭಕ್ತರು ಕರಗಕ್ಕೆ ವಿಶೇಷ ಪೂಜೆ ಸಲ್ಲಿಸಿ ಪುನೀತರಾದರು. ಸೋಮವಾರ ಬೆಳಿಗ್ಗೆ 10:30ರ ಸುಮಾರಿಗೆ ದೇವಾಲಯದ ಆವರಣದಲ್ಲಿ ಸಿದ್ಧಪಡಿಸಲಾಗಿದ್ದ ಅಗ್ನಿಕುಂಡದಲ್ಲಿ ಪೂಜಾರಿಗಳು ಕರಗದೊಂದಿಗೆ ಹೆಜ್ಜೆ ಹಾಕುವ ಮೂಲಕ ಧಾರ್ಮಿಕ ವಿಧಿಗಳನ್ನು ಪೂರೈಸಿದರು.

**ಜಾತ್ರೆಯ ವಿಶೇಷತೆಗಳು ಮತ್ತು ಸಿಡಿ ಉತ್ಸವ:** ಜಾತ್ರೆಯ ಅಂಗವಾಗಿ ಪಟಾಲಮ್ಮ ಮತ್ತು ಮುತ್ಯಾಲಮ್ಮ ದೇವಿಯ ಸಿಡಿ ಉತ್ಸವವು ಭಾನುವಾರ ಸಂಜೆ ಅದ್ದೂರಿಯಾಗಿ ನಡೆಯಿತು. ಪಟ್ಟಣದ ವಿವಿಧ ದೇವಾಲಯಗಳಾದ ಸಫಲಾಂಬ, ವೀರಾಂಜನೇಯಸ್ವಾಮಿ, ಶಂಕರನಾರಾಯಣಸ್ವಾಮಿ ಸೇರಿದಂತೆ ಇಪ್ಪತ್ತಕ್ಕೂ ಹೆಚ್ಚು ಪಲ್ಲಕ್ಕಿಗಳ ಮೆರವಣಿಗೆ ಭಕ್ತರ ಕಣ್ಣಿಗೆ ಹಬ್ಬದಂತಿತ್ತು. ಶಾಸಕ ಕೆ.ವೈ.ನಂಜೇಗೌಡ ಹಾಗೂ ಮಾಜಿ ಶಾಸಕ ಕೆ.ಎಸ್. ಮಂಜುನಾಥ್ ಗೌಡ ಅವರ ನೇತೃತ್ವದಲ್ಲಿ ನಡೆದ ಬಾಣಬಿರುಸುಗಳ ಪ್ರದರ್ಶನ ಜನರನ್ನು ರಂಜಿಸಿತು.

**ಭಾವೈಕ್ಯತೆ ಮತ್ತು ಅನ್ನಸಂತರ್ಪಣೆ:** ಈ ಜಾತ್ರೆಯಲ್ಲಿ ಭಾವೈಕ್ಯತೆಯೂ ಎದ್ದು ಕಾಣುತ್ತಿತ್ತು. ಕರಗ ಸಾಗುವ ಹಾದಿಯಲ್ಲಿ ಮುಸ್ಲಿಂ ಸಮುದಾಯದವರು ಮಸೀದಿಯ ಬಳಿ ಭಕ್ತರಿಗೆ ತಂಪು ಪಾನೀಯ ವಿತರಿಸುವ ಮೂಲಕ ಸೌಹಾರ್ದತೆ ಮೆರೆದರು. ವಿವಿಧ ಸಂಘ–ಸಂಸ್ಥೆಗಳು ಮತ್ತು ರಾಜಕೀಯ ಮುಖಂಡರ ವತಿಯಿಂದ ಪಟ್ಟಣದಾದ್ಯಂತ ಅನ್ನಸಂತರ್ಪಣೆ ಆಯೋಜಿಸಲಾಗಿತ್ತು. ವಿಶೇಷವಾಗಿ ಮುಳುಬಾಗಿಲು ದೋಸೆ ಮತ್ತು ಇಡ್ಲಿ ವಿತರಣೆಯು ಭಕ್ತರ ಗಮನ ಸೆಳೆಯಿತು.

**ಗಣ್ಯರ ಭೇಟಿ ಮತ್ತು ಭದ್ರತೆ:** ಮಾಜಿ ಶಾಸಕ ಕೆ.ಎಸ್. ಮಂಜುನಾಥ್ ಗೌಡ, ಜೆಡಿಎಸ್ ಮುಖಂಡ ಹೂಡಿ ವಿಜಯಕುಮಾರ್, ತಹಶೀಲ್ದಾರ್ ಎಂ.ವಿ. ರೂಪ ಸೇರಿದಂತೆ ಹಲವು ಗಣ್ಯರು ಕರಗಕ್ಕೆ ಮಲ್ಲಿಗೆ ಹೂವಿನ ಅರ್ಪಣೆ ಮಾಡಿ ವಿಶೇಷ ಪೂಜೆ ಸಲ್ಲಿಸಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕನ್ನಿಕಾ ಸುಕ್ರೀವಾಲ್ ಅವರ ಮಾರ್ಗದರ್ಶನದಲ್ಲಿ ಇನ್ಸ್‌ಪೆಕ್ಟರ್ ರಾಮಪ್ಪ ಗುತ್ತೇರ್ ನೇತೃತ್ವದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಕಲ್ಪಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಧರ್ಮರಾಯಸ್ವಾಮಿ ದೇವಾಲಯ ಸಮಿತಿಯ ಪದಾಧಿಕಾರಿಗಳು, ನಗರಸಭೆ ಸದಸ್ಯರು ಹಾಗೂ ವಿವಿಧ ಪಕ್ಷಗಳ ನೂರಾರು ಮುಖಂಡರು ಭಾಗವಹಿಸಿದ್ದರು.

## ಕರಗದಲ್ಲಿ ರಾಜಕೀಯ ಕಿಚ್ಚು!

ಮಾಲೂರು

ಪಟ್ಟಣದ ಪ್ರಸಿದ್ಧ ಶ್ರೀಧರ್ಮರಾಯಸ್ವಾಮಿ ಕರಗ ಮಹೋತ್ಸವದ ಸಂಭ್ರಮದ ನಡುವೆಯೇ, ಫ್ಲೆಕ್ಸ್ ಬ್ಯಾನರ್ ಹಾಕುವ ವಿಚಾರವಾಗಿ ಕಾಂಗ್ರೆಸ್ ಮತ್ತು ಬಿಜೆಪಿ ಕಾರ್ಯಕರ್ತರ ನಡುವೆ ಮಾತಿನ ಚಕಮುಕಿ ನಡೆದು ರೈಲ್ವೆ ಸೇತುವೆ ಬಳಿ ಕೆಲಕಾಲ ಉದ್ವಿಗ್ನ ವಾತಾವರಣ ನಿರ್ಮಾಣವಾಗಿತ್ತು.

ನಗರದ ರೈಲ್ವೆ ಸೇತುವೆ ಬಳಿಯ ಹೊಸ ಬಸ್ ನಿಲ್ದಾಣದ ಸಮೀಪ ಶಾಸಕ ಕೆ.ವೈ. ನಂಜೇಗೌಡ ಅವರ ಬಾಣಬಿರುಸಿನ ಕಾರ್ಯಕ್ರಮದ ಫ್ಲೆಕ್ಸ್ ಬ್ಯಾನರ್ ಅಳವಡಿಸಲಾಗಿತ್ತು. ಅದರ ಪಕ್ಕದಲ್ಲೇ, ಪಟಾಲಮ್ಮ ದೇವಾಲಯದ ಹಿಂಭಾಗದಲ್ಲಿ ಮಾಜಿ ಶಾಸಕ ಕೆ.ಎಸ್. ಮಂಜುನಾಥ್ ಗೌಡ ಅವರ ಬೆಂಬಲಿಗರು ಬಾಣಬಿರುಸಿನ ಬ್ಯಾನರ್ ಕಟ್ಟಲು ಮುಂದಾದರು. ಈ ವೇಳೆ ಸ್ಥಳದಲ್ಲಿದ್ದ ಎರಡೂ ಪಕ್ಷಗಳ ಕಾರ್ಯಕರ್ತರ ನಡುವೆ ವಾಗ್ವಾದ ಆರಂಭವಾಗಿ, ಪರಿಸ್ಥಿತಿ ಕೈಮೀರುವ ಹಂತ ತಲುಪಿತ್ತು.

**ಪೊಲೀಸರ ಸಮಯೋಚಿತ ಕ್ರಮ:** ವಿಷಯ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ಧಾವಿಸಿದ ಪೊಲೀಸ್ ಇನ್ಸ್‌ಪೆಕ್ಟರ್ ರಾಮಪ್ಪ ಗುತ್ತೇರ್, ಗಲಾಟೆಯಲ್ಲಿ ತೊಡಗಿದ್ದ ಎರಡೂ ಬಣಗಳ ಕಾರ್ಯಕರ್ತರನ್ನು ಚದುರಿಸಿ ಪರಿಸ್ಥಿತಿಯನ್ನು ಹತೋಟಿಗೆ ತಂದರು. ಯಾವುದೇ ಅಹಿತಕರ ಘಟನೆ ನಡೆಯದಂತೆ ಮುನ್ನೆಚ್ಚರಿಕೆ ವಹಿಸಿದರು.

**ಕಾರ್ಯಕರ್ತರಿಗೆ ಶಾಸಕ ನಂಜೇಗೌಡ ಕಿವಿಮಾತು:** ಸ್ಥಳಕ್ಕೆ ಭೇಟಿ ನೀಡಿದ ಶಾಸಕ ಕೆ.ವೈ. ನಂಜೇಗೌಡ ಅವರು ಅಸಮಾಧಾನಗೊಂಡಿದ್ದ ಕಾಂಗ್ರೆಸ್ ಕಾರ್ಯಕರ್ತರನ್ನು ಸಮಾಧಾನಪಡಿಸಿದರು. "ನಮ್ಮ ತಾಲೂಕಿನ ರಾಜಕಾರಣವೇ ಬೇರೆ, ಇಲ್ಲಿ ಹೊಸಕೋಟೆ ಸಂಸ್ಕೃತಿಯ ರಾಜಕಾರಣ ನಡೆಯುವುದಿಲ್ಲ. ಕರಗ ಜಾತ್ರೆಯು ಇತಿಹಾಸ ಪ್ರಸಿದ್ಧವಾಗಿದ್ದು, ಶಾಂತಿಯುತವಾಗಿ ನಡೆಯಬೇಕು. ಅವರು ಎಷ್ಟು ಬ್ಯಾನರ್‌ಗಳನ್ನಾದರೂ ಕಟ್ಟಿಕೊಳ್ಳಲಿ, ನಾವು ಅಡ್ಡಿಪಡಿಸುವುದು ಬೇಡ. ಕಾಂಗ್ರೆಸ್ ಕಾರ್ಯಕರ್ತರು ಶಾಂತಿಪ್ರಿಯರು, ಯಾರೂ ಕಾನೂನು ಕೈಗೆತ್ತಿಕೊಳ್ಳಬೇಡಿ," ಎಂದು ಕರೆ ನೀಡಿದರು.

ಶಾಸಕರ ಮಾತಿಗೆ ಮನ್ನಣೆ ನೀಡಿದ ಕಾರ್ಯಕರ್ತರು ಅಲ್ಲಿಂದ ತೆರಳಿದ ನಂತರ ವಾತಾವರಣ ತಿಳಿಗೊಂಡಿತು. ಹಿರಿಯರ ಮತ್ತು ಪೊಲೀಸರ ಮಧ್ಯಸ್ಥಿಕೆಯಿಂದ ದೊಡ್ಡ ಮಟ್ಟದ ಸಂಘರ್ಷ ತಪ್ಪಿದಂತಾಗಿದೆ.

# ಹಿಪ್ಪುನೇರಳೆ ತೋಟಗಳಲ್ಲಿ 'ಹಣ್ಣೆಲೆ' ಭೀತಿ



ವಿಜಯಪುರ

ಬಿಸಿಲಿನ ತಾಪಮಾನ ದಿನೇ ದಿನೇ ಏರಿಕೆಯಾಗುತ್ತಿರುವ ಕಾರಣ, ಕೊಳವೆಬಾವಿಗಳಲ್ಲಿ ನೀರಿನ ಇಳುವರಿ ಕಡಿಮೆಯಾಗಿ, ಹಿಪ್ಪುನೇರಳೆ ತೋಟಗಳಿಗೆ ಅಗತ್ಯವಿರುವಷ್ಟು ನೀರು ಲಭ್ಯವಾಗದ ಕಾರಣ, ಹಿಪ್ಪುನೇರಳೆ ತೋಟಗಳಲ್ಲಿ ಬೆಳೆದಿರುವ ಸೊಪ್ಪಿನಲ್ಲಿ ಹಣ್ಣೆಲೆ ಬೀಳುತ್ತಿದೆ.

ರೈತರು, ನೀರಿಗಾಗಿ ಕೊಳವೆಬಾವಿಗಳನ್ನೆ ನಂಬಿಕೊಂಡಿದ್ದಾರೆ. ಜಿಲ್ಲೆಯಲ್ಲಿ, 5333 ಹೆಕ್ಟೇರ್ ಪ್ರದೇಶದಲ್ಲಿ ಹಿಪ್ಪುನೇರಳೆ ಬೆಳೆದಿದ್ದಾರೆ. ಆದರೆ, ಕೊಳವೆಬಾವಿಗಳಲ್ಲಿನ ನೀರಿನ ಪ್ರಮಾಣ ದಿನೇ ದಿನೇ ಕಡಿಮೆಯಾಗುತ್ತಿದ್ದು, ಇದರ ಮಧ್ಯೆ, ಕೆಟ್ಟುಹೋಗುತ್ತಿರುವ ಪಂಪು ಮೋಟಾರುಗಳನ್ನು ಮೇಲೆತ್ತಲು ಕಾರ್ಮಿಕರ ಕೊರತೆ ಹಾಗೂ ರಿಪೇರಿ ಮಾಡಿಸಲು ಹೆಚ್ಚು ಸಮಯ ಹಿಡಿಯುತ್ತಿರುವುದರಿಂದ ರೈತರು, ಹಿಪ್ಪುನೇರಳೆ ತೋಟಗಳಿಗೆ ಅಗತ್ಯವಿರುವಷ್ಟು ನೀರು, ಸಮಯಕ್ಕೆ ಸರಿಯಾಗಿ ಪೂರೈಕೆ ಮಾಡಲು ಸಾಧ್ಯವಾಗುತ್ತಿಲ್ಲ.

ಹಿಪ್ಪುನೇರಳೆ ತೋಟಗಳಲ್ಲಿನ ಎಲೆಗಳು ಹಣ್ಣಾಗುತ್ತಿರುವುದರ ಜೊತೆಗೆ ಗಡುಸಾಗುತ್ತಿದ್ದು, ನೀರಿನ ಅಂಶವನ್ನು ಕಳೆದುಕೊಳ್ಳುತ್ತಿವೆ. ರೇಷ್ಮೆಹುಳುಗಳು ತುಂಬಾ ಗಡುಸಾದ ಎಲೆಗಳು ಹಾಗೂ ಹಣ್ಣೆಲೆಗಳನ್ನು ತಿನ್ನುವುದಕ್ಕೆ ಯೋಗ್ಯವಾಗಿರುವುದಿಲ್ಲ. ಆದ್ದರಿಂದ ರೈತರು ಕಂಗಾಲಾಗುತ್ತಿದ್ದಾರೆ.

> ಈ ಬೇಸಿಗೆ ಮುಗಿಯುವ ತನಕ ರೇಷ್ಮೆಹುಳು ಸಾಕಾಣಿಕೆ ಮಾಡುವುದು ಬೇಡ ಎನಿಸಿದೆ. ತೋಟದಲ್ಲಿ ಸೊಪ್ಪು ಬೆಳೆದಿದ್ದರೂ, ಹಣ್ಣೆಲೆ ಬೀಳುತ್ತಿರುವುದರಿಂದ ಕಡ್ಡಿಯನ್ನು ಬಿಟ್ಟು ಸೊಪ್ಪು ಕಟಾವು ಮಾಡಬೇಕು. ಸೊಪ್ಪು ಸಾಕಾಗುವುದಿಲ್ಲ. ಬೆಳೆಯು ಗುಣಮಟ್ಟದಲ್ಲಿ ಆಗಲ್ಲ. ಇದರ ಸಹವಾಸಕ್ಕೆ ಹೋಗುವುದೇ ಬೇಡ ಎನಿಸಿದೆ.
>
> - ಮುನಿಶಾಮೇಗೌಡ ರೇಷ್ಮೆ ಬೆಳೆಗಾರ ಯಲಿಯೂರು.

ರೈತರು, ಕೃಷಿ ಹೊಂಡಗಳಿಗೆ ಹಾಯಿಸಿರುವ ನೀರನ್ನು, ಸಂಜೆಯ ವೇಳೆ ತೋಟಕ್ಕೆ ಹನಿನೀರಾವರಿ ಪದ್ಧತಿಯಲ್ಲಿ ಹಾಯಿಸಿದರೆ, ಬಿಸಿಲಿನ ತಾಪಕ್ಕೆ ಮಾರನೇ ದಿನ ಬೆಳಿಗ್ಗೆ 11 ಗಂಟೆಯೊಳಗೆ ತೋಟ ಒಣಗಿ ಹೋಗುತ್ತಿದೆ. ಎರಡೇ ದಿನಕ್ಕೆ ಹಿಪ್ಪುನೇರಳೆ ಸೊಪ್ಪು ಸಪ್ಪಾಗಾಗುತ್ತಿದೆ. ದಿನ ಬಿಟ್ಟು, ದಿನ ನೀರು ಹರಿಸಬೇಕು, ಆದರೆ, ಅಷ್ಟೊಂದು ನೀರು ಲಭ್ಯವಾಗುತ್ತಿಲ್ಲ. ಈಗ ಲಭ್ಯವಿರುವ ನೀರಿನಲ್ಲಿ ನಾಲ್ಕು ದಿನಗಳಿಗೊಮ್ಮೆಯಷ್ಟೆ ನೀರು ಹರಿಸಲು ಸಾಧ್ಯವಾಗುತ್ತಿದೆ. ಇಷ್ಟು ಕಡಿಮೆ ಪ್ರಮಾಣದ ನೀರಿನಲ್ಲಿ ತೋಟಗಳು ಸುಧಾರಣೆ ಮಾಡಿಕೊಳ್ಳುವುದು ಹೇಗೆ ಎನ್ನುವ ಚಿಂತೆ ರೈತರನ್ನು ಕಾಡುತ್ತಿದೆ.

ಕೊಮ್ಮಸಂದ್ರದ ರೈತ ರಾಮಾಂಜಿನಪ್ಪ ಮಾತನಾಡಿ, ನಮಗೆ 2 ಕೊಳವೆಬಾವಿಗಳಿವೆ. ಎರಡರಲ್ಲೂ ನೀರು ಬರುತ್ತಿವೆ. ಹೊಸದಾಗಿ ಕೊರೆಯಿಸಿದಾಗ ಎರಡೂ ಕೊಳೆವೆ ಬಾವಿಗಳಿಂದ 5 ಸಾವಿರ ಗ್ಯಾಲನ್ ನೀರು ಬರುತ್ತಿತ್ತು. ಈಗ ಎರಡರಿಂದಲೂ 1500 ಗ್ಯಾಲನ್ ನೀರು ಬರುತ್ತಿದೆ. 2 ವರ್ಷದ ಹಿಂದೆ 3 ಎಕರೆ ಪ್ರದೇಶಕ್ಕೆ ಹಿಪ್ಪುನೇರಳೆ ನಾಟಿ ಮಾಡಿದ್ದೆವು, ಈಗ 1 ಎಕರೆ ಇಟ್ಟುಕೊಂಡಿದ್ದೇವೆ. ಇಷ್ಟೊಂದು ಬಿಸಿಲಿನಲ್ಲಿ ರಾತ್ರಿ ವೇಳೆ ನೀರು ಬಿಟ್ಟರೂ ಪ್ರಯೋಜನವಾಗುತ್ತಿಲ್ಲ. ರೇಷ್ಮೆ ಹುಳುಗಳಿಗೆ ಉತ್ಕೃಷ್ಟವಾದ ಸೊಪ್ಪು ಒದಗಿಸಲು ಪರದಾಟವಾಗಿದೆ. ಆದ್ದರಿಂದ ಸಂಜೆಗೆ ತೋಟಕ್ಕೆ ನೀರು ಹಾಯಿಸಿ, ರಾತ್ರಿಯಲ್ಲೆ ಸೊಪ್ಪು ಕಟಾವು ಮಾಡಿಕೊಂಡು ಬಂದು ಹುಳುಸಾಕಾಣಿಕೆ ಮನೆಗಳಲ್ಲಿ ಗೋಣಿಚೀಲಗಳನ್ನು ಹೊದಿಸಿ, ನೀರು ಹಾಕುತ್ತಿದ್ದೇವೆ ಎಂದರು.

# ಇಂದು ನೂತನ ಪದಾಧಿಕಾರಿಗಳ ಪದಗ್ರಹಣ



ಕನಕಪುರ

ಜೆಡಿಎಸ್ ಪಕ್ಷವನ್ನು ತಳಮಟ್ಟದಿಂದ ಸಂಘಟಿಸುವ ಮತ್ತು ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಪಕ್ಷವನ್ನು ಸಜ್ಜುಗೊಳಿಸುವ ನಿಟ್ಟಿನಲ್ಲಿ ಇಂದು ನಗರದಲ್ಲಿ ಬೃಹತ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮದಲ್ಲಿ ಭಾಗವಹಿಸಲು ರಾಜ್ಯ ಜೆಡಿಎಸ್ ಯುವ ಅಧ್ಯಕ್ಷ ಹೆಚ್.ಕೆ. ನಿಖಿಲ್ ಕುಮಾರಸ್ವಾಮಿ ಅವರು ಕನಕಪುರಕ್ಕೆ ಆಗಮಿಸಲಿದ್ದಾರೆ ಎಂದು ತಾಲೂಕು ಜೆಡಿಎಸ್ ಅಧ್ಯಕ್ಷ ಬಿ. ನಾಗರಾಜು ತಿಳಿಸಿದರು.

ನಗರದ ಕೋಟೆ ಗಣಪತಿ ದೇವಸ್ಥಾನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾರ್ಯಕ್ರಮದ ರೂಪುರೇಷೆಗಳ ಬಗ್ಗೆ ಮಾಹಿತಿ ನೀಡಿದರು.

ನಗರದ ಎಸ್.ಆರ್. ಕಲ್ಯಾಣ ಮಂಟಪದಲ್ಲಿ ನಾಳೆ ಪದಾಧಿಕಾರಿಗಳ ಪದಗ್ರಹಣ ಸಮಾರಂಭ ನಡೆಯಲಿದೆ. ತಾಲೂಕಿನ ಜೆಡಿಎಸ್ ವಿವಿಧ ಘಟಕಗಳಿಗೆ ಹೊಸದಾಗಿ ಆಯ್ಕೆಯಾಗಿರುವ ಪದಾಧಿಕಾರಿಗಳು ಅಧಿಕಾರ ಸ್ವೀಕರಿಸಲಿದ್ದಾರೆ. ಇದೇ ಸಂದರ್ಭದಲ್ಲಿ ಚುನಾವಣೆ ದೃಷ್ಟಿಯಿಂದ ಅತ್ಯಂತ ಪ್ರಮುಖವಾದ ಬಿಎಲ್‌ಎ 2 ಕಾರ್ಯಾಗಾರವನ್ನೂ ಆಯೋಜಿಸಲಾಗಿದೆ.

ರಾಜ್ಯ ಜೆಡಿಎಸ್ ಯುವ ಉಪಾಧ್ಯಕ್ಷ ಚಿನ್ನಸ್ವಾಮಿ ಮಾತನಾಡಿ, "ಪಕ್ಷದ ವರಿಷ್ಠರ ಸೂಚನೆಯಂತೆ ಸಂಘಟನೆಯನ್ನು ಬಲಪಡಿಸಲು ವಿವಿಧ ಹುದ್ದೆಗಳಿಗೆ ಸಮರ್ಥರನ್ನು ನೇಮಿಸಲಾಗಿದೆ. ಪದಗ್ರಹಣದ ಜೊತೆಗೆ ಸಂವಿಧಾನ ಶಿಲ್ಪಿ ಡಾ. ಬಾಬಾಸಾಹೇಬ ಅಂಬೇಡ್ಕರ್ ಅವರ ಜನ್ಮದಿನಾಚರಣೆಯನ್ನೂ ಅರ್ಥಪೂರ್ಣವಾಗಿ ಆಚರಿಸಲಾಗುವುದು," ಎಂದರು.

ಈ ಸಮಾರಂಭದಲ್ಲಿ ನಿಖಿಲ್ ಕುಮಾರಸ್ವಾಮಿ ಅವರೊಂದಿಗೆ ಮಾಜಿ ಶಾಸಕ ಎ. ಮಂಜುನಾಥ್, ಜಿಲ್ಲಾ ಜೆಡಿಎಸ್ ಅಧ್ಯಕ್ಷ ಜಯಮುತ್ತು ಸೇರಿದಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಪ್ರಮುಖ ಮುಖಂಡರು ಭಾಗವಹಿಸಲಿದ್ದಾರೆ. ತಾಲೂಕಿನಾದ್ಯಂತ ಸಹಸ್ರಾರು ಕಾರ್ಯಕರ್ತರು ಈ ಐತಿಹಾಸಿಕ ಕ್ಷಣಕ್ಕೆ ಸಾಕ್ಷಿಯಾಗಲಿದ್ದಾರೆ. ಗೋಷ್ಠಿಯಲ್ಲಿ ದಿಶಾ ಸಮಿತಿ ಸದಸ್ಯರಾದ ರಾಜೇಶ್, ಶೋಭಾ, ಮಹಿಳಾ ಅಧ್ಯಕ್ಷೆ ಪವಿತ್ರ, ನಲ್ಲಹಳ್ಳಿ ಶಿವಕುಮಾರ್, ಜಯರಾಮೇಗೌಡ, ಸ್ಟುಡಿಯೋ ಚಂದ್ರು ಹಾಗೂ ಯುವ ಮುಖಂಡರಾದ ತಿಮ್ಮೇಗೌಡ, ಅರಳಾಳು ರಾಜೇಂದ್ರ, ಶಿವನಪ್ಪ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# 'ರಾಜ್ಯ ಒಕ್ಕಲಿಗರ ಸಂಘವು ಸಮುದಾಯಕ್ಕೆ ಶಕ್ತಿ ತುಂಬಲಿ'

ತುಮಕೂರು

ಶಿಕ್ಷಣ, ಆರೋಗ್ಯ ಸೇವೆಗೆ ಹೆಚ್ಚು ಒತ್ತು ನೀಡುತ್ತಿರುವ ರಾಜ್ಯ ಒಕ್ಕಲಿಗರ ಸಂಘವು ಮತ್ತಷ್ಟು ಉತ್ತಮ ಕಾರ್ಯಕ್ರಮಗಳನ್ನು ರೂಪಿಸಿ ಸಮುದಾಯಕ್ಕೆ ಶಕ್ತಿ ತುಂಬ ಬೇಕು. ತುಮಕೂರಿನಲ್ಲಿ ಸಂಘದಿಂದ ಆಸ್ಪತ್ರೆ ಸ್ಥಾಪನೆ ಮಾಡಬೇಕು ಎಂದು ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ನಿಶ್ಚಲಾನಂದನಾಥ ಸ್ವಾಮೀಜಿ ಸಲಹೆ ಮಾಡಿದರು.

ನಗರದ ಮೆಳೆಕೋಟೆಯ ರಾಜ್ಯ ಒಕ್ಕಲಿಗರ ಸಂಘದ ವಿದ್ಯಾರ್ಥಿನಿಯರ ಉಚಿತ ವಸತಿ ನಿಲಯದ 2 ಮತ್ತು 3ನೇ ಅಂತಸ್ತಿನ ಕಟ್ಟಡ ನಿರ್ಮಾಣಕ್ಕೆ ಸೋಮವಾರ ಶಂಕುಸ್ಥಾಪನೆ ನೆರವೇರಿಸಿ ನಂತರ ನಡೆದ ಸಮಾರಂಭದಲ್ಲಿ ಮಾತನಾಡಿದ ಸ್ವಾಮೀಜಿ, ಈ ಹಾಸ್ಟೆಲ್ ಪಕ್ಕದಲ್ಲಿ ಸಂಘದ ನಿವೇಶನವಿದೆ, ಸಾರ್ವಜನಿಕರ ಉಪಯೋಗಕ್ಕಾಗಿ ಆಸ್ಪತ್ರೆ ಸ್ಥಾಪನೆ ಮಾಡಬೇಕು. ಈ ಕಾರ್ಯ ಶೀಘ್ರವಾಗಿ ಆರಂಭಗೊಳ್ಳಲು ಒಕ್ಕಲಿಗರ ಸಂಘದ ಪದಾಧಿಕಾರಿಗಳು ನಿರ್ಧಾರ ಮಾಡಬೇಕು ಎಂದರು.

ಸಮುದಾಯದ ಭವಿಷ್ಯಕ್ಕಾಗಿ ಒಕ್ಕಲಿಗರ ಸಂಘ ಆಸ್ತಿ ನಿರ್ಮಾಣ ಮಾಡಬೇಕು. ಸಂಘದಲ್ಲಿ ಸಾಕಷ್ಟು ಹಣವಿದೆ. ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಒಂದೊಂದು ವೈದ್ಯಕೀಯ ಕಾಲೇಜು ಸ್ಥಾಪನೆ ಮಾಡಬೇಕು ಎಂದು ತಿಳಿಸಿದ ನಿಶ್ಚಲಾನಂದನಾಥ ಸ್ವಾಮೀಜಿ, ದಾಬಸ್‌ಪೇಟೆ ಬಳಿ 100 ಎಕರೆ ಜಮೀನು ಖರೀದಿಸಿ ಅಲ್ಲಿ ವಿದ್ಯಾಸಂಸ್ಥೆಗಳನ್ನು ಆರಂಭಮಾಡಿ ಒಕ್ಕಲಿಗರ ಸಂಘದ ವಿಶ್ವವಿದ್ಯಾಲಯ ಸ್ಥಾಪಿಸುವ ಸಂಘದ ಉದ್ದೇಶ ಉತ್ತಮವಾಗಿದೆ. ಒಳ್ಳೆಯ ಕೆಲಸಗಳಿಗೆ ತಡ ಮಾಡಬಾರದು, ಅತಿ ಶೀಘ್ರವಾಗಿ ಅನುಷ್ಠಾನಗೊಳಿಸುವ ಪ್ರಯತ್ನ ಮಾಡಬೇಕು ಎಂದು ಹೇಳಿದರು.

ರಾಜ್ಯ ಒಕ್ಕಲಿಗರ ಸಂಘ ಒಂದು ಸರ್ಕಾರದ ರೂಪದಲ್ಲಿದೆ. ಆಸ್ಪತ್ರೆ, ವೈದ್ಯಕೀಯ ಕಾಲೇಜು ಸ್ಥಾಪನೆ ಮಾಡಿ ಹೆಚ್ಚಿನ ಮಕ್ಕಳು ವೈದ್ಯರಾಗಲು ಹಾಗೂ ಅವರು ಸಂಘದ ಆಸ್ಪತ್ರೆಗಳಲ್ಲಿ ಸೇವೆ ಸಲ್ಲಿಸಲು ಅವಕಾಶವಾಗುತ್ತದೆ. ಈ ರೀತಿಯ ಸಮುದಾಯ ಕಟ್ಟುವ ಕೆಲಸಗಳಾದರೆ ಒಕ್ಕಲಿಗ ಸಮುದಾಯಕ್ಕೆ ಸರ್ಕಾರವನ್ನು ರಚಿಸಬಹುದಾದ ಶಕ್ತಿ ಬರುತ್ತದೆ ಎಂದರು.

ಕುಣಿಗಲ್ ಅರೇಶಂಕರ ಮಠದ ಸಿದ್ಧರಾಮ ಚೈತನ್ಯ ಸ್ವಾಮೀಜಿ ಮಾತನಾಡಿ, ಸಾಂಘಿಕ ಶಕ್ತಿ ನಿಜವಾದ ಸಮುದಾಯದ ಶಕ್ತಿ. ರಾಜಕೀಯ, ಆರ್ಥಿಕ ಶಕ್ತಿ ಹೆಚ್ಚಿಸಿಕೊಳ್ಳಲು ರಾಜ್ಯ ಒಕ್ಕಲಿಗರ ಸಂಘ ಆಗಿಂದಾಗ್ಯೆ ಸಮುದಾಯದ ಸಮಾವೇಶಗಳನ್ನು ಮಾಡಿ ಜಾಗೃತಿ ಮೂಡಿಸಬೇಕು. ಸಮುದಾಯದ ಮಕ್ಕಳು ಉನ್ನತ ಶಿಕ್ಷಣ ಪಡೆಯಬೇಕು. ಅದಕ್ಕಾಗಿ ಒಕ್ಕಲಿಗರ ಸಂಘವು ವೈದ್ಯಕೀಯ ಕಾಲೇಜು ಸೇರಿದಂತೆ ಉನ್ನತ ಶಿಕ್ಷಣ ಸಂಸ್ಥೆಗಳನ್ನು ಸ್ಥಾಪನೆ ಮಾಡಬೇಕು ಎಂದು ತಿಳಿಸಿದರು.



ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ರಾಜ್ಯ ಒಕ್ಕಲಿಗರ ಸಂಘದ ಅಧ್ಯಕ್ಷ ಎಲ್. ಶ್ರೀನಿವಾಸ್ ಮಾತನಾಡಿ, ರಾಜ್ಯ ಒಕ್ಕಲಿಗರ ಸಂಘ ಸಮುದ್ರವಿದ್ದಂತೆ, ಆರ್ಥಿಕವಾಗಿಯೂ ಸದೃಢವಾಗಿದೆ. ಸಂಘದಿಂದ ಸಮುದಾಯಕ್ಕೆ ಆಗಬೇಕಾಗಿರುವ ಕೆಲಸಗಳನ್ನು ಬದ್ಧತೆಯಿಂದ ಮಾಡಬೇಕು. ಮಕ್ಕಳ ವಿದ್ಯಾಭ್ಯಾಸಕ್ಕೆ ನೆರವಾಗುವ ಸಲುವಾಗಿ ಅಗತ್ಯವಿರುವ ಕಡೆ ವಿದ್ಯಾರ್ಥಿನಿಲಯಗಳನ್ನು ಸ್ಥಾಪನೆ ಮಾಡಲಾಗುತ್ತಿದೆ. ಇಲ್ಲಿ ಆಸ್ಪತ್ರೆ ಸ್ಥಾಪನೆಗೂ ಸಂಘದ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸುವುದಾಗಿ ಭರವಸೆ ನೀಡಿದರು.

ಸಂಘದ ಗೌರವಾಧ್ಯಕ್ಷ ಬಿ. ಕೆಂಚಪ್ಪಗೌಡ ಮಾತನಾಡಿ, ಸಮುದಾಯದ ಕೆಲಸಕಾರ್ಯಗಳಿಗಾಗಿ ಆಸ್ತಿ ನಿರ್ಮಾಣ ಮಾಡಲು ಸಂಘ ತೀರ್ಮಾನ ಮಾಡಿದೆ. ಎಲ್ಲಾ ಜಿಲ್ಲೆಗಳಲ್ಲೂ ಆದ್ಯತೆ ಮೇಲೆ ವಿದ್ಯಾರ್ಥಿನಿಲಯ ಸ್ಥಾಪನೆ ಮಾಡಲಾಗುವುದು. ಸಮುದಾಯದವರು ಸಂಘದ ಸೇವಾಕಾರ್ಯಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಮನವಿ ಮಾಡಿದರು.

ಸಂಘದ ನಿರ್ದೇಶಕರು, ಭೂ ಖರೀದಿ ಸಮಿತಿ ಅಧ್ಯಕ್ಷರೂ ಆದ ಆರ್. ಹನುಮಂತರಾಯಪ್ಪ ಮಾತನಾಡಿ, ಈ ವಿದ್ಯಾರ್ಥಿ ನಿಲಯಕ್ಕೆ ಬೇಡಿಕೆ ಹೆಚ್ಚಾಗಿದೆ. ಹೆಣ್ಣುಮಕ್ಕಳಿಗೆ ಸ್ಥಳಾವಕಾಶವಿಲ್ಲದೆ ಸಮಸ್ಯೆಯಾಗಿದೆ. ಸುಮಾರು ಆರು ಕೋಟಿ ರೂ. ವೆಚ್ಚದಲ್ಲಿ ಹೆಚ್ಚುವರಿ ಎರಡು ಅಂತಸ್ತಿನ ಕಟ್ಟಡ ನಿರ್ಮಿಸಿ ಸುಮಾರು 200 ವಿದ್ಯಾರ್ಥಿನಿಯರಿಗೆ ಸ್ಥಳಾವಕಾಶ ಮಾಡಿಕೊಡಲಾಗುವುದು. ಆರು ತಿಂಗಳಲ್ಲಿ ಕಟ್ಟಡ ಕಾಮಗಾರಿ ಪೂರ್ಣಗೊಳಿಸಲಾಗುವುದು ಎಂದು ಹೇಳಿದರು.

ಸಂಘದ ನಿರ್ದೇಶಕರೂ, ಕೆಂಪೇಗೌಡ ವೈದ್ಯಕೀಯ ಮಹಾವಿದ್ಯಾಲಯ ಅಧ್ಯಕ್ಷರಾದ ಲೋಕೇಶ್ ನಾಗರಾಜಯ್ಯ ಮಾತನಾಡಿ, ಈ ವಿದ್ಯಾರ್ಥಿನಿಲಯ ವಿಸ್ತರಣೆ ಪ್ರಯತ್ನಕ್ಕೆ ಫಲ ದೊರಕಿದೆ. ಶೀಘ್ರದಲ್ಲೇ ಇಲ್ಲಿ ಆಸ್ಪತ್ರೆ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಲಾಗುವುದು ಎಂದರು.

ಸಂಘದ ಪ್ರಧಾನ ಕಾರ್ಯದರ್ಶಿ ಸಿ.ಜಿ. ಗಂಗಾಧರ್, ಹಾಸ್ಟೆಲ್ ಸಮಿತಿ ಅಧ್ಯಕ್ಷ ವೆಂಕಟರಾಮೇಗೌಡ, ನಗರಪಾಲಿಕೆ ಮಾಜಿ ಉಪಮೇಯರ್ ಟಿ.ಆರ್.ನಾಗರಾಜು, ಮಾಜಿ ಸದಸ್ಯರಾದ ಧರಣೇಂದ್ರಕುಮಾರ್, ಶ್ರೀನಿವಾಸ್, ಮನೋಹರಗೌಡ, ಟೂಡಾ ಮಾಜಿ ಅಧ್ಯಕ್ಷ ದೇವೇಗೌಡ, ವಿವಿಧ ಸಂಘಸಂಸ್ಥೆಗಳ ಮುಖಂಡರಾದ ಲಕ್ಕೇಗೌಡ, ಭೈರವ ಗಿರೀಶ್, ಮಂಜುನಾಥ್, ನಟೇಶ್, ಜಯಮ್ಮ, ನಾಗಮಣಿ ಕಾಮೇಶ್, ಪುಟ್ಟಸ್ವಾಮಿ, ರಂಗಪ್ಪ, ನರಸಿಂಹಮೂರ್ತಿ, ಉಪ್ಪಾರಹಳ್ಳಿ ಕುಮಾರ್, ಪ್ರೊ.ವೀರಯ್ಯ, ಮುನಿಸ್ವಾಮಿಗೌಡ, ಲೀಲಾವತಿ, ಮಂಜುಳಾ ಮೊದಲಾದವರು ಭಾಗವಹಿಸಿದ್ದರು.

# ರಾಜ್ಯಕ್ಕೇ 4 ರ್‍ಯಾಂಕ್ ಪಡೆದ ಶಾರ್ವರಿ

ಬೆಂಗಳೂರು

ಇತ್ತೀಚೆಗೆ ಪ್ರಕಟಗೊಂಡ ದ್ವಿತೀಯ ಪಿಯು ಪರೀಕ್ಷೆಯಲ್ಲಿ ಶಾರ್ವರಿ ಎನ್. ಪ್ರಸಾದ್ ಅವರು ಪ್ರಮುಖ ಮೂರು ವಿಷಯಗಳಲ್ಲಿ 100ಕ್ಕೆ 100 ಅಂಕಗಳನ್ನು ಪಡೆಯುವ ಮೂಲಕ ಅದ್ಭುತ ಸಾಧನೆ ಮಾಡಿದ್ದು, ರಾಜ್ಯಕ್ಕೇ 4ನೇ ರ್‍ಯಾಂಕ್ ಪಡೆದಿದ್ದಾರೆ.



ನಗರದ ಕಾಲೇಜಿನಲ್ಲಿ ವ್ಯಾಸಂಗ ಮಾಡಿರುವ ಶಾರ್ವರಿ ಗಣಿತ, ಸಂಸ್ಕೃತ ಮತ್ತು ಕಂಪ್ಯೂಟರ್ ಸೈನ್ಸ್ ವಿಷಯಗಳಲ್ಲಿ 100ಕ್ಕೆ 100 ಅಂಕಗಳನ್ನು ಪಡೆದಿದ್ದಾರೆ ಇನ್ನುಳಿದಂತೆ ಇಂಗ್ಲಿಷ್‌ನಲ್ಲಿ 98, ಭೌತಶಾಸ್ತ್ರದಲ್ಲಿ 99, ರಸಾಯನ ಶಾಸ್ತ್ರದಲ್ಲಿ 99 ಅಂಕಗಳನ್ನು ಪಡೆದಿದ್ದು, ಒಟ್ಟಾರೆ 600 ಅಂಕಗಳಿಗೆ 596 ಅಂಕಗಳನ್ನು ಪಡೆದು 4ನೇ ರ್‍ಯಾಂಕ್ ಪಡೆದಿದ್ದಾರೆ. ಶಾರ್ವರಿ ಎನ್. ಪ್ರಸಾದ್ ಅವರ ಈ ಸಾಧನೆಗೆ ಅವರ ತಂದೆ ನಂಜುಂಡ ಪ್ರಸಾದ್ ಮತ್ತು ಶಿಕ್ಷಕರು ಹರ್ಷ ವ್ಯಕ್ತಪಡಿಸಿದ್ದಾರೆ.

# ರಾಮನಗರ: ಸರ್ಕಾರಿ ಶಾಲಾ ಕಟ್ಟಡಗಳ ದಾಖಲೆ ಹಸ್ತಾಂತರ



ರಾಮನಗರ

ಟೊಯೋಟಾ ಕಿರ್ಲೋಸ್ಕರ್ ಮೋಟಾರ್ ಪ್ರೈವೇಟ್ ಲಿಮಿಟೆಡ್‌ನ ಕಾರ್ಪೋರೇಟ್ ಸಾಮಾಜಿಕ ಜವಾಬ್ದಾರಿ (ಸಿಎಸ್‌ಆರ್) ನಿಧಿಯಡಿ ಬೆಂಗಳೂರು ದಕ್ಷಿಣ ಜಿಲ್ಲೆಯಲ್ಲಿ ನಾಲ್ಕು ಸುಸಜ್ಜಿತ ಶಾಲಾ ಕಟ್ಟಡಗಳನ್ನು ನಿರ್ಮಿಸಿದ್ದು, ಅವುಗಳ ದಾಖಲಾತಿಗಳನ್ನು ಏ.13ರ ಸೋಮವಾರ ನಗರದ ಜಿಲ್ಲಾಧಿಕಾರಿಯವರ ಕಚೇರಿಯಲ್ಲಿ ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್ ಅವರಿಗೆ ಹಸ್ತಾಂತರಿಸಲಾಯಿತು.

ಕನಕಪುರ ತಾಲೂಕಿನ ಹೆಗ್ಗನೂರಿನಲ್ಲಿ 30,913 ಚದರಡಿಯಲ್ಲಿ ನಿರ್ಮಿಸಲಾಗಿರುವ ಸರ್ಕಾರಿ ಮಾದರಿ ಶಾಲೆ, ಮಾಗಡಿ ತಾಲೂಕಿನ ಕುದೂರಿನಲ್ಲಿ 26,964 ಚದರಡಿಯಲ್ಲಿ ನಿರ್ಮಿಸಲಾಗಿರುವ ಕರ್ನಾಟಕ ಪಬ್ಲಿಕ್ ಶಾಲೆ, ರಾಮನಗರ ತಾಲೂಕಿನ ಅವ್ವೇರಹಳ್ಳಿಯಲ್ಲಿ 27,394 ಚದರಡಿಯಲ್ಲಿ ನಿರ್ಮಿಸಲಾಗಿರುವ ಕರ್ನಾಟಕ ಪಬ್ಲಿಕ್ ಶಾಲೆ ಹಾಗೂ ರಾಮನಗರ ತಾಲೂಕಿನ ಪಾದರಹಳ್ಳಿಯಲ್ಲಿ 32,064 ಚದರಡಿಯಲ್ಲಿ ನಿರ್ಮಿಸಲಾಗಿರುವ ಸರ್ಕಾರಿ ಮಾದರಿ ಶಾಲೆಗಳ ನಿರ್ಮಾಣ ಕಾರ್ಯ ಪೂರ್ಣಗೊಂಡಿದ್ದು, ಆ ಕಟ್ಟಡಗಳ ದಾಖಲಾತಿಗಳನ್ನು ಟೊಯೋಟಾ ಕಿರ್ಲೋಸ್ಕರ್ ಮೋಟಾರ್ ಪ್ರೈವೇಟ್ ಲಿಮಿಟೆಡ್ ಅಧಿಕಾರಿಗಳು ಜಿಲ್ಲಾಧಿಕಾರಿಯವರಿಗೆ ಹಸ್ತಾಂತರಿಸಿದರು.

ಮುಂಬರುವ ದಿನಗಳಲ್ಲಿ ರಾಜ್ಯದ ಉಪಮುಖ್ಯಮಂತ್ರಿಗಳು ಈ ಕಟ್ಟಡಗಳನ್ನು ಲೋಕಾರ್ಪಣೆಗೊಳಿಸಲಿದ್ದಾರೆ. ಕಟ್ಟಡಗಳ ನಿರ್ಮಾಣದೊಂದಿಗೆ ಈ ನಾಲ್ಕು ಶಾಲೆಗಳಿಗೂ ಅಗತ್ಯ ಪೀಠೋಪಕರಣಗಳು, ಅಡುಗೆ ಮನೆ ಉಪಕರಣಗಳು, ಪಾತ್ರೆಗಳು, ಸಂವಾದಾತ್ಮಕ ಸ್ಮಾರ್ಟ್ ಬೋರ್ಡ್ಗಳು, ಕ್ರೀಡಾ ಸಾಮಗ್ರಿಗಳನ್ನು ವಿದ್ಯಾರ್ಥಿಗಳು ಹಾಗೂ ಅಲ್ಲಿನ ಶಿಕ್ಷಕರ ಅನುಕೂಲಕ್ಕಾಗಿ ಒದಗಿಸಿಕೊಡಲಾಗಿದೆ. ಈ ನಾಲ್ಕು ಶಾಲೆಗಳು ಸೌಲಭ್ಯ ಹಾಗೂ ಗುಣಮಟ್ಟದಲ್ಲಿ ಯಾವುದೇ ಖಾಸಗಿ ಶಾಲೆಗಳಿಗೂ ಕಡಿಮೆ ಇಲ್ಲ ಜಿಲ್ಲೆಯ ಪೋಷಕರು ತಮ್ಮ ಮಕ್ಕಳನ್ನು ಇಲ್ಲಿ ದಾಖಲಿಸಿ ಉತ್ತಮ ಶಿಕ್ಷಣ ಪಡೆಯುವಂತೆ ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್ ಅವರು ಕರೆ ನೀಡಿದ್ದಾರೆ. ಈ ಸಂದರ್ಭದಲ್ಲಿ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆಯ ಉಪನಿರ್ದೇಶಕರಾದ ಎಸ್. ಸ್ವಾಮಿ, ಟೊಯೋಟೊ ಕಿರ್ಲೋಸ್ಕರ್ ಮೋಟಾರ್ ಪ್ರೈವೇಟ್ ಲಿಮಿಟೆಡ್‌ನ ಸಿಎಸ್‌ಆರ್ ವಿಭಾಗದ ಜನರಲ್ ಮ್ಯಾನೇಜರ್ ರೋಷನ್, ಟೊಯೋಟೊ ಕಿರ್ಲೋಸ್ಕರ್ ಮೋಟಾರ್ ಪ್ರೈವೇಟ್ ಲಿಮಿಟೆಡ್‌ನ ಸಿಎಸ್‌ಆರ್ ವಿಭಾಗದ ಮ್ಯಾನೇಜರ್ ಪ್ರಶಾಂತ್, ಸಿಎಸ್‌ಆರ್ ನಿಧಿಯ ಇಂಜಿನಿಯರ್ ವರುಣದೇವ್ ಹಾಗೂ ಸಿಎಸ್‌ಆರ್ ನಿಧಿಯ ಸಂಯೋಜಕ ರಾಮಚಂದ್ರ ಹೆಗಡೆ ಉಪಸ್ಥಿತರಿದ್ದರು.

# ಶಾಸಕ ಎಸ್.ಎನ್. ಸುಬ್ಬಾರೆಡ್ಡಿ ವಿರುದ್ಧ ಟೀಕೆ: ಕಾಂಗ್ರೆಸ್ ಮುಖಂಡರಿಂದ ಹರಿನಾಥರೆಡ್ಡಿಗೆ ತಿರುಗೇಟು

ಬಾಗೇಪಲ್ಲಿ

ಧರ್ಮ ಮತ್ತು ಜಾತಿಗಳನ್ನು ಮೀರಿ ಸಮಾಜ ಸೇವೆ ಮಾಡುತ್ತಿರುವ ಶಾಸಕ ಎಸ್.ಎನ್. ಸುಬ್ಬಾರೆಡ್ಡಿ ಅವರ ವಿರುದ್ಧ ಕೀಳುಮಟ್ಟದ ಹೇಳಿಕೆ ನೀಡಿರುವ ಎನ್‌ಡಿಎ ಮುಖಂಡ ಹರಿನಾಥರೆಡ್ಡಿ ಅವರ ವರ್ತನೆ ಖಂಡನೀಯ ಎಂದು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹೆಚ್.ಎಸ್. ನರೇಂದ್ರ ಕಿಡಿಕಾರಿದ್ದಾರೆ.

ಪತ್ರಕರ್ತರ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹರಿನಾಥರೆಡ್ಡಿ ಅವರ ಅಸಮರ್ಥತೆಯನ್ನು ತರಾಟೆಗೆ ತೆಗೆದುಕೊಂಡರು.

**ಸ್ವಗ್ರಾಮದಲ್ಲೇ ಬಹುಮತವಿಲ್ಲದ ನಾಯಕ; ನರೇಂದ್ರ ಟೀಕೆ**

"ಹರಿನಾಥರೆಡ್ಡಿ ಅವರ ಸ್ವಗ್ರಾಮದ ಬೂತ್‌ಗಳಲ್ಲಿ ಕಳೆದ ಮೂರು ಚುನಾವಣೆಗಳಿಂದಲೂ ಶಾಸಕ ಸುಬ್ಬಾರೆಡ್ಡಿ ಅವರಿಗೆ ಭಾರಿ ಬಹುಮತ ಲಭಿಸಿದೆ. ಎನ್‌ಡಿಎ ಮುಖಂಡರಾಗಿದ್ದರೂ ತಮ್ಮದೇ ಗ್ರಾಮದಲ್ಲಿ ಬಹುಮತ ಗಳಿಸಲು ಸಾಧ್ಯವಾಗದಿರುವುದು ನಿಮ್ಮ ಅಸಮರ್ಥತೆಯನ್ನು ತೋರಿಸುತ್ತದೆ. ಈ ಹಿಂದೆ ಜಿ.ಪಂ. ಸದಸ್ಯರಾಗಿದ್ದಾಗ, ರಾಜ್ಯದಲ್ಲಿ ಜೆಡಿಎಸ್ ಸರ್ಕಾರವಿದ್ದರೂ ತಮ್ಮ ಗ್ರಾಮಕ್ಕೆ ರಸ್ತೆ ಹಾಕಿಸಲು ಇವರಿಗೆ ಸಾಧ್ಯವಾಗಲಿಲ್ಲವೇ?" ಎಂದು ಪ್ರಶ್ನಿಸಿದರು.



**ಅಂಬೇಡ್ಕರ್ ಭವನ ನಿರ್ಮಾಣಕ್ಕೆ ಅಡ್ಡಿ; ದಲಿತ ಸಂಘಟನೆಗಳ ಆಕ್ರೋಶ:**

ದಲಿತ ಸಂಘರ್ಷ ಸಮಿತಿಯ ಜಿಲ್ಲಾ ಸಂಘಟನಾ ಸಂಚಾಲಕ ಬಿ.ವಿ. ವೆಂಕಟರವಣ ಮಾತನಾಡಿ, "ಅನೇಕ ವರ್ಷಗಳಿಂದ ನೆನಗುದಿಗೆ ಬಿದ್ದಿದ್ದ ಡಾ. ಬಿ.ಆರ್. ಅಂಬೇಡ್ಕರ್ ಭವನ ನಿರ್ಮಾಣಕ್ಕೆ ಶಾಸಕರು ಸರ್ಕಾರದಿಂದ 15 ಕೋಟಿ ರೂ. ಮಂಜೂರು ಮಾಡಿಸಿದ್ದಾರೆ. 20 ಗುಂಟೆ ಜಮೀನಿನಲ್ಲಿ ಭವನ ನಿರ್ಮಾಣವಾಗುತ್ತಿರುವುದು ವಿರೋಧ ಪಕ್ಷದವರಿಗೆ ಹೊಟ್ಟೆಕಿಚ್ಚು ತಂದಿದೆ. ಅಂಬೇಡ್ಕರ್ ಮತ್ತು ಬಾಬು ಜಗಜೀವನರಾಮ್ ಜಯಂತಿ ಆಚರಣೆಯ ಸಂದರ್ಭದಲ್ಲೇ ಶಾಸಕರ ವಿರುದ್ಧ ಅಪಪ್ರಚಾರ ಮಾಡುತ್ತಿರುವುದು ದಲಿತರ ಒಗ್ಗಟ್ಟು ಮುರಿಯುವ ಸಂಚು," ಎಂದು ದೂರಿದರು. ರಾಜ್ಯದ ಬಹುತೇಕ ಶಾಸಕರು ಉದ್ಯಮಗಳನ್ನು ನಡೆಸುತ್ತಿದ್ದಾರೆ. ಆದರೆ, ಬಾಗೇಪಲ್ಲಿ ಶಾಸಕರು ತಮ್ಮ ಉದ್ಯಮಗಳ ಮೂಲಕ ಸಾವಿರಾರು ಜನರಿಗೆ ಉದ್ಯೋಗ ನೀಡಿ ಕುಟುಂಬಗಳನ್ನು ಪೋಷಿಸುತ್ತಿದ್ದಾರೆ. ಅವರ ವಿರುದ್ಧ ಸುಳ್ಳು ಆರೋಪಗಳನ್ನು ಮುಂದುವರಿಸಿದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ನಡೆಸಲಾಗುವುದು ಎಂದು ಮುಖಂಡರು ಎಚ್ಚರಿಸಿದರು.

ಜಿ.ಪಂ. ಮಾಜಿ ಅಧ್ಯಕ್ಷ ಎಂ.ವಿ. ಕೃಷ್ಣಪ್ಪ, ಉಪಾಧ್ಯಕ್ಷ ಎ.ವಿ. ಪೂಜಪ್ಪ, ತಾ.ಪಂ. ಮಾಜಿ ಅಧ್ಯಕ್ಷ ಕೆ.ಆರ್. ನರೇಂದ್ರಬಾಬು, ಕೆಡಿಎಸ್‌ಎಸ್ ಜಿಲ್ಲಾ ಸಂಚಾಲಕ ಎಂ.ಜಿ. ಕಿರಣ್ ಕುಮಾರ್ ಹಾಗೂ ದಲಿತ ಸಂಘರ್ಷ ಸಮಿತಿಯ ಮುಖಂಡರಾದ ಗುಟ್ಟುಪಾಳ್ಯ ಶ್ರೀನಿವಾಸ, ಜೀವಿಕಾ ನಾರಾಯಣಸ್ವಾಮಿ, ಶ್ರೀರಾಮನಾಯಕ ಸೇರಿದಂತೆ ಅನೇಕರು ಹಾಜರಿದ್ದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy